ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೬

# ಪಟ್ಟಿ – ೦೪

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಐದನೇ ಅಧಿವೇಶನ

ಸೋಮವಾರ, ದಿನಾಂಕ : ೧೦ನೇ ಮಾರ್ಚ್, ೨೦೨೫

---

## ಸಮೂಹ – I

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ರಾಜ್ಯದಲ್ಲಿ ಸಂಭವಿಸುತ್ತಿರುವ ಬಾಣಂತಿಯರ, ನವಜಾತ ಶಿಶುಗಳ ಮರಣದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೭ (೪೬೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರಣೀಕೃತವಾಗಿ ಸಂಭವಿಸುತ್ತಿರುವ ಬಾಣಂತಿಯರ ಹಾಗೂ ನವಜಾತ ಶಿಶುಗಳ ಸಾವುಗಳ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಬಾಣಂತಿಯರು ಹಾಗೂ ನವಜಾತ ಶಿಶುಗಳು ಮರಣ ಹೊಂದಿವೆ ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ರೀತಿಯ ಸರಣಿ ಸಾವುಗಳು ಸಂಭವಿಸಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು) ಹಾಗೂ ಬಾಣಂತಿಯರ, ಶಿಶುಗಳ ಸಾವುಗಳು ಸಂಭವಿಸುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡ ಅಗತ್ಯ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ರೀತಿಯ ಸಾವನ್ನಪ್ಪಿರುವ ಬಾಣಂತಿಯರಿಗೆ ಸರ್ಕಾರ ನೆರವು/ಪರಿಹಾರಗಳನ್ನು ನೀಡಿದೆಯೇ ; ನೀಡಿದ್ದಲ್ಲಿ, ಪರಿಹಾರದ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸಲಾಗುವುದೆ ?

## ರಾಜ್ಯದಲ್ಲಿ ವಿದ್ಯುತ್ ನಷ್ಟವನ್ನು ತಪ್ಪಿಸುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೮ (೪೬೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ದಿನಕ್ಕೆ ಸುಮಾರು ೧೨ ರಿಂದ ೧೪ ಗಂಟೆಗಳಷ್ಟು ವಿದ್ಯುತ್ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ವಿದ್ಯುತ್ ನಷ್ಟವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ನಿರಂತರ ಜ್ಯೋತಿ ಯೋಜನೆಯಡಿ ಗ್ರಾಮೀಣ ಪ್ರದೇಶಗಳಲ್ಲಿ ಅಳವಡಿಸಿದ ಬೀದಿ ದೀಪಗಳು ಹಗಲು ಸಮಯದಲ್ಲಿ ಉರಿದು ವಿದ್ಯುತ್ ನಷ್ಟದ ಜೊತೆ ಕೋಟಿ–ಕೋಟಿ ಹಣ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಹತೋಟಿಗೆ ತರಲು ಸರ್ಕಾರ ತೆಗೆದುಕೊಂಡ ಸೂಕ್ತ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ರೈತರ ಪಂಪ್‌ಸೆಟ್‌ಗಳಿಗೆ ನಿರಂತರವಾಗಿ ೭ ಗಂಟೆಗಳ ಕಾಲ ವಿದ್ಯುತ್ ನೀಡದಿರಲು ಕಾರಣ/ಲೋಪದೋಷಗಳಾವುವು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೯ (೪೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜನಸಂಖ್ಯೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಕೊರತೆ ಇರುವ ಸ್ಥಳಗಳಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳನ್ನು ತೆರೆಯುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ; ಇದ್ದಲ್ಲಿ, ಅದರ ಕುರಿತು ಸಂಪೂರ್ಣ ಮಾಹಿತಿ ಒದಗಿಸುವುದು ;

(ಆ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ ; ಸದರಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು; (ತಾಲ್ಲೂಕುವಾರು/ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಉತ್ತಮ ಶಿಕ್ಷಕರ ನೇಮಕಾತಿ ಅವಶ್ಯವಿದ್ದು, ಕೊರತೆ ಶಿಕ್ಷಕರನ್ನು ನೇಮಕಮಾಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳಾವುವು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮೦ (೪೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಒಟ್ಟು ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು) ಹಾಗೂ ಸದರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಅವಶ್ಯವಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಅವಶ್ಯವಿರುವ ಶಿಕ್ಷಕರ ಹುದ್ದೆಗಳಲ್ಲಿ ಈಗಾಗಲೇ ಭರ್ತಿ ಮಾಡಿರುವ ಹುದ್ದೆಗಳೆಷ್ಟು ಮತ್ತು ಭರ್ತಿ ಮಾಡಬೇಕಾಗಿರುವ ಹುದ್ದೆಗಳೆಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ರಾಜ್ಯದಲ್ಲಿ ಇರುವ ಒಟ್ಟು ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು; ಈ ಅತಿಥಿ ಶಿಕ್ಷಕರುಗಳಿಗೆ ನೀಡಲಾಗುತ್ತಿರುವ ಗೌರವಧನ ಎಷ್ಟು; (ಹುದ್ದೆವಾರು ವಿವರ ನೀಡುವುದು)

(ಈ) ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಎಷ್ಟೆಷ್ಟು ಜನ ಅತಿಥಿ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಡಯಾಲಿಸಿಸ್ ಕೇಂದ್ರಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮೧ ೪೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ (ಪರವಾನಗಿ ಪಡೆದಿರುವ) ಡಯಾಲಿಸಿಸ್ ಕೇಂದ್ರಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಇತ್ತೀಚೆಗೆ ಡಯಾಲಿಸಿಸ್‌ಗೆ ಒಳಗಾಗುವವರ ಸಂಖ್ಯೆ ಹೆಚ್ಚಾಗುತ್ತಿದ್ದು, ಹೊಸದಾಗಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ; ಹೌದಾದಲ್ಲಿ, ಎಲ್ಲೆಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರ ಚಿಂತಿಸಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಇದೇ ಮಾದರಿಯಲ್ಲಿ ಹೃದಯಕ್ಕೆ ಸಂಬಂಧಿಸಿದ ಕೇಂದ್ರಗಳನ್ನು ತೆರೆಯುವ ಆಲೋಚನೆ ಸರ್ಕಾರದ ಮುಂದಿದೆಯೇ ; (ಇದ್ದಲ್ಲಿ, ತೆಗೆದುಕೊಂಡ ಅಗತ್ಯ ಕ್ರಮಗಳೇನು)

(ಈ) ರಾಜ್ಯದಲ್ಲಿರುವ ಒಟ್ಟು ಜನೌಷಧಿ ಕೇಂದ್ರಗಳೆಷ್ಟು; ಹೊಸದಾಗಿ ಜನೌಷಧಿ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಅನ್ನ ಸುವಿದಾ ಯೋಜನೆ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೨ (೪೫೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅನ್ನ ಸುವಿದಾ ಮಹಾತ್ವಾಕಾಂಕ್ಷೆ ಯೋಜನೆ ಪ್ರಾರಂಭಗೊಳ್ಳದಿರಲು ಕಾರಣಗಳೇನು ;

(ಆ) ಈ ಯೋಜನೆಗೆ ತೊಡಕುಗಳಿದ್ದಲ್ಲಿ ಅದರ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಅಶಕ್ತರಿಗೆ ಅನುಕೂಲವಾಗಿರುವ ಈ ಯೋಜನೆಯನ್ನು ವ್ಯವಸ್ಥಿತ ರೀತಿಯಲ್ಲಿ ಜಾರಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಜ್ಯದ ಶಿಕ್ಷಣದ ಸ್ಥಿತಿಗತಿ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೩ (೪೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಶಿಕ್ಷಣದ ಸ್ಥಿತಿಗತಿ ಕುರಿತು ವಾರ್ಷಿಕ ವರದಿ (ಎಎಸ್ಇಆರ್)-೨೦೨೪ರಲ್ಲಿ ಮೂರನೇ ತರಗತಿಯ ಶೇಕಡ ೭.೧ರಷ್ಟು ಮಕ್ಕಳು ಅಕ್ಷರಗಳನ್ನು ಓದುವ ಸಾಮರ್ಥ್ಯ ಹೊಂದಿಲ್ಲದಿರುವುದು ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ ಗಣಿತದಲ್ಲಿ ಕೌಶಲ್ಯ ಹೊಂದಿರುವ ಮಕ್ಕಳ ಪ್ರಮಾಣ ಕಡಿಮೆ ಇರುವ ಬಗ್ಗೆ ವರದಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಕ್ಕಳ ಕಲಿಕಾಮಟ್ಟ ಸುಧಾರಣೆಗಾಗಿ ಹಾಗೂ ಪರಿಣಾಮಕಾರಿ ಕಲಿಕೆಗಾಗಿ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ;

(ಇ) ಶಿಕ್ಷಕರ ತರಬೇತಿಯನ್ನು ಹೆಚ್ಚಿಸುವುದು, ಬೋಧನಾ ಪರಿಕರಗಳ ಬಗ್ಗೆ ಕಾಲಕಾಲಕ್ಕೆ ಬದಲಾವಣೆ ತರುವಂತ ನಿಟ್ಟಿನಲ್ಲಿ ಅಗತ್ಯ ಮುಂಜಾಗ್ರತೆಗಳನ್ನು ಕೈಗೊಳ್ಳಲಾಗುವುದೆ ?

## ಆರೋಗ್ಯ ಇಲಾಖೆಯಲ್ಲಿ ಆಹಾರ ಸುರಕ್ಷತಾಧಿಕಾರಿಗಳ ಹಾಗೂ ನ್ಯೂನ್ಯತೆ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೪ (೪೫೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಇಲಾಖೆಯಲ್ಲಿ ಆಹಾರ ಸುರಕ್ಷಾತಾ ವಿಭಾಗದಲ್ಲಿ ಖಾಯಂ, ನಿಯೋಜನೆ ಮೇಲೆ ಹಾಗೂ ಅನ್ಯಪರ ಸೇವೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳ ಸಂಖ್ಯೆ ಎಷ್ಟು; (ಅಧಿಕಾರಿ/ನೌಕರರುಗಳ ಹೆಸರು, ಅವಧಿ ಸಹಿತ ಸಂಪೂರ್ಣ ವಿವರ ನೀಡುವುದು)

(ಆ) ನಿಗದಿಪಡಿಸಿರುವ ಆಹಾರ ಮಾದರಿಗಳನ್ನು ವಿಶ್ಲೇಷಣೆಗೆ ಕಳುಹಿಸಿಕೊಡುವಲ್ಲಿ ಹಾಗೂ ಗುರಿಮುಟ್ಟುವಲ್ಲಿ ವಿಫಲವಾಗಿರುವ ಕಳಪೆ ಸಾಧನೆ ತೋರಿರುವ ಆಹಾರ ಸುರಕ್ಷತಾಧಿಕಾರಿಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಆಹಾರ ಸುರಕ್ಷತಾಧಿಕಾರಿಗಳು, ಅಂಕಿತ ಅಧಿಕಾರಿಗಳು ಹಾಗೂ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇತರೆ ಎಲ್ಲಾ ಅಧಿಕಾರಿಗಳು/ನೌಕರರುಗಳ ಮೇಲೆ ದಾಖಲಾಗಿರುವ ದೂರುಗಳು ಯಾವುವು ;

(ಈ) ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಇಲಾಖೆಯಲ್ಲಿ ಒಂದೇ ಪ್ರದೇಶದಲ್ಲಿ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಆಹಾರ ಸುರಕ್ಷಾ ಅಧಿಕಾರಿಗಳನ್ನು ಹಾಗೂ ಅಂಕಿತ ಅಧಿಕಾರಿಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಬೇರೆ ಪ್ರದೇಶಗಳಿಗೆ ವರ್ಗಾಯಿಸಲು ಸರ್ಕಾರಕ್ಕೆ ತೊಂದರೆ ಇದೆಯೇ ; ಇಲ್ಲದಿದ್ದಲ್ಲಿ, ವರ್ಗಾವಣೆಗೊಳಿಸಲಾಗುವುದೇ ? (ವಿವರ ಒದಗಿಸುವುದು)

## ಕುವೆಂಪು ವಿಶ್ವವಿದ್ಯಾನಿಲಯದ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮೫ (೩೯೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕುವೆಂಪು ವಿಶ್ವವಿದ್ಯಾಲಯದ ದೂರ ಶಿಕ್ಷಣ ವಿಭಾಗಕ್ಕೆ ಅಧ್ಯಯನ ಕೇಂದ್ರಗಳಿಂದ ಬರಬೇಕಾದ ಬಾಕಿ ಶುಲ್ಕ ಎಷ್ಟು ;

(ಆ) ಬಾಕಿ ಶುಲ್ಕ ಪಾವತಿಸದಿರುವ ಅಧ್ಯಯನ ಕೇಂದ್ರಗಳ ಮೇಲೆ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿರುವ ವಿವಿಧ ವಿಶ್ವವಿದ್ಯಾಲಯಗಳಲ್ಲಿ ನೇಮಕಾತಿ ಹಾಗೂ ಸೇವಾ ಷರತ್ತುಗಳ ನಿಯಮಾವಳಿ (ಸಿ & ಆರ್ ರೂಲ್ಸ್) ಗಳನ್ನು

ರಚಿಸಿ, ಸರ್ಕಾರವು ನಿಗದಿಪಡಿಸಿರುವ ರೋಸ್ಟರ್ ಅನುಸಾರ ನೇಮಕಾತಿಗಳನ್ನು ಮಾಡಿಕೊಳ್ಳಲಾಗುತ್ತಿದೆಯೇ ? (ವಿಶ್ವವಿದ್ಯಾಲಯವಾರು ವಿವರ ನೀಡುವುದು)

## ಮಹಿಳಾ ಕಾಲೇಜುಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮೬ (೩೯೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಮಹಿಳಾ ಕಾಲೇಜುಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಮಹಿಳಾ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸ್ವಂತ ಕಟ್ಟಡ ಹೊಂದಿರದ ಮಹಿಳಾ ಕಾಲೇಜುಗಳಿಗೆ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದ ಪಾಲಿಟೆಕ್ನಿಕ್ ಕಾಲೇಜುಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮೭ (೩೯೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಪಾಲಿಟೆಕ್ನಿಕ್ ಕಾಲೇಜುಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಪಾಲಿಟೆಕ್ನಿಕ್ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸ್ವಂತ ಕಟ್ಟಡ ಹೊಂದಿರದ ಪಾಲಿಟೆಕ್ನಿಕ್ ಕಾಲೇಜುಗಳಿಗೆ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವೃತ್ತಿ ತರಬೇತಿ ಕೇಂದ್ರಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮೮ (೪೦೦) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯಲ್ಲಿ ವೃತ್ತಿ ತರಬೇತಿ ನೀಡುವ ಕೇಂದ್ರಗಳಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ವೃತ್ತಿ ತರಬೇತಿ ಕೇಂದ್ರಗಳಲ್ಲಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಕಳೆದ ಎರಡು ವರ್ಷಗಳಿಂದ ಸದರಿ ತರಬೇತಿ ಕೇಂದ್ರಗಳಲ್ಲಿ ತರಬೇತಿ ಪಡೆದ ಅಭ್ಯರ್ಥಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ಪ್ರವರ್ಗವಾರು ಮಾಹಿತಿ ನೀಡುವುದು)

(ಇ) ಈ ವೃತ್ತಿ ಕೇಂದ್ರಗಳಲ್ಲಿ ತರಬೇತಿ ನೀಡುತ್ತಿರುವ ಸಂಸ್ಥೆ/ ಏಜೆನ್ಸಿಗಳಾವುವು ? (ವಿವರ ನೀಡುವುದು)

## ಶಿಕ್ಷಣಾಧಿಕಾರಿಗಳಿಗೆ ಬಡ್ತಿ ಮತ್ತು ಹುದ್ದೆಗಳ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮೯ (೩೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ : ೧೦.೦೭.೨೦೨೪ ರಿಂದ ೧೮.೦೭.೨೦೨೪ ರಂದು ಶಿಕ್ಷಣಾಧಿಕಾರಿಗಳು / ತತ್ಸಮಾನ ಹುದ್ದೆಗಳಿಗೆ ನಿಯಮ-೩೨ರ ಅಡಿಯಲ್ಲಿ ಬಡ್ತಿ ನೀಡಲು ಇಡೀ ರಾಜ್ಯದಲ್ಲಿ ಒಟ್ಟು ಎಷ್ಟು ಅಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಗಿತ್ತು ; ಇದರಲ್ಲಿ ಇತರೆ ವೃಂದದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಅಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ದಿನಾಂಕ : ೩೧.೧೨.೨೦೨೪ ರವರೆಗೆ ಖಾಲಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು, ಅದರಲ್ಲಿ ಇತರೆ ವೃಂದದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ದಿನಾಂಕ: ೦೫.೧೦.೨೦೨೪ ಹಾಗೂ ೩೦.೦೧.೨೦೨೫ ಗಳಂದು ನಡೆದ ಡಿ.ಪಿ.ಸಿ ಸಭೆಗಳಲ್ಲಿ ನಿಯಮ-೩೨ಳ ಅಡಿಯಲ್ಲಿ ಬಡ್ತಿ ನೀಡಲು ತೀರ್ಮಾನಿಸಿದ ಅಧಿಕಾರಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಇತರೆ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿಯಿರುವ ಒಟ್ಟು ಹುದ್ದೆಗಳೆಷ್ಟು ; ಅವುಗಳಲ್ಲಿ ಇತರೆ ವೃಂದದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ಕಲ್ಯಾಣ ಕರ್ನಾಟಕ ಭಾಗದ ಅಧಿಕಾರಿಗಳಿಗೆ ಬಡ್ತಿಗಾಗಿ ಮೀಸಲಿರಿಸಿದ ಹುದೆಗಳು ಖಾಲಿಯಿದ್ದರು ದಿನಾಂಕ : ೦೫.೧೦.೨೦೨೪ ಹಾಗೂ ೩೦.೦೧.೨೦೨೫ ಗಳಂದು ನಡೆದ ಬಡ್ತಿಯ ಡಿ.ಪಿ.ಸಿ. ಸಭೆಗಳಲ್ಲಿ ಇತರ ವೃಂದ (ಆರ್.ಪಿ.ಸಿ)-೮೦ ಅಧಿಕಾರಿಗಳಿಗೆ ಹಾಗೂ ಕಲ್ಯಾಣ ಕರ್ನಾಟಕ (ಕೆಕೆ)ದ ಕೇವಲ

೦೨ ಅಧಿಕಾರಿಗಳಿಗೆ ಬಡ್ತಿ ನೀಡಲು ಕ್ರಮ ಕೈಗೊಂಡು, ಕಲ್ಯಾಣ ಕರ್ನಾಟಕ ಭಾಗಕ್ಕೆ ಹಾಗೂ ಅಧಿಕಾರಿಗಳಿಗೆ ಅನ್ಯಾಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದರೆ, ಅನ್ಯಾಯ ಸರಿಪಡಿಸಲು ಕೈಗೊಂಡಿರುವ ಕ್ರಮಗಳಾವುವು ?

## ಅತಿಥಿ ಶಿಕ್ಷಕರ ವೇತನ ತಾರತಮ್ಯದ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೦ (೩೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಕಲ್ಯಾಣ ಶಿಕ್ಷಣ ಸಂಸ್ಥೆಗಳು ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಅತಿಥಿ ಶಿಕ್ಷಕರಿಗೂ ಹಾಗೂ ರಾಜ್ಯ ಸರ್ಕಾರ ನಡೆಸುವ ಸರ್ಕಾರಿ ಶಾಲೆಗಳಲ್ಲಿನ ಅತಿಥಿ ಶಿಕ್ಷಕರಿಗೂ ನೀಡಲಾಗುತ್ತಿರುವ ವೇತನದಲ್ಲಿನ ತಾರತಮ್ಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ವೇತನ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ಕಲ್ಯಾಣ–ಕರ್ನಾಟಕ ಭಾಗದ ಶಾಲೆಗಳಲ್ಲಿನ ಶಿಕ್ಷಕರ ಕೊರತೆ ಬಗ್ಗೆ

**ಶ್ರೀ ಬಸವನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧ (೩೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ-ಕರ್ನಾಟಕದ ಭಾಗದ ಶಾಲೆಗಳಲ್ಲಿ ಮಂಜೂರಾಗಿರುವ ಶಿಕ್ಷಕರ ಹುದ್ದೆಗಳೆಷ್ಟು ; ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರೆಷ್ಟು ಹಾಗೂ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; ಹೊಸ ನೇಮಕಾತಿಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಕಲ್ಯಾಣ-ಕರ್ನಾಟಕ ಭಾಗದ ವಿದ್ಯಾರ್ಥಿಗಳ "ವಿಜ್ಞಾನ ವಿಭಾಗದ" ಅಭ್ಯಾಸಕ್ಕಾಗಿ ವಲಯಕ್ಕೊಂದು "ವಿಜ್ಞಾನ ಕಾಲೇಜ್"ನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಈ ಭಾಗದ ಶಾಲಾ ಕಾಲೇಜುಗಳಲ್ಲಿ ಮೂಲಸೌಕರ್ಯಗಳಾದ ಕುಡಿಯುವ ನೀರು, ಹೈಟೆಕ್ ಶೌಚಾಲಯ ಉತ್ತಮವಾದ ಗ್ರಂಥಾಲಯ ಹಾಗೂ ಸಾರಿಗೆ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ಕಾಲೇಜು ಕುರಿತು

**ಶ್ರೀ ಬಸವನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೯೨ (೩೨೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಂಧನೂರು ತಾಲ್ಲೂಕಿನಲ್ಲಿ ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ಕಾಲೇಜು ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ ?

## ರಾಜ್ಯದಲ್ಲಿರುವ ಗ್ರಂಥಾಲಯಗಳ ಮಾಹಿತಿ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೨೯೩ (೪೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಗ್ರಂಥಾಲಯಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ೦೨ ವರ್ಷಗಳಲ್ಲಿ ಈ ಗ್ರಂಥಾಲಯಗಳಿಗೆ ಎಷ್ಟು ಪುಸ್ತಕಗಳನ್ನು ಖರೀದಿಸಲಾಗಿದೆ ; (ಪುಸ್ತಕಗಳ ಹೆಸರು ಮತ್ತು ಅವುಗಳ ಪ್ರಮಾಣದೊಂದಿಗೆ ವಿವರ ಒದಗಿಸುವುದು)

(ಇ) ಗ್ರಂಥಾಲಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಗ್ರಂಥಾಲಯದಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ ಯಾವಾಗ ಭರ್ತಿ ಮಾಡಿಕೊಳ್ಳಲಾಗುವುದು ?

## ಅನುದಾನಿತ ಐಐಟಿ ತರಬೇತಿ ಕೇಂದ್ರಗಳ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೨೯೪ (೪೭೨) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಐಐಟಿ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಡಿಸೆಂಬರ್ ೨೦೨೪ ರವರೆಗೆ ಖಾಲಿ ಆಗಿರುವ ಅನುದಾನಿತ ಹುದ್ದೆಗಳ ಸಂಖ್ಯೆ ಎಷ್ಟು; (ಕಾಲೇಜುವಾರು ವಿಳಾಸ ಸಹಿತ ನೀಡುವುದು)

(ಆ) ಸದರಿ ಹುದ್ದೆಗಳನ್ನು ತುಂಬದೇ ಇರುವುದರಿಂದ ಸದರಿ ತರಬೇತಿ ಕೇಂದ್ರಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ೨೦೧೦ನೇ ಸಾಲಿನಿಂದ

೨೦೨೪ನೇ ಸಾಲಿನವರಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುವುದು ; (ವಿವರ ನೀಡುವುದು)

(ಇ) ಸದರಿ ತರಬೇತಿ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಿ ಕಾರ್ಯಭಾರದ ಕೊರತೆಯಾದಾಗ ಅನುದಾನಿತ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸ್ಥಳ ನಿಯುಕ್ತಿ/ ನಿಯೋಜನೆಗೊಳಿಸಲಾಗುತ್ತಿದೆಯೇ ;

(ಈ) ಕಾರ್ಯಭಾರದ ಕೊರತೆಯಾಗಿರುವ ನೌಕರರಿಗೆ ವೇತನಕ್ಕೆ ಸಮಸ್ಯೆಯಾಗದಂತೆ ಇತರೆ ಅನುದಾನಿತ ಸಂಸ್ಥೆಗಳಿಗೆ ನಿಯೋಜನೆ ಮಾಡಿ ಕಾರ್ಯಭಾರವನ್ನು ಸರಿದೂಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) ಮತ್ತು**

**ಶ್ರೀ ಕೆ.ವಿವೇಕಾನಂದ (ಶಿಕ್ಷಕರ ಕ್ಷೇತ್ರ) :-**

೨೯೫ (೩೬೩+೩೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವ್ಯಾಪ್ತಿಯಲ್ಲಿ ಬರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಎಲ್ಲಾ ವೃಂದದ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಲ್ಲಿ ಬಹಳ ವರ್ಷಗಳಿಂದ ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿದ್ದು, ಸರ್ಕಾರ ಈ ಖಾಲಿ ಇರುವ ಹುದ್ದೆಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವ ಖಾಸಗಿ ಆಸ್ಪತ್ರೆಗಳಲ್ಲಿನ ಧೋರಣೆ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೨೯೬ (೪೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಲವು ಖಾಸಗಿ ಆಸ್ಪತ್ರೆಗಳಲ್ಲಿ ನಡೆಯುತ್ತಿರುವ ಅಕ್ರಮದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಕೈಗೊಳ್ಳಲಿರುವ ನೀತಿ ನಿಯಮಗಳೇನು ;

(ಆ) ಹಲವು ಖಾಸಗಿ ಆಸ್ಪತ್ರೆಗಳು ಹೆಚ್ಚಿನ ಹಣ ಪಡೆಯುತ್ತಿದ್ದು ಮಧ್ಯಮ ವರ್ಗ ಹಾಗೂ ಬಡ ಜನರಿಗೆ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವುದು ದುಸ್ತರವಾಗಿರುವುದು ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಜನರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಸೂಕ್ತ ಮತ್ತು ಸರಿಯಾದ ರೀತಿಯಲ್ಲಿ ಶುಚಿತ್ವದಲ್ಲಿ ಚಿಕಿತ್ಸೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾಕೆ ಎಷ್ಟೋ ಸರ್ಕಾರಿ ಆಸ್ಪತ್ರೆಗಳಲ್ಲಿ ಶುಚಿತ್ವ ಕಾಪಾಡಿಕೊಳ್ಳಲು ಸಾಧ್ಯವಾಗುತ್ತಿಲ್ಲ ಮತ್ತು ಉನ್ನತ ಮಟ್ಟದ ಚಿಕಿತ್ಸೆಗಳು ದೊರೆಯದೇ ಖಾಸಗಿ ಆಸ್ಪತ್ರೆಗೆ ದೌಡಾಯಿಸುತ್ತಿದ್ದಾರೆ ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಯಲ್ಲಿ ರಾತ್ರಿ ಸಮಯಗಳಲ್ಲಿ ವೈದ್ಯರು, ನರ್ಸ್‌ಗಳ ಸಹಾಯ ದೊರಕದೇ ರೋಗಿಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ಹಲವು ದುರಾಡಳಿತರು ಸೇರಿ, ರೋಗಿಗಳಿಗೆ ಮೊದಲಿನಂತೆ ಸೌಕರ್ಯ ಸಿಗದೇ, ರೋಗಿಗಳು ಕಾಯ್ದು, ಚಿಕಿತ್ಸೆ ತೆಗೆದುಕೊಳ್ಳಲು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರ ಈ ಸಂಬಂಧ ಕೈಗೊಳ್ಳಲಿರುವ ಕ್ರಮಗಳೇನು ?

## ರಾಜ್ಯದ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ನೌಕರರ ವೈದ್ಯಕೀಯ ಮರುಪಾವತಿ ಕುರಿತು

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೨೯೭ (೩೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ, ಬೋಧಕೇತರ ನೌಕರ ಮತ್ತು ಇವರ ಅವಲಂಭಿತರ ವೈದ್ಯಕೀಯ ವೆಚ್ಚ ಮರುಪಾವತಿ ಮಾಡಲು ಸರ್ಕಾರ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಕಾರಣಗಳೇನು ;

(ಆ) ಈ ಬೋಧಕ/ಬೋಧಕೇತರ ನೌಕರರಿಗೆ ವೈದ್ಯಕೀಯ ವೆಚ್ಚವನ್ನು ಮರು ಪಾವತಿ ಮಾಡಲು ಎಷ್ಟು ಮಂದಿ ನೌಕರರಿಗೆ ಸರ್ಕಾರ ಇನ್ನು ಬಾಕಿ ಉಳಿಸಿಕೊಂಡಿದೆ ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರವು ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಬೋಧಕ/ ಬೋಧಕೇತರ ನೌಕರರ ಬಾಕಿ ವೈದ್ಯಕೀಯ ಮರು ಪಾವತಿಯ ಹಣವನ್ನು ಯಾವ ಕಾಲಮಿತಿಯಲ್ಲಿ ಪಾವತಿಸಲಾಗುವುದು ?

## ರಾಜ್ಯದ ಸರ್ಕಾರಿ ಶಾಲೆಗಳಿಗೆ ಮೂಲಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರ) :-**

೨೯೮ (೪೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಎಷ್ಟು ಶಾಲೆಗಳಿಗೆ ಶೌಚಾಲಯ, ಕುಡಿಯುವ ನೀರು ಮತ್ತು ಉಚಿತ ವಿದ್ಯುತ್ ಸೌಲಭ್ಯ ಕಲ್ಪಿಸಲಾಗಿದೆ ;

(ಇ) ಕಳೆದ ಐದು ವರ್ಷಗಳಲ್ಲಿ ಶೌಚಾಲಯ, ಕುಡಿಯುವ ನೀರು ಮತ್ತು ಉಚಿತ ವಿದ್ಯುತ್ ಸೌಲಭ್ಯಕ್ಕಾಗಿ ಸರ್ಕಾರದಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ವರ್ಷವಾರು ವಿವರ ನೀಡುವುದು)

(ಈ) ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಿಗೆ ಯಾವ ಕಾಲಮಿತಿಯಲ್ಲಿ ಮೂಲಸೌಲಭ್ಯ ಕಲ್ಪಿಸಲಾಗುವುದು ಹಾಗೂ ಇದಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಖಾಸಗಿ ಆಸ್ಪತ್ರೆಗಳು ಎಂಪನೆಲ್ ನವೀಕರಣ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೨೯೯ (೩೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಆಯುಷ್ಮಾನ್ ಭಾರತ್ ಮತ್ತು ಇ.ಎಸ್.ಐ. ಯೋಜನೆಗಳ ಎಂಪನೆಲ್ ಆಗಿರುವ ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ಖಾಸಗಿ ಆಸ್ಪತ್ರೆಗಳಿಗೆ ಪ್ರಸ್ತುತ ಫೈರ್ ಪರ್ಮಿಷನ್ ತೆಗೆದುಕೊಳ್ಳಲು ಇರುವ ಮಾನದಂಡಗಳೇನು ;

(ಇ) ಹಲವಾರು ವರ್ಷಗಳಿಂದ ಆಯುಷ್ಮಾನ್ ಭಾರತ್ ಮತ್ತು ಇ.ಎಸ್.ಐ. ಯೋಜನೆಗಳ ಎಂಪನೆಲ್ ಆಗಿರುವ ಖಾಸಗಿ ಆಸ್ಪತ್ರೆಗಳು ಎಂಪನೆಲ್ ನವೀಕರಣದ ಸಂದರ್ಭದಲ್ಲಿ ಫೈರ್ ಪರ್ಮಿಷನ್ ಕಡ್ಡಾಯಗೊಳಿಸಿರುವುದರಿಂದ ತೊಂದರೆಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಆಸ್ಪತ್ರೆಗಳಲ್ಲಿ ಫೈರ್ ಪರ್ಮಿಷನ್ ಕಡ್ಡಾಯಗೊಳಿಸಿರುವುದರಿಂದ ಮಾನದಂಡಗಳನ್ವಯ ಖಾಸಗಿ ಆಸ್ಪತ್ರೆ ಮತ್ತು ಸರ್ಕಾರಿ ಆಸ್ಪತ್ರೆಗಳಿಗೆ ವ್ಯತ್ಯಾಸವೇನಾದರು ಇದೆಯೇ ?

## ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೩೦೦ (೪೩೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೧೦ ವರ್ಷಗಳಲ್ಲಿ ಘೋಷಣೆಯಾಗಿರುವ ಮತ್ತು ಪ್ರಾರಂಭಿಸಲಾಗಿರುವ ವಿಶ್ವವಿದ್ಯಾಲಯಗಳೆಷ್ಟು ; (ಹೆಸರು ಮತ್ತು ಪ್ರಾರಂಭವಾಗಿರುವ ವರ್ಷವಾರು ವಿವರ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯಗಳಿಗೆ ಒದಗಿಸಿರುವ ಅನುದಾನವೆಷ್ಟು ; (ವರ್ಷವಾರು–ವಿಶ್ವವಿದ್ಯಾಲಯವಾರು ತಾತ್ಕಾಲಿಕ – ಖಾಯಂ ಖಾಲಿ ಹುದ್ದೆವಾರು ವಿವರ ಸಲ್ಲಿಸುವುದು) ಸದರಿ ವಿಶ್ವವಿದ್ಯಾಲಯಗಳಲ್ಲಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಹೊಸದಾಗಿ ಪ್ರಾರಂಭಿಸಲಾದ ವಿಶ್ವವಿದ್ಯಾಲಯಗಳಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ನೌಕರರನ್ನೂ ಖಾಯಂಗೊಳಿಸುವ ಮತ್ತು ಖಾಯಂ ಹುದ್ದೆ ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ನೇಮಕಾತಿ ಮಾಡಿಕೊಳ್ಳಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಅರಣ್ಯವನ್ನು ಕಾಡ್ಗಿಚ್ಚಿನಿಂದ ಸಂರಕ್ಷಿಸಲು ತೆಗೆದುಕೊಳ್ಳಬೇಕಾಗಿರುವ ಕ್ರಮದ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೩೦೧ (೪೩೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಂಬರುವ ಬೇಸಿಗೆಯಲ್ಲಿ ಕಾಡ್ಗಿಚ್ಚಿನಿಂದ ಅರಣ್ಯವನ್ನು ಮತ್ತು ವನ್ಯಜೀವಿಗಳನ್ನು ಸಂರಕ್ಷಿಸಲು ಸರ್ಕಾರ ಕೈಗೊಂಡಿರುವ ಮುಂಜಾಗ್ರತ ಕ್ರಮಗಳೇನು ;

(ಆ) ಖಾಯಂ ಹಾಗೂ ತಾತ್ಕಾಲಿಕವಾಗಿ ಎಷ್ಟು ಬೆಂಕಿ ರಕ್ಷಣ ವೀಕ್ಷಕರನ್ನು ನೇಮಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ತಾತ್ಕಾಲಿಕವಾಗಿ ಎಷ್ಟು ಬೆಂಕಿ ರಕ್ಷಣ ಕ್ಯಾಂಪ್‌ಗಳನ್ನು ಪ್ರಾರಂಭಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಕಾಡ್ಗಿಚ್ಚಿನ ಸಂದರ್ಭದಲ್ಲಿ ಕಾಡ್ಗಿಚ್ಚನ್ನು ನಂದಿಸಲು ಅಗ್ನಿಶಾಮಕ ಇಲಾಖೆಯೊಂದಿಗೆ ಸಂವಹನ ನೆಡೆಸಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೩೦೨ (೪೩೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯುಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ಅವು ಯಾವುವು ;

(ಆ) ಪ್ರಸ್ತುತ ಎಷ್ಟು ವಿಶ್ವವಿದ್ಯಾಲಯಗಳನ್ನು (ಯಾವ ಯಾವ ವಿಶ್ವವಿದ್ಯಾಲಯಗಳು) ಮುಚ್ಚಬೇಕು ಎನ್ನುವ ಪ್ರಸ್ತಾವಾನೆ ಸರ್ಕಾರದ ಮುಂದಿದೆ ; ವಿಶ್ವವಿದ್ಯಾಲಯಗಳನ್ನು ಮುಚ್ಚಲು ಗೊತ್ತುಪಡಿಸಿರುವ ಕಾರಣಗಳೇನು ;

(ಇ) ಈ ವಿಶ್ವವಿದ್ಯಾಲಯಗಳ ಕುರಿತು ಅಧ್ಯಯನ ಮಾಡಲು ಸಮಿತಿ ರಚಿಸಲಾಗಿತ್ತೇ ; ರಚಿಸಿದಲ್ಲಿ ಸಮಿತಿಯು ಸದರಿ ವಿಶ್ವವಿದ್ಯಾಲಯಗಳನ್ನು ಮುಚ್ಚಲು ನೀಡಿರುವ ಶಿಫಾರಸ್ಸು/ ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ವಿಶ್ವವಿದ್ಯಾಲಯ ೨೦೦೦ರ ಕಾಯ್ದೆ ಅನ್ವಯ ವಿಶ್ವವಿದ್ಯಾಲಯಗಳ ಅವಲೋಕನವನ್ನು ಪ್ರತಿ ಐದು ವರ್ಷಗಳಿಗೊಮ್ಮೆ ಮಾಡುವುದಕ್ಕೆ ಇರುವ ನಿಯಮಗಳೇನು ;

(ಉ) ಈ ಕಾಯ್ದೆಯನ್ವಯ ಅವಲೋಕನ ಕಾರ್ಯವು ನಡೆಯುತ್ತಿದೆಯೇ ; ನಡೆದಿದ್ದಲ್ಲಿ ಯಾವಾಗ, ಯಾವ ಯಾವ ವಿಶ್ವವಿದ್ಯಾಲಯಗಳ ಅವಲೋಕನವನ್ನು ಮಾಡಲಾಗಿದೆ ?

## ಅರಣ್ಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೩೦೩ (೪೩೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಈಗಾಗಲೇ ಮಂಜೂರಾಗಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; (ಎಲ್ಲಾ ವೃಂದದ ಸಂಪೂರ್ಣ ವಿವರ ನೀಡುವುದು)

(ಆ) ಅರಣ್ಯ ಸಿಬ್ಬಂದಿಗಳಿಗೆ ಅರಣ್ಯದಲ್ಲಿ ಕಾರ್ಯನಿರ್ವಹಿಸಲು ಸಮರ್ಪಕವಾದ/ಉಪಕರಣಗಳು/ಸೌಲಭ್ಯಗಳನ್ನು ಒದಗಿಸಲಾಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ವನ್ಯಜೀವಿ ಅರಣ್ಯ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ; ಮಂಜೂರಾಗಿರುವ ವೈದ್ಯರ ಸಂಖ್ಯೆ ಎಷ್ಟು ; ಪ್ರಸ್ತುತ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಆಹಾರ ಸುರಕ್ಷತಾ ಪ್ರಾಧಿಕಾರದ ಅಧಿಕಾರಿಗಳ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೩೦೪ (೩೪೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಹಾರ ಸುರಕ್ಷತಾ ಪ್ರಾಧಿಕಾರವು ಅಸ್ತಿತ್ವಕ್ಕೆ ಬಂದು ಎಷ್ಟು ವರ್ಷಗಳಾಗಿರುತ್ತದೆ ; ಈ ಪ್ರಾಧಿಕಾರ ರಚನೆಯಾಗಲು ಹಾಗೂ ಯಾವ ಉದ್ದೇಶದಿಂದ ಪ್ರಾರಂಭಗೊಂಡಿರುತ್ತದೆ ;

(ಆ) ಪ್ರಸ್ತುತ ಈ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಖಾಯಂ ನೌಕರರ ಹಾಗೂ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ಒದಗಿಸುವುದು)

(ಇ) ಪ್ರಾಧಿಕಾರದಲ್ಲಿ ತಜ್ಞ ವೈದ್ಯರಿಗಿಂತ ಕಿರಿಯ ಶ್ರೇಣಿಯ ಸಾಮಾನ್ಯ ಅಧಿಕಾರಿಗಳದ್ದೇ ಕಾರುಬಾರಾಗಿರುವುದು ನಿಜವೇ ; ರಾಜ್ಯದಲ್ಲಿ ಆಹಾರ ಸುರಕ್ಷತಾ ಪ್ರಾಧಿಕಾರ ಎಷ್ಟು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಹಾಗೂ ಕೇಂದ್ರ ಕಛೇರಿ ಎಲ್ಲಿದೆ ;

(ಈ) ಪ್ರಮುಖ ಹುದ್ದೆಯಲ್ಲಿ ಪ್ರಮುಖ ವಿಷಯುಗಳಲ್ಲಿ ಪದವಿ, ಸ್ನಾತಕೋತ್ತರ ಪದವಿಗಳನ್ನು ಪಡೆದ 'ಬಿ' ಶ್ರೇಣಿಯ ಹುದ್ದೆವಾರು ಇರಬೇಕೆಂಬ ನಿಯಮ ಇದೆಯೇ ಹಾಗಿದ್ದಲ್ಲಿ ಇತರ ವಿಷಯಗಳಲ್ಲಿ ಪದವಿ ಪಡೆದ 'ಸಿ' ಕಿರಿಯ ಶ್ರೇಣಿಯ ಸಿಬ್ಬಂದಿಗಳೇ ಜಿಲ್ಲಾ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಪ್ರಾಧಿಕಾರ ಪ್ರಾರಂಭಗೊಂಡ ದಿನದಿಂದಲೂ ಇಲ್ಲಿಯವರೆಗೂ ಒಬ್ಬ ಸಿಬ್ಬಂದಿಯನ್ನೂ ನೇಮಕ ಮಾಡಿಲ್ಲ ಎಂಬುದು ನಿಜವೇ ; ಹಾಗಿದ್ದಲ್ಲಿ ಪ್ರಾಧಿಕಾರದಲ್ಲಿ ಎಷ್ಟು ವರ್ಷಗಳಿಂದ ಎರವಲು ಸೇವೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ಕೆಸಿಎಸ್ಆರ್ ನಿಯಮದ ಪ್ರಕಾರ ಕನಿಷ್ಟ ೫ ವರ್ಷಗಳವರೆಗೆ ಕಾರ್ಯನಿರ್ವಹಿಸುತ್ತಿದ್ದಾರೆಯೇ ? (ವಿವರಿಸುವುದು)

## ಗ್ರಾಹಕರಿಗೆ ತೂಕ ಮತ್ತು ಅಳತೆಯಲ್ಲಿ ವಂಚನೆಯಾಗುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೫ (೩೪೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾಹಕರಿಗೆ ತೂಕ ಮತ್ತು ಅಳತೆಯಲ್ಲಿ ವಂಚಿಸುವ ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾನೂನು ಮಾಪನಶಾಸ್ತ್ರ ಇಲಾಖೆಯಲ್ಲಿ ಕಳೆದ ೫ ವರ್ಷದಿಂದ ಇಲ್ಲಿಯವರೆಗೂ ಎಷ್ಟು ಸ್ಥಳಗಳಲ್ಲಿ ದಾಳಿ ನಡೆಸಿ, ತಪಾಸಣೆ ಮಾಡಿ ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ ಹಾಗೂ ದಂಡದ ರೂಪದಲ್ಲಿ ಸರ್ಕಾರಕ್ಕೆ ಸಂದಾಯವಾಗಿರುವ ಹಣವೆಷ್ಟು ;

(ಇ) ತೂಕ ಮತ್ತು ಅಳತೆಯಲ್ಲಿ ಮೋಸವಾಗುತ್ತಿರುವ ಬಗ್ಗೆ ಕಳೆದ ೪ ವರ್ಷದಿಂದ ಸಾರ್ವಜನಿಕರಿಂದ ಬಂದಿರುವ ದೂರುಗಳ ಸಂಖ್ಯೆ ಎಷ್ಟು ; ಗ್ರಾಹಕರಿಗೆ ಮೋಸ ಮಾಡುವ ವ್ಯಾಪಾರಿಗಳ ವಿರುದ್ಧ ಕ್ರಮಕೈಗೊಳ್ಳಲು ಇಲಾಖೆಯಲ್ಲಿ ಕಠಿಣ ನಿಯಮಗಳನ್ನು ರೂಪಿಸಲಾಗಿದೆಯೇ ;

(ಈ) ಗ್ರಾಹಕರ ತೂಕ ಮತ್ತು ಅಳತೆಯುಲ್ಲಿ ಇಲಾಖೆಯು ನಿಯಮದಡಿಯಲ್ಲಿ ಯಾವ ಯಾವ ಪ್ರಕರಣಗಳನ್ನು ಹಿಡಿಯಲು ಸರ್ಕಾರದಿಂದ ಅನುಮತಿ ನೀಡಲಾಗಿದೆ ?

## ಕಳಪೆ ಗುಣಮಟ್ಟದ ಉಪಕರಣಗಳನ್ನು ಸರಬರಾಜು ಮಾಡಿರುವ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೬ (೩೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಗ್ರಾಂಥಾಲಯ ಇಲಾಖೆಗೆ ಕಳಪೆ ಗುಣಮಟ್ಟದ ಕಂಪ್ಯೂಟರ್, ಜೆರಾಕ್ಸ್‌ಯಂತ್ರ, ಸಿಸಿಟಿವಿ ಕ್ಯಾಮರಾಗಳು ಸೇರಿದಂತೆ ಎಲೆಕ್ಟ್ರಾನಿಕ್ ಉಪಕರಣಗಳು ಪೂರೈಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಾಮಗ್ರಿಗಳನ್ನು ಪೂರೈಕೆ ಮಾಡುತ್ತಿರುವ ಸಂಸ್ಥೆಗಳ ಹೆಸರುಗಳ ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರದ ಪೂರ್ವ, ಪಶ್ಚಿಮ, ದಕ್ಷಿಣ, ಉತ್ತರ ಮತ್ತು ಕೇಂದ್ರ ವಲಯದ ಗ್ರಂಥಾಲಯುಗಳ ಅಧಿಕಾರಿ/ಸಿಬ್ಬಂದಿ 2009–10 ರಿಂದ 2019–20ರವರೆಗೆ ಕೆಟಿಪಿಪಿ ನಿಯಮಗಳನ್ನು ಉಲ್ಲಂಘಿಸಿ ಎಲೆಕ್ಟ್ರಾನಿಕ್ ಸಾಮಗ್ರಿಗಳನ್ನು ಖರೀದಿಸಿರುವುದು ನಿಜವೇ ;

(ಇ) ಹಾಗಿದ್ದಲ್ಲಿ ಸರ್ಕಾರ ಇದುವರೆಗೂ ತೆಗೆದುಕೊಂಡ ಕ್ರಮವೇನು ; ಎಷ್ಟು ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ತೆಗೆದುಕೊಳ್ಳಲಾಗಿದೆ ;

(ಈ) ಬ್ಲಾಕ್‌ಲಿಸ್ಟ್ ಸೇರಬೇಕಾದ ಸಂಸ್ಥೆಯಿಂದ ಸಾಮಗ್ರಿಗಳನ್ನು ಖರೀದಿಸಲಾಗಿದೆಯೇ ; ಹಾಗಿದ್ದಲ್ಲಿ, ಬ್ಲಾಕ್ ಲಿಸ್ಟ್‌ನಲ್ಲಿರುವ ಸಂಸ್ಥೆಗಳ ಹೆಸರುಗಳಾವುವು ; (ಪೂರ್ಣ ವಿವರ ನೀಡುವುದು)

(ಉ) ರಾಜ್ಯದಲ್ಲಿರುವ ಒಟ್ಟು ಗ್ರಂಥಾಲಯಗಳ ಸಂಖ್ಯೆ ಎಷ್ಟು ; ಎಷ್ಟು ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ;

(ಊ) ಬೆಂಗಳೂರು ನಗರವಲ್ಲದೇ ಬೇರೆ ಬೇರೆ ಜಿಲ್ಲೆಗಳಲ್ಲಿ ಇದೇ ರೀತಿಯ ಅಕ್ರಮ ನಡೆದಿದೆಯೇ ; ಸಾಮಗ್ರಿಗಳನ್ನು ಖರೀದಿಸಲು ಇರುವ ನೀತಿ ನಿಯಮಗಳೇನು ?

## ಶಿಕ್ಷಣ ಹಕ್ಕು ಕಾಯಿದೆಯಡಿ ಸುಳ್ಳು ಲೆಕ್ಕ ನೀಡಿ ಹಣ ಪಡೆಯುತ್ತಿರುವ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೭ (೩೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷದ ಅವಧಿಯಲ್ಲಿ ಶಿಕ್ಷಣ ಹಕ್ಕು ಕಾಯಿದೆ (ಆರ್‌ಟಿಐ)ಯಡಿ ಎಷ್ಟು ವಿದ್ಯಾರ್ಥಿಗಳು ದಾಖಲಾಗಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷದ ಅವಧಿಯಲ್ಲಿ ಖಾಸಗಿ ಶಾಲೆಗಳಿಗೆ ಎಷ್ಟು ಹಣವನ್ನು ಸರ್ಕಾರದ ವತಿಯಿಂದ ಮರುಪಾವತಿ ಮಾಡಲಾಗಿದೆ ; (ಶಾಲೆಗಳ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಇ) ಭೌತಿಕವಾಗಿ ಶಾಲೆಗಳಲ್ಲಿ ಹಾಜರಾಗದೇ ಇದ್ದರೂ ಕೇವಲ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ತೋರಿಸಿ ಶಿಕ್ಷಣ ಇಲಾಖೆಯಿಂದ ಖಾಸಗಿ ಶಾಲಾ ಸಂಸ್ಥೆಗಳು ಸುಳ್ಳು ಲೆಕ್ಕ ನೀಡಿ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಯಾವ ಯಾವ ಶಾಲೆಗಳೆಂಬ ವಿವರಗಳನ್ನು ಒದಗಿಸುವುದು)

(ಈ) ಶಾಲೆಯವರು ನೀಡಿದ ದಾಖಲಾತಿಯ ನೈಜತೆಯನ್ನು ಪರಿಶೀಲಿಸದೆ ಈ ಶಾಲೆಗೆ ಆರ್‌ಟಿಇ ನೋಡಲ್ ಅಧಿಕಾರಿ ಶೇ.25ರಷ್ಟು ಸೀಟುಗಳನ್ನು ನಿಯಮ ಬಾಹಿರವಾಗಿ ಹಂಚಿಕೆ ಮಾಡಿರುವುದು ಬೆಳಕಿಗೆ ಬಂದಿದೆಯೇ ; ಹಾಗಿದ್ದರೆ, ಈ ವಂಚನೆಯಲ್ಲಿ ಭಾಗಿಯಾಗಿರುವ ಅಧಿಕಾರಿಗಳ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ? (ಪೂರ್ಣ ವಿವರಗಳನ್ನು ನೀಡುವುದು)

## ರಾಜ್ಯದ ವೈದ್ಯಕೀಯ ಶಿಕ್ಷಣ ಇಲಾಖೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೮ (೪೬೨೫) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರಗಳನ್ನು ಒದಗಿಸುವುದು ; (ಸಂಖ್ಯೆ ಹಾಗೂ ಜಿಲ್ಲಾವಾರು ಕಾಲೇಜಿನ ವೈದ್ಯರುಗಳ ವಿವರ ಒದಗಿಸುವುದು)

(ಆ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ, ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಖಾಲಿ ಹುದ್ದೆಗಳ ಸಂಖ್ಯೆ ವೃಂದವಾರು, ಇಲಾಖಾವಾರು ವಿವರ ನೀಡುವುದು) ಹಾಗೂ ಎಷ್ಟು ಸಮಯದಿಂದ ಈ ಹುದ್ದೆಗಳು ಖಾಲಿ ಇರುತ್ತವೆ ; ಈ ಹಿಂದೆ ಯಾವ ಅವಧಿಯಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲಾಗಿತ್ತು ;

(ಇ) ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರತಿದಿನ OPD/IPD ಸೇವೆ ಪಡೆಯುತ್ತಿರುವ ರೋಗಿಗಳ ಅಂದಾಜು ಸಂಖ್ಯೆ ಎಷ್ಟು; ಖಾಸಗಿ ಆಸ್ಪತ್ರೆಗಳಲ್ಲಿ ಪ್ರತಿದಿನ OPD/IPD ಸೇವೆ ಪಡೆಯುತ್ತಿರುವ ರೋಗಿಗಳ ಅಂದಾಜು ಸಂಖ್ಯೆ ಎಷ್ಟು ;

(ಈ) ಸದರಿ ಹುದ್ದೆಗಳನ್ನು ಭರ್ತಿ ಮಾಡದಿರುವುದರಿಂದ ಸಾಮಾನ್ಯ ಜನರಿಗೆ, ರೋಗಿಗಳಿಗೆ ಆಗಿರುವ ತೊಂದರೆಗಳೇನು ; ಇವುಗಳ ಪರಿಹಾರಕ್ಕೆ ಕೈಗೊಂಡ ಕ್ರಮಗಳೇನು ;

(ಉ) ರಾಜ್ಯದ ಎಷ್ಟು ಸರ್ಕಾರಿ ವೈದ್ಯಾಧಿಕಾರಿಗಳು ಖಾಸಗಿಯಾಗಿ ವಿವಿದೆಡೆ ಬೇರೆ ಬೇರೆ ಖಾಸಗಿ ಆಸ್ಪತ್ರೆಯಲ್ಲಿ **Practice** ಮಾಡುತ್ತಿದ್ದಾರೆ ; ಅವರ ಹೆಸರು, ಪದನಾಮ, ಆಸ್ಪತ್ರೆ ವಿವರಗಳನ್ನು ನೀಡುವುದು ; ಇದರ ನಿಯಂತ್ರಣಕ್ಕೆ ಇಲಾಖೆ ವಹಿಸಿದ ಮತ್ತು ಖಾಸಗಿಯಾಗಿ ಸೇವೆ ಸಲ್ಲಿಸುತ್ತಿರುವ ವೈದ್ಯರ ವಿರುದ್ಧ ವಹಿಸಲಾದ ಕ್ರಮಗಳು ಏನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ ಮತ್ತು ವರ್ಗಗಳ ರೈತರಿಗೆ ಸೌರಶಕ್ತಿ ಸೌಲಭ್ಯ ನೀಡುವ ಬಗ್ಗೆ

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೯ (೪೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರೈತರುಗಳು ವಿದ್ಯುತ್ ಕೊರತೆಯ ಕಾರಣದಿಂದ ನೀರಾವರಿ ಸಮಸ್ಯೆಗೆ ಒಳಗಾಗಿ ತೊಂದರೆಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವರ್ಗಗಳ ರೈತರಿಗೆ ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸಿ ಅನುಕೂಲ ಮಾಡಿಕೊಡಲು ಸರ್ಕಾರ ಯೋಜನೆ ಹಾಕಿಕೊಂಡಿದೆಯೇ ;

(ಇ) ಕೊಪ್ಪಳ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಜನರಿಗೆ ಈ ಸೌರಶಕ್ತಿ ಸೌಲಭ್ಯವನ್ನು ಯಾವ ಮಿತಿಯೊಳಗೆ ಒದಗಿಸಲಾಗುವುದು ?

## ರಾಜ್ಯದಲ್ಲಿ ಉತ್ಪಾದಿಸುತ್ತಿರುವ ಸೋಲಾರ್ ವಿದ್ಯತ್‌ಚ್ಛಕ್ತಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧೦ (೩೩೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಉತ್ಪಾದಿಸುತ್ತಿರುವ ಸೋಲಾರ್ ವಿದ್ಯುತ್‌ಚ್ಛಕ್ತಿ ಪ್ರಮಾಣ ಎಷ್ಟು ; ಯಾವ ಯಾವ ಮೂಲಗಳಿಂದ ಉತ್ಪಾದಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಖಾಸಗಿಯವರು ಉತ್ಪಾದಿಸುತ್ತಿರುವ ಸೋಲಾರ್ ವಿದ್ಯುತ್‌ಚ್ಛಕ್ತಿಗೆ ಪ್ರತಿ ಯೂನಿಟ್‌ಗೆ ನೀಡುವ ದರ ಎಷ್ಟು ; ಇಲಾಖೆಯ ಪ್ರಕಾರ ತಗಲುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಸೋಲಾರ್ ವಿದ್ಯುತ್‌ಚ್ಛಕ್ತಿ ಉತ್ಪಾದಿಸಲು ಪ್ರಸ್ತುತ ಇರುವ ನಿಯಮಗಳೇನು ; ಇತ್ತೀಚೆಗೆ ಇಲಾಖೆಯು ನಿಯಮವನ್ನು ಬದಲಾವಣೆ ಮಾಡಿ ದರ ಕಡಿಮೆ ಮಾಡಿರುವುದರಿಂದ ಸೋಲಾರ್ ವಿದ್ಯುಚ್ಛಕ್ತಿ ಉತ್ಪಾದಿಸಲು ಖಾಸಗಿಯುವರು ಹಿಂದೇಟು ಹಾಕುತ್ತಿರುವದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸೋಲಾರ್ ರೂಫ್‌ಟಾಪ್ ಯೋಜನೆಗೆ ನೀಡುತ್ತಿರುವ ಸಬ್ಸಿಡಿ ಮತ್ತು ಖರೀದಿಸುವ ದರದಲ್ಲಿ ಬದಲಾವಣೆಗಳನ್ನು ತಂದಿರುವುದರಿಂದ ರೂಫ್ ಟಾಪ್ ಸೋಲಾರ್ ವಿದ್ಯುತ್‌ಚ್ಛಕ್ತಿ ಉತ್ಪಾದನೆ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಪೂರ್ಣ ಪ್ರಮಾಣದ ಸೋಲಾರ್ ವಿದ್ಯುತ್‌ಚ್ಛಕ್ತಿ ನೀತಿಯನ್ನು ಜಾರಿಗೆ ತರಲು ಹಾಗೂ ಪ್ರೋತ್ಸಾಹಿಸಲು

ಇಲಾಖೆಯಲ್ಲಿ ಪ್ರತ್ಯೇಕವಾದ ವಿಭಾಗ ತೆರೆಯಲಾಗಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಊ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸೋಲಾರ್ ವಿದ್ಯುಚ್ಛಕ್ತಿ ಉತ್ಪಾದಿಸಲು ಯಾವ ಯಾವ ರೀತಿಯ ಪ್ರೋತ್ಸಾಹಗಳನ್ನು ನೀಡುತ್ತಿದೆ ; ಈ ಬಗ್ಗೆ ಸಾಧಿಸಿದ ಪ್ರಗತಿ ಏನು ; ಮಂದಿರುವ ಯೋಜನೆಗಳಾವುವು ? (ವಿವರ ನೀಡುವುದು)

## ಮಂಗಳೂರು ವಿಶ್ವವಿದ್ಯಾನಿಲಯ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧೧ (೩೩೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ವಿಶ್ವವಿದ್ಯಾನಿಲಯ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದು, ಇದನ್ನು ಸರಿಪಡಿಸಲು ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಈ ವಿಶ್ವವಿದ್ಯಾನಿಲಯ ನಡೆಸಲ್ಪಡುವ ಕಾಲೇಜುಗಳಿಂದ ವಿಶ್ವವಿದ್ಯಾನಿಲಯಕ್ಕೆ ಅನಾವಶ್ಯಕವಾಗಿ ಆರ್ಥಿಕ ಹೊರೆ ಆಗುತ್ತಿದ್ದು ಪ್ರಥಮ ದರ್ಜೆ ಕಾಲೇಜುಗಳನ್ನು ಸರ್ಕಾರ ನಡೆಸುವುದು ಸೂಕ್ತ ಎಂಬ ಸಲಹೆ ಇದ್ದು ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮವೇನು ;

(ಇ) ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯಲ್ಲಿ ನಿರ್ಮಾಣಗೊಂಡಿರುವ ಬೆಳಪು ಸಂಶೋಧನ ಕೇಂದ್ರ ಸಂಪೂರ್ಣವಾಗಿ ನಿರ್ಲಕ್ಷಿಸಲ್ಪಟ್ಟಿದ್ದು ಅವ್ಯವಹಾರದ ಗೂಡಾಗಿದೆ ಎಂಬ ಸುದ್ದಿ ಹರಡುತ್ತಿದ್ದು, ಇದರ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಬೆಳಪು ಸಂಶೋಧನ ಕೇಂದ್ರವು ಇನ್ನೂ ಕಾರ್ಯನಿರ್ವಹಿಸದೇ ಇರಲು ಕಾರಣಗಳೇನು ; ಇದಕ್ಕಾಗಿ ಮಾಡಿದ ಖರ್ಚು ಎಷ್ಟು ; ಯಾವ ಉದ್ದೇಶಕ್ಕಾಗಿ ಈ ಕೇಂದ್ರವನ್ನು ಪ್ರಾರಂಭಿಸಲಾಗಿದೆ ; ವಿಶ್ವವಿದ್ಯಾನಿಲಯದ ಮುಂದಿರುವ ಯೋಜನೆಗಳು ಯಾವುವು ? (ವಿವರ ನೀಡುವುದು)

## ಕಸ್ತೂರಿ ರಂಗನ್ ವರದಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧೨ (೩೩೨) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಸ್ತೂರಿ ರಂಗನ್ ವರದಿ ಅನುಷ್ಠಾನಗೊಳಿಸಲು ಸಾರ್ವಜನಿಕರು ವಿರೋಧ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಅನುಷ್ಠಾನಗೊಳಿಸದಿರಲು ಇಲಾಖೆ ಕೈಗೊಂಡಿರುವ ಕ್ರಮವೇನು ; ಪ್ರಸ್ತುತ ಈ ವರದಿಯು ಯಾವ ಹಂತದಲ್ಲಿದೆ ; (ವಿವರ ನಿಡುವುದು)

(ಆ) ಈ ವರದಿ ಅನುಷ್ಠಾನಗೊಳ್ಳುವ ಮುಂಚೆಯೇ ಪಶ್ಚಿಮಘಟ್ಟದ ಮತ್ತು ಕರಾವಳಿ ಭಾಗದ ಅನೇಕ ಸ್ಥಳಗಳಲ್ಲಿ ಕಟ್ಟಡ ನಿರ್ಮಾಣಕ್ಕೆ, ಕೈಗಾರಿಕೆ ನಡೆಸಲು ಶಾಲೆಗಳನ್ನು ಅಭಿವೃದ್ಧಿಪಡಿಸಲು ಮನೆ ಕಟ್ಟಲು ಪರವಾನಿಗೆ ನೀಡದೇ ಸತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡ ಕ್ರಮವೇನು ;

(ಇ) ಯಾವುದೇ ಗಿಡ, ಮರಗಳು ಇಲ್ಲದ ಸ್ಥಳದಲ್ಲಿಯೂ ಡೀಮ್ಡ್ ಫಾರೆಸ್ಟ್ ಕಸ್ತೂರಿ ರಂಗನ್ ವರದಿ ಆಧಾರದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಳಿಸಿರುವುದರಿಂದ ಜನರಿಗೆ ತೊಂದರೆಯಾಗಿದ್ದು, ಈ ಬಗ್ಗೆ ಕೈಗೊಂಡ ಕ್ರಮವೇನು ;

(ಈ) ಕಸ್ತೂರಿ ರಂಗನ್ ವರದಿ ಜಾರಿಗೆ ಬಂದರೆ ರೈತರಿಗೆ ತೊಂದರೆ ಆಗುವುದು ಎಂದು ಪತ್ರಿಕೆಗಳಲ್ಲಿ ವರದಿಗಳು ಪ್ರಕಟವಾಗಿದ್ದು ಈ ಬಗ್ಗೆ ಸರ್ಕಾರದ ಮುಂದಿನ ನಿಲುವೇನು ?

## ಮಂಗಳೂರು ನಗರದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧೩ (೩೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ನಗರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಹೆಚ್ಚುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ವಿಭಾಗವಾರು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹೆಚ್ಚಿನ ಸೌಲಭ್ಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಆ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆಗಳ ವೈದ್ಯರ ಸೇವೆ ಪಡೆದು ಆರೋಗ್ಯ ಕ್ಷೇತ್ರದಲ್ಲಿ ಉನ್ನತಮಟ್ಟದ ಸೇವೆ ಒಸಗಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಜಪ್ಪುನಲ್ಲಿರುವ ಆರೋಗ್ಯ ಕೇಂದ್ರದಲ್ಲಿ ಹೆರಿಗೆ ವಿಭಾಗ ಪ್ರಾರಂಭಿಸಬೇಕೆಂಬ ಬೇಡಿಕೆ ಇದ್ದು, ಈ ಬಗ್ಗೆ ವರದಿ ಕೂಡಲೇ ಪಡೆದು ಕ್ರಮ ಕೈಗೊಳ್ಳಲಾಗುವುದೇ ; ಪ್ರಸ್ತುತ ಈ ಕೇಂದ್ರದಿಂದ ನೀಡುತ್ತಿರುವ ಸೇವೆಗಳು ಯಾವುವು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕನ್ನಡ ಮಾಧ್ಯಮ ಶಾಲೆಗಳು ಮುಚ್ಚಿರುವುದರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೪ (೩೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅನೇಕ ಕನ್ನಡ ಮಾಧ್ಯಮ ಶಾಲೆಗಳು ವಿದ್ಯಾರ್ಥಿಗಳ ಸಂಖ್ಯೆ ಕೊರತೆಯಿಂದ ಮುಚ್ಚಲ್ಪಟ್ಟಿದ್ದು, ಈ ಕಟ್ಟಡಗಳನ್ನು ಯಾವ ಉದ್ದೇಶಕ್ಕಾಗಿ ಬಳಕೆ ಮಾಡಲು ಸರ್ಕಾರ ಉದ್ದೇಶಿಸಿದೆ ; (ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಕೊರತೆಯಿಂದ ಈವರೆಗೆ ಮುಚ್ಚಲ್ಪಟ್ಟ ಒಟ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ಈ ಶಾಲೆಗಳ ಕಟ್ಟಡ ಮತ್ತು ಸ್ಥಳವನ್ನು ಯಾರು ನಿರ್ವಹಣೆ ಮಾಡುವವರು ; (ವಿವರ ನೀಡುವುದು)

(ಇ) ಮುಚ್ಚಲ್ಪಟ್ಟ ಶಾಲೆಗಳನ್ನು ಅಂಗನವಾಡಿ ಕೇಂದ್ರವನ್ನಾಗಿ ಉಪಯೋಗಿಸಲು ಇಲಾಖೆ ಅನುಮತಿ ನೀಡಿದೆಯೇ ; (ವಿವರ ನೀಡುವುದು)

(ಈ) ಮಂಗಳೂರು ನಗರದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿಗೆ ಕಟ್ಟಡ/ ಸ್ಥಳವನ್ನು ಗುರುತಿಸಿರುವುದಿಲ್ಲ ? (ವಿವರ ನೀಡುವುದು)

## ಕಾಡಾನೆಗಳ ಹಾವಳಿಯನ್ನು ತಡೆಹಿಡಿಯುವ ಕುರಿತು

**ಶ್ರೀ ಟಿ.ಎನ್ ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೫ (೪೩೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಕಾಡಾನೆಗಳ ದಾಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; ಯಾವ ಯಾವ ಜಿಲ್ಲೆಗಳಲ್ಲಿ ಈ ಪ್ರಕರಣಗಳು ಜರುಗಿವೆ ; (ಮಾಹಿತಿ ನೀಡುವುದು)

(ಆ) ಕಾಡಾನೆಗಳ ದಾಳಿಯಿಂದ ಮೃತಪಟ್ಟವರಿಗೆ ಸರ್ಕಾರ ನಿಗಧಿಪಡಿಸಿರುವ ಪರಿಹಾರದ ಮೊತ್ತವೆಷ್ಟು ; (ವಿವರಣೆ ನೀಡುವುದು)

(ಇ) ರೈತರ, ಕೂಲಿ ಕಾರ್ಮಿಕರ, ಸಾರ್ವಜನಿಕರ ಕುಟುಂಬಗಳ ಹಿತದೃಷ್ಟಿಯಿಂದ ನಿಗಧಿಪಡಿಸಿರುವ ಮೊತ್ತವನ್ನು ಹೆಚ್ಚಿಸಲು ಸರ್ಕಾರವು ಕ್ರಮ ವಹಿಸುವುದೇ ; (ವಿವರಣೆ ನೀಡುವುದು)

(ಈ) ಆನೆ ದಾಳಿಯಿಂದ ಮೃತಪಟ್ಟವರಿಗೆ ಪರಿಹಾರ ನೀಡುವುದಲ್ಲದೆ ಆನೆಗಳ ಹಾವಳಿಯಿಂದ ರೈತರ ಬೆಳೆ ನಾಶವಾಗಿರುವದರಿಂದ, ಬೆಳೆ ಪರಿಹಾರವನ್ನು ಹೆಚ್ಚಿಗೆ ನೀಡಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ; (ವಿವರಣೆ ನೀಡುವುದು)

(ಉ) ಕಾಡಿನಿಂದ ನಾಡಿಗೆ ಬರುವ ಆನೆಗಳು ಮತ್ತು ಇತರೆ ಪ್ರಾಣಿಗಳನ್ನು ನಿಯಂತ್ರಿಸಲು ತೆಗೆದುಕೊಂಡಿರುವ ಕ್ರಮಗಳಾವುವು ? (ವಿವರಣೆ ನೀಡುವುದು)

## ವಿವಿಧ ಜಿಲ್ಲೆಯಲ್ಲಿ ಹೊಸದಾಗಿ ತೆರೆದಿರುವ ವಿಶ್ವವಿದ್ಯಾಲಯಗಳನ್ನು ಮುಚ್ಚುತ್ತಿರುವ ಬಗ್ಗೆ

**ಶ್ರೀ ಟಿ.ಎನ್ ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೬ (೪೩೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಸರ್ಕಾರದ ಅಧಿನದಲ್ಲಿರುವ ಒಟ್ಟು ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಇ) ಹಿಂದಿನ ಸರ್ಕಾರದಲ್ಲಿ ಜಿಲ್ಲೆಗೊಂದರಂತೆ ಎಷ್ಟು ಹೊಸ ವಿಶ್ವವಿದ್ಯಾನಿಲಯಗಳನ್ನು ತೆರೆಯಲಾಗಿದೆ ; ಈ ವಿಶ್ವವಿದ್ಯಾನಿಲಯಗಳನ್ನು ಯಾವ ಮಾನದಂಡಗಳನ್ನು ಅನುಸರಿಸಿ ತೆರೆಯಲಾಗಿದೆ ; (ವಿವರ ನೀಡುವುದು)

(ಈ) ಅಂತಹ ಕೆಲವು ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಸರ್ಕಾರ ತೀರ್ಮಾನಿಸಿದೆಯೇ ; ಹಾಗಿದ್ದಲ್ಲಿ, ಯಾವ ಮಾನದಂಡಗಳ ಆಧಾರದ ಮೇಲೆ ಈ ತೀರ್ಮಾನ ತೆಗೆದುಕೊಳ್ಳಲಾಗುತ್ತಿದೆ ; (ವಿವರ ನೀಡುವುದು)

(ಉ) ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಆಯಾ ಜಿಲ್ಲೆಯಲ್ಲಿ ಸರ್ಕಾರಿ ಜಮೀನು ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯವಿರುವ ವಿಶ್ವವಿದ್ಯಾನಿಲಯಗಳನ್ನು ಮುಂದುವರಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞರು ಮತ್ತು ಸಿಬ್ಬಂದಿಗಳ ಕೊರತೆಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯಸಂಸ್ಥೆಗಳ ಕ್ಷೇತ್ರ) :–**

೩೧೭ (೪೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೊಡಗು ಜಿಲ್ಲಾಸ್ಪತ್ರೆಯಲ್ಲಿ ಲಭ್ಯವಿರುವ ಮತ್ತು ಲಭ್ಯವಿಲ್ಲದೇ ಇರುವ ಚಿಕಿತ್ಸೆಗಳು ಯಾವುವು ;

(ಇ) ತಜ್ಞ ವೈದ್ಯರ ಕೊರತೆಯಿರುವ ಕಾರಣ ಗಂಭೀರ ಖಾಯಿಲೆಗಳಿಂದ ಅಸ್ಪತ್ರೆಗೆ ಬರುವ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಜ್ಞ ವೈದ್ಯರ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ತಜ್ಞ ವೈದ್ಯರ ಕೊರತೆಯಿಂದ ಗ್ರಾಮೀಣ ಭಾಗದಲ್ಲಿರುವ ಬಡ ಜನರಿಗೆ ಸರಿಯಾದ ಸಮಯದಲ್ಲಿ ಸೂಕ್ತ ಚಿಕಿತ್ಸೆ ಸಿಗದಿರುವುದರಿಂದ ಅವರು ಗಂಭೀರ ಖಾಯಿಲೆಗಳ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳ ಅವಲಂಬನೆಯಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯಸಂಸ್ಥೆಗಳ ಕ್ಷೇತ್ರ) :-**

೩೧೮ (೪೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆಯಲ್ಲಿ ಸಮಗ್ರವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡುವ ಕುರಿತು 2018 ರಿಂದ ಇಲ್ಲಿಯವರೆಗೆ ಕಡತ ಚಾಲ್ತಿಯಲ್ಲಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಯಾವ ಕಾಲಮಿತಿಯೊಳಗಾಗಿ ಅಂತಿಮಗೊಳಿಸಲಾಗುವುದು ; ಕಳೆದ ಆರು ವರ್ಷಗಳಿಂದ ಅಂತಿಮಗೊಳಿಸದೇ ಇರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಕುರಿತು ಆಯುಕ್ತರು ಸರ್ಕಾರಕ್ಕೆ ಸಲ್ಲಿಸಿರುವ ಸಂಪೂರ್ಣ ಪ್ರಸ್ತಾವನೆ, ಪ್ರಸ್ತಾವನೆಗನುಗುಣವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಆರ್ಥಿಕ ಇಲಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಗಳು ನೀಡಿರುವ ಎಲ್ಲಾ ಸಂಪೂರ್ಣ ಅಭಿಪ್ರಾಯಗಳೊಂದಿಗೆ ಮಾಹಿತಿ ನೀಡುವುದು ;

(ಇ) ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಮಾಹಿತಿ 2014, ದಿನಾಂಕ:26.08.2015 ಹಾಗೂ ಇತರೇ ಆದೇಶಗಳ ಅನ್ವಯ ಶಿಕ್ಷಣ ಇಲಾಖೆಗೆ ಮಂಜೂರಾಗಿರುವ ಸುಮಾರು 250ಕ್ಕೂ ಅಧಿಕ ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರುಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಯಲ್ಲಿ ಕೈಬಿಡಲಾಗಿದೆಯೇ ; ಹಾಗಿದ್ದಲ್ಲಿ, ಕೈಬಿಡಲು ಕಾರಣಗಳೇನು; ಪರಿಷ್ಕರಣೆಗೆ ಸೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈ ಕುರಿತು ಸ್ಪಷ್ಟವಾದ ಮಾಹಿತಿಯೊಂದಿಗೆ ಸರ್ಕಾರದ ನಿಲುವೇನು ? (ಮಾಹಿತಿ ನೀಡುವುದು)

## ರೈತರಿಗೆ ನಿರಂತರ ವಿದ್ಯುತ್ ನೀಡುವ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯಸಂಸ್ಥೆಗಳ ಕ್ಷೇತ್ರ) :-**

೩೯೯ (೩೭೪೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ರೈತರಿಗೆ ದಿನಕ್ಕೆ ಎಷ್ಟು ಗಂಟೆ ತ್ರಿಫೇಸ್ ವಿದ್ಯುತ್ ನೀಡಲಾಗುತ್ತಿದೆ ; ಈ ಭಾಗದ ಗ್ರಾಮಾಂತರ ಪ್ರದೇಶಗಳಲ್ಲಿ ನಿರಂತರ ಲೋಡ್ ಶೆಡ್ಡಿಂಗ್ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಸದರಿ ಜಿಲ್ಲೆಗಳ ರೈತರುಗಳಿಗೆ ತೀವ್ರ ಸಮಸ್ಯೆಯಾಗಿದ್ದು ನಿರಂತರ ವಿದ್ಯುತ್ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ಜಿಲ್ಲೆಗಳ ಪುತ್ತೂರು, ಸುಳ್ಯ, ಕಡಬ ತಾಲ್ಲೂಕುಗಳಲ್ಲಿ ವಿದ್ಯುತ್ ಪವರ್ ಕಟ್ ಜೊತೆಗೆ ವೋಲ್ಟೇಜ್ ಸಮಸ್ಯೆ ತೀವ್ರವಾಗಿರುವುದು ಹಾಗೂ ಈ ಭಾಗಗಳಲ್ಲಿ ಅತೀ ಹೆಚ್ಚು ಅಡಿಕೆ ಬೆಳೆಗಾರರು ಇರುವುದು ಅನುಗುಣವಾಗಿ ಬೇಸಿಗೆಯಲ್ಲಿ ವಿದ್ಯುತ್‌ಗೆ ಹೆಚ್ಚಿನ ಬೇಡಿಕೆ ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬೇಡಿಕೆಯ ವಿದ್ಯುತ್ ಪೂರೈಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯದಲ್ಲಿ ೧೧೦ ಕೆ.ವಿ. ವಿದ್ಯುತ್ ಸಬ್‌ಸ್ಟೇಷನ್ ಸ್ಥಾಪನೆ ಕಾರ್ಯ ಯಾವ ಹಂತದಲ್ಲಿದೆ. ಈ ಕಾರ್ಯವನ್ನು ಯಾವಾಗ ಪೂರ್ಣಗೊಳಿಸಲಾಗುವುದು ; ಅಥವಾ ಕಾಮಗಾರಿಯನ್ನು ಸ್ಥಗಿತಗೊಳಿಸಲಾಗಿದೆಯೇ ; ಅರಣ್ಯ ಇಲಾಖೆಯಿಂದ ಈ ಕಾರ್ಯಕ್ಕೆ ಒಪ್ಪಿಗೆ ದೊರಕಿದೆಯೇ ; ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ರಾಜ್ಯದ ದೊಡ್ಡ ರೈತರ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆಯನ್ನು ನಿಲ್ಲಿಸಲಾಗುವುದೇ ; ಈ ರೀತಿಯ ಪ್ರಸ್ತಾವನೆ ಸರ್ಕಾರದಲ್ಲಿ ಇದೆಯೇ ? (ವಿವರಿಸುವುದು)

## ಭೋದಕೇತರ ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯಸಂಸ್ಥೆಗಳ ಕ್ಷೇತ್ರ) :-**

೩೨೦ (೩೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸ್ತುತ ಇರುವ ಶಿಕ್ಷಕರಿಗೆ ಪಠ್ಯ ಭೋದನೆಯ ಜೊತೆಗೆ ಇತರ ಕೆಲಸಗಳ ಒತ್ತಡ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಮಕ್ಕಳಿಗೆ ಗುಣ ಮಟ್ಟದ ಶಿಕ್ಷಣ ನೀಡಲು ತೊಂದರೆ ಉಂಟಾಗುವುದಿಲ್ಲವೇ ಹಾಗೂ ಇದರಿಂದ ಮಕ್ಕಳ ಪರೀಕ್ಷಾ ಫಲಿತಾಂಶದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವುದಿಲ್ಲವೇ ;

(ಇ) ಈ ಭೋದಕೇತರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಎಷ್ಟು ಭೋದಕೇತರ ಹುದ್ದೆಗಳು ಖಾಲಿ ಇವೆ ; ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ತಾಲ್ಲೂಕುವಾರು ವಿವರ ಒದಗಿಸುವುದು)

## ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨೧ (೩೭೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪ್ರಸ್ತಾವನೆ ಇಲ್ಲವಾದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ತೆರೆಯಲು ಇರುವ ಸಮಸ್ಯೆಗಳೇನು ;

(ಇ) ಪುತ್ತೂರಿನಲ್ಲಿ ಸರ್ಕಾರಿ ಕಾಲೇಜು ತೆರೆಯುವಂತೆ ಬೇಡಿಕೆ ಬಂದಿದೆಯೇ ;

(ಈ) ಪುತ್ತೂರಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಜಾಗ ಗುರುತಿಸಲಾಗಿದೆಯೇ ; ಗುರುತಿಸಿದ್ದರೆ, ಯಾವ ಜಾಗ ಮತ್ತು ಎಕರೆ ಜಮೀನು ಮೀಸಲಿಡಲಾಗಿದೆ ?

## ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರ ಸಾವಿನ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨೨ (೩೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಕಳೆದ ಒಂದು ವರ್ಷದಲ್ಲಿ ಸಾವನ್ನಪ್ಪಿದ ಬಾಣಂತಿಯರು ಮತ್ತು ನವಜಾತ ಶಿಶುಗಳ ಸಂಖ್ಯೆ ಎಷ್ಟು ; ಯಾವ ಜಿಲ್ಲೆಯಲ್ಲಿ ಅತೀ ಹೆಚ್ಚು ಸಾವು ಸಂಭವಿಸಿದ ಜಿಲ್ಲೆ ಯಾವುದು ; (ಜಿಲ್ಲಾವಾರು ವಿವರ ನೀಡುವುದು)

(ಆ) ಬಾಣಂತಿಯರು ಸಾವನ್ನಪ್ಪಿರುವುದಕ್ಕೆ ನಿರ್ದಿಷ್ಟ ಕಾರಣಗಳೇನು ವೈದ್ಯರ ನಿರ್ಲಕ್ಷತೆಯೇ ಅಥವಾ ಔಷಧಿಯ ಅಡ್ಡಪರಿಣಾಮವೇ

ಎಂಬ ಬಗ್ಗೆ ತನಿಖೆ ನಡೆಸಲಾಗಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ತಪ್ಪಿತಸ್ಥರ ಮೇಲೆ ಯಾವ ಕ್ರಮ ಜರುಗಿಸಲಾಗಿದೆ ;

(ಇ) ಮೃತ ಬಾಣಂತಿಯರ ಕುಟುಂಬಕ್ಕೆ ಸರ್ಕಾರದಿಂದ ಎಷ್ಟು ಪರಿಹಾರ ನೀಡಲಾಗಿದೆ ; ಮೃತ ಬಾಣಂತಿಯರ ಮಕ್ಕಳ ಪೋಷಣೆ, ಶಿಕ್ಷಣಕ್ಕೆ ಸರ್ಕಾರ ಏನು ಕ್ರಮ ಜರುಗಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಮುಂದಿನ ದಿನಗಳಲ್ಲಿ ಈ ರೀತಿಯ ಘಟನೆಗಳು ಮರುಕಳಿಸದಂತೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨೩ (೩೯೦) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಅಧೀನದಲ್ಲಿರುವ ಆಸ್ಪತ್ರೆಗಳು ಯಾವುವು ; ಈ ಸಂಸ್ಥೆಯಲ್ಲಿ ನೇಮಕಗೊಂಡ ಸಿಬ್ಬಂದಿಗಳು ಪ್ರಸ್ತುತ ಸಂಸ್ಥೆಯ ಅಧೀನದಲ್ಲಿರುವ ಯಾವ ಯಾವ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಹುದ್ದೆವಾರು ಸಮಗ್ರ ಮಾಹಿತಿ ನೀಡುವುದು)

(ಆ) ಸದರಿ ಸಂಸ್ಥೆಯಲ್ಲಿ ಸಿ ಅಂಡ್ ಆರ್ ನಿಯಮಗಳನ್ನು ಅಳವಡಿಸಿಕೊಳ್ಳದಿರಲು ಕಾರಣಗಳೇನು ; ಸಿ ಅಂಡ್ ಆರ್ ನಿಯಮಗಳನ್ನು ಯಾವಾಗ ಅಳವಡಿಸಿಕೊಳ್ಳಲಾಗುವುದು ;

(ಇ) ೨೦೧೨ರಲ್ಲಿ ಸಂಸ್ಥೆಯು ಎಷ್ಟು ಖಾಯಂ ಶುಶ್ರೂಷಾಧಿಕಾರಿಗಳನ್ನು ನೇಮಕ ಮಾಡಿಕೊಂಡಿದೆ ; ನೇಮಕಗೊಂಡ ಈ ಶುಶ್ರೂಷಾಧಿಕಾರಿಗಳು ಪ್ರಸ್ತುತ ಸಂಸ್ಥೆಯ ಅಧೀನದಲ್ಲಿ ಬರುವ ಯಾವ ಯಾವ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಸಿಬ್ಬಂದಿವಾರು ವಿವರ ನೀಡುವುದು)

(ಈ) ಶುಶ್ರೂಷಾಧಿಕಾರಿಗಳಿಗೆ ಮುಂಬಡ್ತಿ ನೀಡಲು ರೋಸ್ಟರ್ ಪಟ್ಟಿ ತಯಾರಿಸಲಾಗಿದೆಯೇ ; ಸಿ ಅಂಡ್ ಆರ್ ಅಳವಡಿಸಿಕೊಳ್ಳದೆ ರೋಸ್ಟರ್ ಪಟ್ಟಿ ತಯಾರಿಸಿದ್ದು ಮತ್ತು ತಯಾರಿಸುವಾಗ ಅಳವಡಿಸಿಕೊಂಡ ಮಾನದಂಡಗಳೇನು ; ಶುಶ್ರೂಷಾಧಿಕಾರಿಗಳಿಗೆ ಮುಂಬಡ್ತಿ ನೀಡಲು ಪ್ರಸ್ತುತ ಎಷ್ಟು ಖಾಲಿ ಉಳಿದಿದೆ ; (ಆಸ್ಪತ್ರೆವಾರು ವಿವರ ನೀಡುವುದು ರೋಸ್ಟರ್ ಪಟ್ಟಿ ಒದಗಿಸುವುದು)

(ಉ) ಬೆಂಗಳೂರು ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆಯ ಸಿಬ್ಬಂದಿಗಳ ವಿಚಾರಕ್ಕೆ ಸಂಬಂಧಪಟ್ಟಂತೆ ಉಚ್ಚ ನ್ಯಾಯಾಲಯ ನೀಡಿರುವ ಆದೇಶ (Writ Petition No. 2272/20-21 (S-RES) ಏನು ; ನ್ಯಾಯಾಲಯ ಆದೇಶದ ನಂತರ ಕೈಗೊಂಡಿರುವ ಕ್ರಮಗಳೇನು ;

(ಊ) ಶುಶ್ರೂಷಾಧಿಕಾರಿಗಳೂ ಸೇರಿದಂತೆ ಸಂಸ್ಥೆಯ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬಿ ಮತ್ತು ಸಿ ವೃಂದದ ಸಿಬ್ಬಂದಿಗಳಿಗೆ ಯಾವ ಕಾಲಮಿತಿಯೊಳಗೆ ಮುಂಬಡ್ತಿ ನೀಡಲಾಗುವುದು ?

## BPL & APL ಕಾರ್ಡ್‌ಗಳ ವಿತರಣೆ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್.(ವಿಧಾನಸಭೆಯಿಂದ ಚುನಾಯಿತರಾದವರು):-**

೩೨೪ (೪೮೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಹಾಗೂ ಇತರೆ ಪಡಿತರ ಚೀಟಿಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು ; ಬಿ.ಪಿ.ಎಲ್. ಪಡಿತರ ಚೀಟಿಯನ್ನು ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ;

(ಆ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಈವರೆಗೆ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಹಾಗೂ ಇತರೆ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು ; ಹೊಸ ಬಿ.ಪಿ.ಎಲ್. ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳಿಗೆ ಎಷ್ಟು ಸಮಯದ ಒಳಗಾಗಿ ಪಡಿತರ ಚೀಟಿಯನ್ನು ನೀಡಲಾಗುತ್ತದೆ ; ಅರ್ಜಿ ಸಲ್ಲಿಸಲು ಅವಕಾಶ ನೀಡಿಲ್ಲದಿದ್ದರೆ ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಅನ್ನಭಾಗ್ಯ ಯೋಜನೆಯಡಿ ಪಡಿತರ ಬದಲಾಗಿ ಇಲ್ಲಿಯವರೆಗೆ ಎಷ್ಟು ಮೊತ್ತವನ್ನು ಅಕ್ಕಿಯ ಬದಲಾಗಿ ಹಣದ ರೂಪದಲ್ಲಿ ಪಡಿತರ ಚೀಟಿದಾರರಿಗೆ ಪಾವತಿ ಮಾಡಲಾಗಿದೆ ; ಹಣ ಪಾವತಿ ಮಾಡುವುದು ಬಾಕಿ ಇದ್ದರೆ ಯಾವ ಸಮಯದಿಂದ ಬಾಕಿ ಇದೆ ; ಯಾವ ಕಾರಣಕ್ಕಾಗಿ ಬಾಕಿ ಇದೆ ; ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟಿದೆ ; ಪಾವತಿ ಮಾಡಲಾದ ಫಲಾನುಭವಿಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಹಾಗೂ ಹಿಂದುಳಿದ ವರ್ಗಗಳ ಫಲಾನುಭವಿಗಳ ಸಂಖ್ಯೆ ಎಷ್ಟಿದೆ ; (ತಿಂಗಳುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಪಡಿತರ ಚೀಟಿಗಳ ತಿದ್ದುಪಡಿ ಮಾಡುವುದು ಹಾಗೂ ಹೊಸ ಪಡಿತರ ಚೀಟಿಯನ್ನು ಪಡೆಯಲು ಜನರು ಹೈರಾಣಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರಿ ಯೋಜನೆಗಳಿಗೆ ಹಾಗೂ ಆರೋಗ್ಯಕ್ಕೆ ಸಂಬಂಧಿಸಿದ ಸವಲತ್ತುಗಳನ್ನು ಪಡೆಯಲು ಪಡಿತರ ಚೀಟಿಯು ಅತ್ಯಾವಶ್ಯಕವಾಗಿದ್ದು, ಸರಿಯಾದ ಸಮಯದಲ್ಲಿ ಸಾರ್ವಜನಿಕರಿಗೆ ಪಡಿತರ ಚೀಟಿಯ ತಿದ್ದುಪಡಿ ಮತ್ತು ವಿತರಣೆ ಮಾಡದಿದ್ದರೆ ಅವರನ್ನು ವಂಚಿಸಿದಂತೆ ಆಗುವುದಿಲ್ಲವೇ ? (ಸಂಪೂರ್ಣ ಮಾಹಿತಿ ನೀಡುವುದು)

## ಗೃಹ ಜ್ಯೋತಿ ಯೋಜನೆ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್.(ವಿಧಾನಸಭೆಯಿಂದ ಚುನಾಯಿತರಾದವರು):-**

೩೨೫ (೪೮೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗೃಹ ಜ್ಯೋತಿ ಯೋಜನೆಯಡಿ ನೋಂದಣಿ ಮಾಡಿಕೊಂಡಿರುವ ವಿದ್ಯುತ್ ಬಳಕೆದಾರರ ಸಂಖ್ಯೆ ಎಷ್ಟು ; ಈ ಯೋಜನೆಯಿಂದ ಹೊರಗುಳಿದವರ ಸಂಖ್ಯೆ ಎಷ್ಟು ; (ಹೆಸ್ಕಾಂವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡಿರುವ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪಂಗಡದ ವ್ಯಾಪ್ತಿಗೆ ಒಳಪಡುವ ವಿದ್ಯುತ್ ಬಳಕೆದಾರರ ಸಂಖ್ಯೆ ಎಷ್ಟು ; ಇಲ್ಲಿಯವರೆಗೆ ಅವರು ಬಳಕೆ ಮಾಡಿಕೊಂಡಿರುವ ವಿದ್ಯುತ್ ಪ್ರಮಾಣ ಮತ್ತು ಮೊತ್ತವೆಷ್ಟು ; ಸದರಿ ಮೊತ್ತವು ಸರ್ಕಾರದಿಂದ ಪಾವತಿ ಆಗಿದೆಯೇ ; (ತಿಂಗಳವಾರು ಮಾಹಿತಿ ನೀಡುವುದು)

(ಇ) ಪಾವತಿ ಆಗಿಲ್ಲದಿದ್ದರೆ ಎಷ್ಟು ಮೊತ್ತ ; ಯಾವ ಸಮಯದಿಂದ ಬಾಕಿ ಇದೆ ; ಬಾಕಿಯನ್ನು ಪಾವತಿಸಲು ತೆಗೆದುಕೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆಯಲ್ಲಿ ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ನೋಂದಾಯಿತ ವಿದ್ಯುತ್ ಬಳಕೆದಾರರು ಉಪಯೋಗಿಸಿದ ವಿದ್ಯುತ್ ಪ್ರಮಾಣವೆಷ್ಟು ;

(ಉ) ಗೃಹಜ್ಯೋತಿ ಯೋಜನೆಯ ಫಲಾನುಭವಿಗಳು ಬಳಸಿದ ವಿದ್ಯುತ್‌ಗೆ ಅನುಗುಣವಾಗಿ ಬಳಕೆಯ ಮೊತ್ತವು ಪಾವತಿಯಾಗುತ್ತಿದೆಯೇ ; ಗೃಹಜ್ಯೋತಿ ಯೋಜನೆಯಡಿ ಸರ್ಕಾರದಿಂದ ಪಾವತಿಯಾಗದೇ ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಸರ್ಕಾರದಿಂದ ಎಲ್ಲಾ ಎಸ್ಕಾಂಗಳಿಗೆ ಪಾವತಿಸಲು ಬಾಕಿ ಇರುವ ಮೊತ್ತವೆಷ್ಟು ; ಯಾವ ಸಮಯದಿಂದ ಹಾಗೂ ಯಾವ ಕಾರಣಕ್ಕಾಗಿ ಬಾಕಿ ಇದೆ ? (ಸಂಪೂರ್ಣ ಮಾಹಿತಿ ನೀಡುವುದು)

## ನಕಲಿ ವೈದ್ಯರ ಹಾವಳಿ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್.(ವಿಧಾನಸಭೆಯಿಂದ ಚುನಾಯಿತರಾದವರು):-**

೩೨೬ (೪೮೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರ್ಹತೆ ಇಲ್ಲದಿದ್ದರೂ ವೈದ್ಯರೆಂದು ಬಿಂಬಿಸಿಕೊಂಡು ಜನರನ್ನು ವಂಚಿಸುತ್ತಿರುವ ಪ್ರಕರಣಗಳು ರಾಜ್ಯದಲ್ಲಿ ಮರುಕಳಿಸುತ್ತಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇಲ್ಲಿಯವರೆಗೂ ವರದಿಯಾದ ಪ್ರಕರಣಗಳೆಷ್ಟು ; ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ನಕಲಿ ವೈದ್ಯರ ಹಾವಳಿಯನ್ನು ತಡೆಗಟ್ಟಲು ಸರ್ಕಾರವು ರೂಪಿಸಿರುವ ಕಟ್ಟು ನಿಟ್ಟಿನ ಕಾನೂನುಗಳೇನು ; ನಕಲಿ ವೈದ್ಯರಿಗೆ ನೀಡುವ ಶಿಕ್ಷೆಯ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಳ್ಳಿಗಳಲ್ಲಿ ಆರ್‌ಎಂಪಿ ವೈದ್ಯರು, ಆಲೋಪಥಿ, ನ್ಯಾಚುರೋಪತಿ, ಆಯುರ್ವೇದ ಹಾಗೂ ಹೋಮಿಯೋಪಥಿ ಹೆಸರಿನಲ್ಲಿ ದಂಧೆ ನಡೆಸಿ ರೋಗಿಗಳ ಜೀವದ ಜೊತೆ ಚೆಲ್ಲಾಟವಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಕೆಎಂಯುಫಿ ಯಲ್ಲಿ ಒಮ್ಮೆ ನೋಂದಣಿಯಾದ ವೈದ್ಯರು ನಿಧನರಾದರೆ, ಹೊರ ರಾಜ್ಯಕ್ಕೆ ಅಥವಾ ವಿದೇಶಗಳಿಗೆ ತೆರಳಿದರೆ ಅವರ ನೋಂದಣಿ ರದ್ದಾಗುತ್ತದೆಯೇ ; ಇವರ ನೋಂದಣಿ ಸಂಖ್ಯೆಗಳನ್ನು ಬಳಸಿ ನಕಲಿ ವೈದ್ಯರಿಗೆ ಪ್ರಮಾಣ ಪತ್ರಗಳನ್ನು ನೀಡಿರುವ ಪ್ರಕರಣಗಳು ಬೆಳಕಿಗೆ ಬಂದಿವೆಯೇ ; ಬಂದಿದ್ದಲ್ಲಿ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ; ಈ ತರನಾದ ಅಕ್ರಮಗಳನ್ನು ತಡೆಗಟ್ಟಲು ರೂಪಿಸಿರುವ ಕಾನೂನು ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಆಯುಷ್ಮಾನ್ ಭಾರತ್ ಆರೋಗ್ಯದ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್.(ವಿಧಾನಸಭೆಯಿಂದ ಚುನಾಯಿತರಾದವರು):-**

೩೨೭ (೪೮೮೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ದೊರೆಯುವ ಚಿಕಿತ್ಸಾ ವಿಧಾನಗಳು ಯಾವುವು ; ಈ ಯೋಜನೆಗೆ ಮತ್ತಷ್ಟು ಹೆಚ್ಚಿನ ಚಿಕಿತ್ಸೆಗಳನ್ನು ಸೇರ್ಪಡೆ ಮಾಡುವ ಮೂಲಕ ಚಿಕಿತ್ಸಾ ವಿಧಾನಗಳ ಪಟ್ಟಿ ಪರಿಷ್ಕರಣೆ ಮಾಡಲು ಸರ್ಕಾರ ಚಿಂತಿಸುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆ ಜಾರಿಯಾಗಿ ಐದು ವರ್ಷಗಳು ಕಳೆದರೂ ಸೂಕ್ತ ರೀತಿಯಲ್ಲಿ ಸೇವೆ ದೊರೆಯದೆ ಹಾಗೂ ಯೋಜನೆಯ ಕುರಿತು ಸಮರ್ಪಕ ಮಾಹಿತಿ ಇಲ್ಲದ ಕಾರಣ ತುರ್ತು ಸಂದರ್ಭಗಳಲ್ಲಿ ಚಿಕಿತ್ಸೆಗಾಗಿ ಆಸ್ಪತ್ರೆಯಿಂದ ಆಸ್ಪತ್ರೆಗೆ ರೋಗಿಗಳು ಅಲೆದಾಡುವ ಪರಿಸ್ಥಿತಿ ಮುಂದುವರೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಈ ಯೋಜನೆಯಡಿ ಚಿಕಿತ್ಸೆ ನೀಡುತ್ತಿರುವ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಯೋಜನೆಗೆ ನೋಂದಣಿ ಆಗಲು ಖಾಸಗಿ ಆಸ್ಪತ್ರೆಗಳಿಂದ ನಿರಾಸಕ್ತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ತುರ್ತು ಸಂದರ್ಭಗಳಲ್ಲಿ ರೋಗಿಗಳ ದಾಖಲಾತಿ ಸಮಸ್ಯೆ ಮುಂದುವರೆದಿದ್ದು ಕೆಳಹಂತದ ಆಸ್ಪತ್ರೆಗಳಿಂದ ದೊಡ್ಡ ಆಸ್ಪತ್ರೆಗಳಿಗೆ ಶಿಫಾರಸ್ಸು ಸೇರಿ ಯೋಜನೆಯಡಿ ಚಿಕಿತ್ಸೆ ಪಡೆಯಲು ಬಹಳಷ್ಟು ಗೊಂದಲಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇತ್ತೀಚೆಗೆ ನಿಮ್ಹಾನ್ಸ್‌ನಲ್ಲಿ ಹಾಸಿಗೆ ಲಭ್ಯವಿಲ್ಲದೆ ಚಿಕಿತ್ಸೆ ವಿಳಂಬವಾಗಿ ಮಗುವೊಂದು ಮೃತಪಟ್ಟ ಪ್ರಕರಣ ಹಾಗೂ ಇನ್ನಿತರೆ ಅಹಿತರ

ಪ್ರಕರಣಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳಿಗೆ ಸಹಾಯಕ ಪ್ರಾಧ್ಯಾಪಕರು ಮತ್ತು ಶುಶ್ರೂಷಣಾ ಅಧಿಕಾರಿಗಳ ನೇಮಕ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೨೮ (೪೨೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳಿಗೆ ಅಗತ್ಯವಿರುವ ಸಹಾಯಕ ಪ್ರಾಧ್ಯಾಪಕರು ಮತ್ತು ಶುಶ್ರೂಷಣಾ ಅಧಿಕಾರಿಗಳನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ ;

(ಆ) ಇದ್ದಲ್ಲಿ, ಖಾಲಿ ಇರುವ ಒಟ್ಟು ಹುದ್ದೆಗಳ ಪೈಕಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಇ) ಈ ಹಿಂದೆ ವೈದ್ಯಕೀಯ ಕಾಲೇಜುಗಳ ಮುಖ್ಯಸ್ಥರ ನೇತೃತ್ವದ ಸಮಿತಿಗಳೇ ಸಹಾಯಕ ಪ್ರಾಧ್ಯಾಪಕರು ಮತ್ತು ಶುಶ್ರೂಷಣಾ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳುತ್ತಿದ್ದ ಮಾದರಿಯಲ್ಲಿ ನೇಮಕಾತಿ ಪ್ರಕ್ರಿಯೆ ನಡೆಯಲಿದೆಯೇ ಅಥವಾ ನೇಮಕಾತಿಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವ ದೃಷ್ಟಿಯಿಂದ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದೇ ; (ವಿವರ ನೀಡುವುದು)

(ಈ) ಸ್ಪರ್ಧಾತ್ಮಕ ಪರೀಕ್ಷೆ ಮೂಲಕವೇ ನೇಮಕಾತಿ ಪ್ರಕ್ರಿಯೆ ಆರಂಭಿಸಿದರೆ ಬೈಲಾಗೆ ತಿದ್ದುಪಡಿ ತರುವುದು, ಸಿ ಅಂಡ್ ಆರ್

ನಿಯಮಗಳ ಪಾಲನೆ, ಪರೀಕ್ಷೆಗಳಿಗೆ ಅಗತ್ಯ ಪಠ್ಯಕ್ರಮ ರೂಪಿಸುವುದು ಸೇರಿದಂತೆ ಹಲವಾರು ಕ್ರಮಗಳನ್ನು ಅನುಸರಿಸಬೇಕಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಉ) ಸ್ಪರ್ಧಾತ್ಮಕ ಪರೀಕ್ಷೆಯನ್ನು ಕೆ.ಪಿ.ಎಸ್.ಸಿ. ಅಥವಾ ಕೆ.ಇ.ಎ. ಮೂಲಕ ನಡೆಸುವ ಕುರಿತು ಚಿಂತಿಸಿದೆಯೇ ? (ವಿವರ ನೀಡುವುದು)

## ರಂಗನತಿಟ್ಟು ಪಕ್ಷಿಧಾಮದಲ್ಲಿ ಚಿಟ್ಟೆ ಪಾರ್ಕ್ ನಿರ್ಮಾಣ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೨೯ (೪೨೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ರಂಗನತಿಟ್ಟು ಪಕ್ಷಿಧಾಮದಲ್ಲಿ 'ಚಿಟ್ಟೆ ಪಾರ್ಕ್' ನಿರ್ಮಿಸಲು ಉದ್ದೇಶಿಸಲಾಗಿದೆಯೇ ; ಇದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಸಿದ್ಧತೆಗಳೇನು ;

(ಆ) ಸದರಿ 'ಚಿಟ್ಟೆ ಪಾರ್ಕ್' ಅನ್ನು ಎಷ್ಟು ಎಕರೆ ಪ್ರದೇಶ ಹಾಗೂ ಎಷ್ಟು ಅಂದಾಜು ಮೊತ್ತದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಇ) ಈ ಸ್ಥಳದಲ್ಲಿ ಯಾವ ಯಾವ ಪ್ರಭೇದದ ಜಾತಿಯ ಆಕರ್ಷಕ, ಅಪರೂಪದ ಚಿಟ್ಟೆಗಳನ್ನು ಗುರುತಿಸಲಾಗಿದೆ ಅಥವಾ ನೋಡಲು ಸಿಗಲಿವೆ ; (ಸಂಪೂರ್ಣ ವಿವರ ನೀಡುವುದು)

(ಈ) ಚಿಟ್ಟೆಗಳ ಆಹಾರಕ್ಕಾಗಿ ಯಾವ ಯಾವ ಪ್ರಮುಖ ಆಹಾರ ಸಸ್ಯಗಳನ್ನು / ಗಿಡಗಳನ್ನು ಬೆಳೆಸಲಾಗಿದೆ ಅಥವಾ ಬೆಳೆಸಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಈಗಾಗಲೇ ಯಾವ ಯಾವ ಸ್ಥಳಗಳಲ್ಲಿ 'ಚಿಟ್ಟೆ ಪಾರ್ಕ್'ಗಳನ್ನು ನಿರ್ಮಿಸಲಾಗಿದೆ ? (ಜಿಲ್ಲೆ, ಸ್ಥಳ, ನಿರ್ಮಾಣ ಮಾಡಲಾದ ವರ್ಷ, ವಿಸ್ತೀರ್ಣ ನೋಡಲು ಸಿಗುವ ಚಿಟ್ಟೆ ಪ್ರಭೇದಗಳ ಸಂಖ್ಯೆ, ಆಕರ್ಷಕ/ಅಪರೂಪದ ಚಿಟ್ಟೆಗಳಿದ್ದಲ್ಲಿ ವಿವರ ನೀಡುವುದು)

## ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೩೦ (೪೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಲು ಕೈಗೊಂಡ ಸಮೀಕ್ಷಾ ಕಾರ್ಯ ಪೂರ್ಣಗೊಂಡಿದೆಯೇ ;

(ಆ) ಇದ್ದಲ್ಲಿ, ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸಮೀಕ್ಷೆ ಕಾರ್ಯದ ಅವಧಿ, ಸಮೀಕ್ಷೆಗೆ ಒಳಪಡಿಸಿದ ಮಕ್ಕಳ ವಯೋಮಾನ, ಗಣತಿದಾರರ ಸಂಖ್ಯೆ ಎಷ್ಟು ; (ಸಮೀಕ್ಷಾ ವಿಧಾನ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಈ) ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಯಾವ ಯಾವ ಇಲಾಖೆಗಳ ಸಹಭಾಗಿತ್ವದಲ್ಲಿ ಸಮೀಕ್ಷೆ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಸಮೀಕ್ಷೆಯಲ್ಲಿ ಗುರುತಿಸಿ ಶಾಲೆಗಳಿಗೆ ದಾಖಲಿಸಿದ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಸಮೀಕ್ಷೆಯಲ್ಲಿ ಗುರುತಿಸಿ, ದಾಖಲಾಗದ ಮಕ್ಕಳನ್ನು ಶೈಕ್ಷಣಿಕ ಮುಖ್ಯ ವಾಹಿನಿಗೆ ತರಲು ಕೈಗೊಂಡಿರುವ ಕ್ರಮಗಳೇನು ;

(ಋ) ಕಳೆದ ೫ ಶೈಕ್ಷಣಿಕ ಸಾಲುಗಳಲ್ಲಿ ಗುರುತಿಸಲ್ಪಟ್ಟ ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು ? (ಶೈಕ್ಷಣಿಕ ಸಾಲುವಾರು ಮಾಹಿತಿ ನೀಡುವುದು)

## ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸುಗಳ ಜಾರಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೩೧ (೪೨೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಅನುದಾನಿತ ಐಟಿಐ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸುಗಳನ್ನು ಯಾವಾಗ ಆದೇಶ ಮಾಡಲಾಗಿದೆ ; (ವಿವರ ಮತ್ತು ಆದೇಶ ಪ್ರತಿ ನೀಡುವುದು)

(ಆ) ಸದರಿಯವರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸಿನಂತೆ ಇದುವರೆಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವ ಎಲ್ಲಾ ಸೌಲಭ್ಯಗಳನ್ನು ನೀಡದೆ ಇರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯ ಶಿಫಾರಸ್ಸಿನಂತೆ ಸೇವಾ ನಿಯಮಗಳನ್ನು ರೂಪಿಸದೆ ಇರುವುದರಿಂದ ನೌಕರರು ಯಾವುದೇ ಸೌಲಭ್ಯಗಳಿಲ್ಲದೆ ವಂಚಿತರಾಗಿದ್ದು, ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರಚಿಸಿ ಎಲ್ಲಾ ಸೌಲಭ್ಯಗಳನ್ನು ನೀಡಲಾಗುವುದು ; (ವಿವರ ನೀಡುವುದು)

(ಈ) ೨೦೦೬ರ ನಂತರ ಅನುದಾನಕ್ಕೊಳಪಡಿಸಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ-ಬೋಧಕೇತರರಿಗೆ ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವಂತೆ ನಿವೃತ್ತಿ ನಂತರ ರಜೆ ನಗದೀಕರಣ ಸೌಲಭ್ಯಗಳನ್ನು ನೀಡುವ ಕುರಿತು ಸರ್ಕಾರದ ನಿಲುವೇನು ; ಯಾವ ಕಾಲಮಿತಿಯೊಳಗೆ ಈ ಸೌಲಭ್ಯವನ್ನು ಒದಗಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಅನಧಿಕೃತವಾಗಿ ಗೈರು ಹಾಜರಿ ಆಗುವ ವೈದ್ಯರ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೩೨ (೪೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಳೆದ ೫ ವರ್ಷಗಳಲ್ಲಿ ಅನಧಿಕೃತ ಗೈರು ಹಾಜರಿ ಆಗಿರುವ ವೈದ್ಯರ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅನಧಿಕೃತ ಗೈರು ಹಾಜರಿ ಆಗಿರುವ ವೈದ್ಯರ ವಿರುದ್ಧ ಇಲಾಖೆಯಲ್ಲಿ ಕೈಗೊಂಡಿರುವ ಕ್ರಮಗಳೇನು ; ಕ್ರಮ ಜರುಗಿಸದಿದ್ದರೆ ಕಾರಣಗಳೇನು ; ಇದು ನಿಯಮಗಳ ಉಲ್ಲಂಘನೆ ಅಲ್ಲವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಎಷ್ಟು ಪ್ರಕರಣಗಳಲ್ಲಿ ವೈದ್ಯರ ವಿರುದ್ಧ ಕ್ರಮ ಜರುಗಿಸಲಾಗಿದೆ ; ಎಷ್ಟು ಪ್ರಕರಣಗಳು ಕ್ರಮ ಜರುಗಿಸಲು ಬಾಕಿ ಇವೆ ; (ಪ್ರಕರಣವಾರು ಮಾಹಿತಿ ನೀಡುವುದು)

(ಈ) ಇಂತಹ ಪ್ರಕರಣಗಳಲ್ಲಿ ವೈದ್ಯರ ವಿರುದ್ಧ ಸಕಾಲದಲ್ಲಿ ಕ್ರಮ ಜರುಗಿಸದ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು;

(ಉ) ಅನ್ಯ ಇಲಾಖೆಗೆ ನಿಯೋಜನೆ ಮೇರೆಗೆ ತೆರಳಿರುವ ವೈದ್ಯರ ಸಂಖ್ಯೆ ಎಷ್ಟು ; (ವರ್ಷವಾರು, ಇಲಾಖಾವಾರು ಮಾಹಿತಿ ನೀಡುವುದು)

(ಊ) ನಿಯೋಜನೆ ಅವಧಿ ಪೂರ್ಣಗೊಂಡರೂ ಮಾತೃ ಇಲಾಖೆಗೆ ಮರಳದೇ ನಿಯೋಜಿತ ಹುದ್ದೆಗಳಲ್ಲೇ ಮುಂದುವರೆದಿರುವ ವೈದ್ಯರ ಸಂಖ್ಯೆ ಎಷ್ಟು ; ಈ ವೈದ್ಯರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## **ಕರ್ನಾಟಕ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕುರಿತು**

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩೩ (೪೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳಿವೆ ; ಅವುಗಳಲ್ಲಿ ಸರ್ಕಾರಿ ಶಾಲೆಗಳು ಎಷ್ಟು ; ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು ; ಹಾಗೆಯೇ ರಾಜ್ಯ ಮಾದರಿಯ ಪಠ್ಯಕ್ರಮ (ಎಸ್.ಬಿ.ಎಸ್.ಸಿ) ಹಾಗೂ ಕೇಂದ್ರ ಮಾದರಿಯ ಪಠ್ಯಕ್ರಮ (ಸಿ.ಬಿ.ಎಸ್.ಸಿ) ದಲ್ಲಿ ಬೋಧಿಸುವ ಶಾಲೆಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸ್ತುತ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ಶಿಕ್ಷಕರ ಹುದ್ದೆಗಳ ಸಂಖ್ಯೆ ನಿಗದಿಪಡಿಸುವಿಕೆಗೆ ಮಾನದಂಡವಾಗಿ ಆಯಾಯ ವರ್ಷದ ವಿದ್ಯಾರ್ಥಿಗಳ ಸಂಖ್ಯೆಯನ್ನೇ ಪರಿಗಣಿಸಲು ಸರ್ಕಾರಕ್ಕಿರುವ ತೊಂದರೆ ಏನು ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಈಗ ಇರುವ ಎಲ್ಲಾ ಶಾಲೆಗಳಲ್ಲಿ ಖಾಯಂ ಮುಖ್ಯ ಶಿಕ್ಷಕರು ಇದ್ದಾರೆಯೇ ; ಎಷ್ಟು ಶಾಲೆಗಳಲ್ಲಿ ಪ್ರಭಾರಿ ಮುಖ್ಯೋಪಾಧ್ಯಾಯರು ಎಷ್ಟು ಅವಧಿಯಿಂದ ಇದ್ದಾರೆ ; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚು ಇರುವ ಕೆಲವು ಶಾಲೆಗಳಿಗೆ ಆದ್ಯತೆ ಮೇರೆಗೆ ಮುಖ್ಯ ಶಿಕ್ಷಕರನ್ನು ಒದಗಿಸಲು ಏನು ಕ್ರಮ ವಹಿಸಲಾಗಿದೆ ;

(ಉ) ಮುಖ್ಯ ಶಿಕ್ಷಕರನ್ನು ನೇಮಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು ; ನ್ಯಾಯಾಲಯದಲ್ಲಿ ಪ್ರಕರಣಗಳು ಇವೆಯೇ ; ಇದ್ದಲ್ಲಿ ಅದನ್ನು ಪರಿಹರಿಸಲು ಏನು ಕ್ರಮವಹಿಸಿದೆ ; ಕರ್ನಾಟಕ ಉಚ್ಚ ನ್ಯಾಯಾಲಯದ 'WRIT PETITION NO. 22883

OF 2022 (S-KSAT) ಪ್ರಕರಣದಲ್ಲಿ ೦೪/೦೧/೨೦೨೪ರ ಆದೇಶದಂತೆ ಸಂಬಂಧಪಟ್ಟ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಮಾರ್ಪಾಟು ಮಾಡಿದೆಯೇ ; ಇಲ್ಲದಿದ್ದರೆ ಇನ್ನೂ ಕ್ರಮವಹಿಸಲು ಕಾರಣವೇನು ? (ವಿವರ ನೀಡುವುದು)

## ಕರ್ನಾಟಕ ರಾಜ್ಯಗಡಿ ಭಾಗದಲ್ಲಿ ಅರಣ್ಯ ಚೆಕ್ ಪೋಸ್ಟ್‌ಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩೪ (೪೨೩) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ಗಡಿ ಭಾಗದಲ್ಲಿ ಪ್ರಸ್ತುತ ಎಷ್ಟು ಅರಣ್ಯ ಚೆಕ್ ಪೋಸ್ಟ್‌ಗಳು ಇವೆ ; ಕೆಲವು ವರ್ಷಗಳ ಹಿಂದೆ ಕಾರ್ಯಾಚರಿಸುತ್ತಿದ್ದ ಅವುಗಳನ್ನು ತೆರವುಗೊಳಿಸಲು ಕಾರಣವೇನು ; ಹಣದ ಕೊರತೆಯೇ ; ಸಿಬ್ಬಂದಿಗಳ ಕೊರತೆ ಅಥವಾ ಇತರ ಕಾರಣಗಳೇನು ; (ವಿವರ ನೀಡುವುದು)

(ಆ) ಈ ಗಡಿ ಭಾಗಗಳಲ್ಲಿ ಚೆಕ್ ಪೋಸ್ಟ್ ಇಲ್ಲದೆ ಅರಣ್ಯ ಸಂಪತ್ತು ನಿರಂತರವಾಗಿ ಲೂಟಿ ಆಗುತ್ತಿರುವ ಬಗ್ಗೆ ಪತ್ರಿಕೆ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ವರದಿಯಾಗುತ್ತಿರುವ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರಸ್ತುತ ಎಷ್ಟು ಅರಣ್ಯ ಚೆಕ್ ಪೋಸ್ಟ್‌ಗಳು ಇವೆ ; ಕಾರ್ಯಾಚರಿಸುತ್ತಿರುವ ಮತ್ತು ಸ್ಥಗಿತಗೊಂಡ ಅರಣ್ಯ ಚೆಕ್ ಪೋಸ್ಟ್‌ಗಳು ಯಾವುವು ; ಸ್ಥಗಿತಗೊಳಿಸಲು ಕಾರಣಗಳೇನು ;

(ಈ) ಅರಣ್ಯ ರಕ್ಷಕ ದಳಕ್ಕೆ ಯಾವುದೇ ಪ್ರಕರಣ ದಾಖಲಾಗದಿರುವುದನ್ನು ನೆಪವಾಗಿರಿಸಿ ಮತ್ತು ಅರಣ್ಯ ಚೆಕ್ ಪೋಸ್ಟ್‌ಗಳ ಸಿಬ್ಬಂದಿ ಮೇಲ್ವಿಚಾರಣೆ ವ್ಯವಸ್ಥೆ ಕೊರತೆಯ ಕಾರಣ ಸ್ಥಗಿತಗೊಳಿಸಿದ ಅರಣ್ಯ ಚೆಕ್ ಪೋಸ್ಟ್‌ಗಳ ಬದಲಿಗಾಗಿ ಅಂತರಾಜ್ಯ ಗಡಿ ಪ್ರದೇಶಗಳಲ್ಲಿ ಅಕ್ರಮ ಅರಣ್ಯ ಸಂಪತ್ತು ಸಾಗಾಣಿಕೆ ತಡೆಯಲು ಇಲಾಖೆ ಕೈಗೊಂಡ ಪರ್ಯಾಯ ರಕ್ಷಣಾ ಕ್ರಮಗಳೇನು ; (ವಿವರ ನೀಡುವುದು)

(ಉ) ಪ್ರಸ್ತುತ ಲಭ್ಯವಿರುವ ತಂತ್ರಜ್ಞಾನದ ಸಹಾಯದೊಂದಿಗೆ ಬಾಡಿ ಕ್ಯಾಮರಾದೊಂದಿಗೆ ಸಿಸಿ ಟಿವಿ, ಇಂಟರ್‌ನೆಟ್ ಇತ್ಯಾದಿಗಳನ್ನು ಅಳವಡಿಸಿ ಅಗತ್ಯ ಅರಣ್ಯ ಚೆಕ್ ಪೋಸ್ಟ್‌ಗಳು, ಮೇಲ್ವಿಚಾರಣೆ ವ್ಯವಸ್ಥೆ ಮಾಡಿ ಗಡಿ ಪ್ರದೇಶಗಳಲ್ಲಿ ಅಕ್ರಮ ಅರಣ್ಯ ಸಂಪತ್ತು ಸಾಗಾಣಿಕೆ ತಡೆಯಲು ಸರ್ಕಾರ ಯಾವ ರೀತಿಯಲ್ಲಿ ಕ್ರಮವಹಿಸಿದೆ ?

## ಕರ್ನಾಟಕ ರಾಜ್ಯದ ವಿದ್ಯುತ್ ಶಕ್ತಿ ಪ್ರಸರಣ ನಿಗಮಗಳ ವಿದ್ಯುತ್ ಸ್ಥಾವರ ಮತ್ತು ವಿತರಣ ಜಾಲಗಳ ಸುರಕ್ಷತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩೫ (೪೨೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿದ್ಯುತ್ ವಿತರಣ ಜಾಲಗಳ ತಂತಿಗಳ ಕಂಬಗಳನ್ನು ಅಳವಡಿಸುವಾಗ ಸಂಬಂಧಪಟ್ಟ ಜಾಗದ ಮಾಲೀಕರಲ್ಲಿ ಸಮನ್ವಯ ಮಾಡಲಾಗುತ್ತಿದೆಯೇ ; ಈ ಕುರಿತಂತೆ ದಕ್ಷಿಣ ಕನ್ನಡ ಮತ್ತು

ಉಡುಪಿ ಜಿಲ್ಲೆಗಳಲ್ಲಿ ವಿವಿಧ ಸಂತ್ರಸ್ಥರು ಪ್ರತಿಭಟನೆ ಮಾಡಿರುವ ಪ್ರಕರಣಗಳಲ್ಲಿ ಯಾವ ರೀತಿ ಕ್ರಮವಹಿಸುತ್ತಿದೆ ;

(ಆ) ವಿದ್ಯುತ್ ವಿತರಣ ನಿಗಮಗಳು ಸಾರ್ವಜನಿಕ ರಸ್ತೆ, ಕಟ್ಟಡ ಮನೆ ಹಾಗೂ ಕೃಷಿ ತೋಟದ ಮೂಲಕ ವಿದ್ಯುತ್ ತಂತಿ ಹಾದು ಹೋಗುವಾಗ ಯಾವುದೇ ಮುನ್ಸೂಚನೆ ನೀಡದೆ ಕಂಬ ಅಳವಡಿಸಿ ನಂತರ ತೆರವುಗೊಳಿಸಬೇಕಾದಲ್ಲಿ ಇತರ ಇಲಾಖೆಗಳ ಸಹಿತ ಸಂಬಂಧಪಟ್ಟವರಿಂದ ದುಬಾರಿ ಶುಲ್ಕ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಿದ್ಯುತ್ ತಂತಿ ಮತ್ತು ಕಂಬಗಳ ಸ್ಥಳಾಂತರ ಕಾಮಗಾರಿಯನ್ನು ಇಲಾಖೆಯೇ ಮಾಡುತ್ತಿದೆಯೇ ; ಅಥವಾ ಗುತ್ತಿಗೆದಾರರಿಂದ ಮಾಡಲಾಗುತ್ತಿದೆಯೇ ; ಇವುಗಳ ಕುರಿತ ನಿಯಮಗಳಾವುವು;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವಿದ್ಯುತ್ ವಿತರಣ ಜಾಲಗಳ ತಂತಿಗಳು ಸಾರ್ವಜನಿಕ ರಸ್ತೆ, ಶಾಲೆ, ಅಂಗನವಾಡಿ ಹಾಗೂ ಇತರೆ ಕಛೇರಿಗಳ ಮೇಲೆಯಿಂದ ಹಾದು ಹೋಗುವ ಸಂದರ್ಭದಲ್ಲಿ ತಂತಿಗಳ ಅಡಿಯಲ್ಲಿ ಸುರಕ್ಷಿತ ಗಾರ್ಡ್‌ಗಳನ್ನು ಅಳವಡಿಸಲಾಗಿದೆಯೇ ; ಅಳವಡಿಸಿದ್ದರೆ ಅವುಗಳ ಸಂಖ್ಯೆಯೆಷ್ಟು; ಈ ಕುರಿತು ಇಲಾಖೆಗೆ ಸಲ್ಲಿಸಿದ ಮನವಿಗಳಲ್ಲಿ ಎಷ್ಟನ್ನು ಪರಿಗಣಿಸಿದೆ ; (ಅಂಕಿ-ಅಂಶ ಸಹಿತ ವಿವರ ನೀಡುವುದು)

(ಉ) ಖಾಸಗಿ ಸ್ಥಳಗಳಲ್ಲಿ ಅಪಾಯಕಾರಿ ಕಟ್ಟಡ, ಮರ ತೆರವುಗೊಳಿಸುವಾಗ ವಿದ್ಯುತ್ ತಂತಿ ಕೆಳಗಿಳಿಸಲು ಅನುಸರಿಸಬೇಕಾದ ನಿಯಮಗಳು, ಪಾವತಿಸಬೇಕಾದ ಶುಲ್ಕ ಇತ್ಯಾದಿಗಳ ವಿವರಗಳೇನು ?

# ರಾಜ್ಯದಲ್ಲಿ ಪಡಿತರ ಚೀಟಿ ವಿತರಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩೬ (೪೨೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಡಿತರ ಚೀಟಿ ಅರ್ಜಿಗಳನ್ನು ಕಾಲಕಾಲಕ್ಕೆ ಪ್ರಮಾಣೀಕೃತ ಮಾನದಂಡಗಳ ಆಧಾರದಲ್ಲಿ ಪರಿಶೀಲನೆ, ಪರಿಷ್ಕರಣೆ ಮತ್ತು ವಿಲೇವಾರಿ ಮಾಡದೆ ಕಳೆದ ಎರಡು ವರ್ಷಗಳಿಂದ ಬಾಕಿಯಿರುವ ಬಗ್ಗೆ ಸರ್ಕಾರ ಯಾವ ರೀತಿಯಲ್ಲಿ ಕ್ರಮವಹಿಸಲಾಗುತ್ತಿದೆ ;

(ಆ) ಅತೀ ಅಗತ್ಯವಿರುವ ನಾಗರೀಕರಿಗೆ ಮಾತ್ರ ಮನವಿಯ ಆಧಾರದಲ್ಲಿ ಪಡಿತರ ಚೀಟಿ ನೀಡುವ ಬದಲು ಖಚಿತ ಆದಾಯ ಮೂಲ ಹೊಂದಿ, ಅದಕ್ಕೆ ಪೂರಕವಾಗಿ ಆರ್ಥಿಕ ವ್ಯವಹಾರ, ತೆರಿಗೆ ಪಾವತಿ, ಸ್ವಂತ ವಾಹನ, ಕೃಷಿ ಮತ್ತು ಇವುಗಳನ್ನು ಸ್ಪಷ್ಟವಾಗಿ ಗುರುತಿಸುವ ಆಧಾರ್, ಪಾನ್, ಪಹಣಿ, ತೆರಿಗೆ ಪಾವತಿ ದಾಖಲೆಗಳು, ಬ್ಯಾಂಕ್ ವಹಿವಾಟು ಇತ್ಯಾದಿಗಳ ಲಿಂಕ್ ಮೂಲಕ ಪ್ರಾರಂಭದಲ್ಲೇ ಬಿಪಿಎಲ್ ಪಡಿತರ ಚೀಟಿಯ ವ್ಯಾಪ್ತಿಯಿಂದ ಹೊರಗಿಟ್ಟು ಉಳಿದವರಿಗೆ ಎಪಿಎಲ್ ಪಡಿತರ ಚೀಟಿ ನೀಡಲು ಇರುವ ಸಮಸ್ಯೆಗಳೇನು ;

(ಇ) ಕರ್ನಾಟಕ ರಾಜ್ಯದಲ್ಲಿ ಇನ್ನು ಎಷ್ಟು ಕುಟುಂಬಗಳಿಗೆ ಪಡಿತರ ಚೀಟಿ ನೀಡಲು ಬಾಕಿಯಿದೆ ; ಈ ಕುರಿತು ಮಾಹಿತಿ ಸರ್ಕಾರದ ಬಳಿ ಇದೆಯೇ ; ಈ ಕುರಿತಂತೆ ಯಾವುದಾದರೂ ಸಮೀಕ್ಷೆ ನಡೆಸಿದೆಯೇ ಅಥವಾ ಈ ಬಗ್ಗೆ ಕೈಗೊಳ್ಳಲುದ್ದೇಶಿಸಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಏಕ ಬಾರಿಗೆ (ಒನ್ ಟೈಮ್ ಸೆಟ್ಲಮೆಂಟ್ ಮೂಲಕ) ಆಹಾರ ಇಲಾಖೆಯು ಅರ್ಜಿದಾರರ ಆದಾಯ/ವ್ಯವಹಾರಕ್ಕೆ ಲಿಂಕ್ ಆಗಿರುವ ವೈಯಕ್ತಿಕ ದಾಖಲೆಗಳನ್ನು ಹೊಂದಿರುವ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಈಗ ಬಾಕಿಯಾಗಿರುವ ಎಲ್ಲಾ ಪಡಿತರ ಚೀಟಿ ಅರ್ಜಿಗಳನ್ನು ಕ್ಷಿಪ್ರವಾಗಿ ವಿಲೇವಾರಿ ಮಾಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಅನ್ನಭಾಗ್ಯ ಯೋಜನೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೩೩೭ (೩೬೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು/ಮೂರು ತಿಂಗಳಿನಿಂದ ಅನ್ನಭಾಗ್ಯ ಯೋಜನೆಗೆ ಹಣ ಬಿಡುಗಡೆ ಮಾಡಿಲ್ಲವೆಂದು ದೂರುಗಳು ಕೇಳಿಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ದೂರುಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ದೂರುಗಳ ಹಿನ್ನಲೆಯಲ್ಲಿ ಸರ್ಕಾರವು ಹಸಿವುಮುಕ್ತ ರಾಜ್ಯ ಮಾಡುವ ಯೋಜನೆ ಕೈಗೊಂಡಿಲ್ಲದಂತಾಗುವುದೆ ? (ಮಾಹಿತಿ ನೀಡುವುದು)

## ಗ್ರಾಮೀಣ ಭಾಗದ ಪ್ರಾಥಮಿಕ ಆರೋಗ್ಯ ಕೇಂದ್ರಗಳು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೩೩೮ (೩೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣ ಭಾಗದ ಜನರ ಆರೋಗ್ಯಾಭಿವೃದ್ಧಿಗೆ ಹಾಕಿಕೊಂಡಿರುವ ಯೋಜನೆಗಳೇನು ;

(ಆ) ಸ್ಥಳೀಯ ಮಟ್ಟದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ ;

(ಇ) ಸರ್ಕಾರ ೫ ವರ್ಷದ ಅವಧಿಯಲ್ಲಿ ಒಟ್ಟಾರೆ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಅಭಿವೃದ್ಧಿಪಡಿಸುವ ಯೋಜನೆಯನ್ನು ಹೊಂದಿದೆ ? (ವರ್ಷವಾರು ಮಾಹಿತಿ ಒದಗಿಸುವುದು)

## ಉದ್ಯೋಗ ಸಲುವಾಗಿ ಕೌಶಲ್ಯಾಭಿವೃದ್ದಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೩೩೯ (೩೭೦) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಉದ್ಯೋಗ ಪಡೆಯಲು ಬೇಕಾದ ಕೌಶಲ್ಯ ಹೊಂದಿರುವ ಯುವಜನರ ಸಂಖ್ಯೆ ಎಷ್ಟು ;

(ಆ) ಬೆಂಗಳೂರು ನಗರ ಉದ್ಯೋಗ ಒದಗಿಸುವಲ್ಲಿ ಮುಂಚೂಣಿಯಲ್ಲಿದೆಯೇ ; ಹಾಗಿದ್ದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಯುವ ಜನರು ಉದ್ಯೋಗಕ್ಕೆ ನೇಮಕಗೊಂಡಿದ್ದಾರೆ ;

(ಇ) ಇಂಗ್ಲೀಷ್ ಭಾಷೆ, ಕಂಪ್ಯೂಟರ್ ಕೌಶಲ್ಯ, ಸಂಖ್ಯಾ ಕೌಶಲ್ಯ, ವಿಮರ್ಶಾತ್ಮಕ ಚಿಂತನ (Critical thinking) ಕೌಶಲ್ಯಗಳಲ್ಲಿ ರಾಜ್ಯ ಇತರೆ ರಾಜ್ಯಗಳಿಗಿಂತ ಹಿಂದುಳಿಯಲು ಕಾರಣಗಳೇನು ;

(ಈ) ಕೌಶಲ್ಯಗಳನ್ನು ಸುಧಾರಿಸುವ ಪರಿಣಾಮಕಾರಿಯಾಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ರಾಜ್ಯದಲ್ಲಿ ನಕಲಿ ಔಷಧಿಗಳ ಜಾಲದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೩೪೦ (೪೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಸ್ಪತ್ರೆಗಳಲ್ಲಿ ಬಳಸುತ್ತಿರುವ ಕೆಲವು ಔಷಧಿಗಳಲ್ಲಿ ಉತ್ತಮ ಗುಣಮಟ್ಟ ಇಲ್ಲದಿರುವುದು ಹಾಗೂ ಔಷಧಿಗಳ ಮಾರುಕಟ್ಟೆಯಲ್ಲಿ ನಕಲಿ ಔಷಧಿ ಗಳ ಪೂರೈಕೆ ಜಾಲ ವ್ಯಾಪಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ನಕಲಿ ಔಷಧಿಗಳ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗೆ ಒಳಪಡಿಸಲಾಗಿದೆಯೇ ಮತ್ತು ನಕಲಿ ಔಷಧಿ ತಯಾರಕರ ಮೇಲೆ ದಾವೆಗಳನ್ನು ಹೂಡಲಾಗಿದೆಯೇ ;

(ಇ) ಈವರೆಗೆ ಎಷ್ಟು ಔಷಧಿ ತಯಾರಕರ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ವಿವರಗಳನ್ನು ಒದಗಿಸುವುದು)

## ಶಾಲಾ ಮಕ್ಕಳಿಗೆ ಗಣಿತ ಭೋದನೆ ಮಾಡಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೩೪೧ (೪೫೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಶಾಲಾ ಮಕ್ಕಳಲ್ಲಿ ಗಣಿತ ವಿಷಯದಲ್ಲಿ ಆಸಕ್ತಿ ಮೂಡಿಸಲು ಯಾವುದಾದರೂ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಆ) ಹಮ್ಮಿಕೊಂಡಿದ್ದಲ್ಲಿ, ಇವರೆಗೆ ಎಷ್ಟು ಶಾಲೆಗಳಲ್ಲಿ ಈ ಯೋಜನೆಯನ್ನು ಕಾರ್ಯರೂಪಕ್ಕೆ ತರಲಾಗಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಭಾಷಾ ಅಲ್ಪಸಂಖ್ಯಾತ ವರ್ಗದವರು ನಡೆಸುತ್ತಿರುವ ಡಿಗ್ರಿ ಕಾಲೇಜುಗಳಿಗೆ ಅನುದಾನ ನೀಡುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೨ (೪೦೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಭಾಷಾ ಅಲ್ಪಸಂಖ್ಯಾತ ವರ್ಗದವರು ನಡೆಸುತ್ತಿರುವ ಎಷ್ಟು ಪದವಿ ಕಾಲೇಜುಗಳಿವೆ; ಅವುಗಳು ಯಾವುವು ;

(ಆ) ಅವುಗಳಲ್ಲಿ ಎಷ್ಟು ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆ ಮತ್ತು ಎಷ್ಟು ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಿರುವುದಿಲ್ಲ ;

(ಇ) 1992 ರಿಂದ ಬೀದರ್ ಜಿಲ್ಲೆ ಭಾಲ್ಕಿಯಲ್ಲಿ ಭಾಷಾ ಅಲ್ಪಸಂಖ್ಯಾತ ವರ್ಗದವರು ನಡೆಸುತ್ತಿರುವ ಶ್ರೀ ಛತ್ರಪತಿ ಶಿವಾಜಿ ಮಹಾರಾಜ ಪ್ರಥಮ ದರ್ಜೆ ಕಾಲೇಜ್‌ಗೆ ಇದುವರೆಗೆ ಅದಕ್ಕೆ ಅನುದಾನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಬಂದಿದ್ದಲ್ಲಿ. ಈ ಕಾಲೇಜನ್ನು ಯಾವಾಗ ಅನುದಾನಕ್ಕೆ ಒಳಪಡಿಸಲಾಗುವುದು ; ಒಳಪಡಿಸದಿರಲು ಕಾರಣವೇನು ; ಅನುದಾನಕ್ಕೊಳಪಡಿಸಲು ಇರುವ ಮಾನದಂಡಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರುಗಳು ಮತ್ತು ಆರೋಗ್ಯ ಸಿಬ್ಬಂದಿಯ ನಿರ್ಲಕ್ಷ್ಯದಿಂದ ಆಗುತ್ತಿರುವ ಅನಾಹುತಗಳ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೩ (೪೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಆರೋಗ್ಯ ಸಿಬ್ಬಂದಿಯ ನಿರ್ಲಕ್ಷ್ಯದಿಂದ ಅನಾಹುತಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನೇಕ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿಗಳು ಸರಿಯಾಗಿ ಚಿಕಿತ್ಸೆ ನೀಡದೆ ಪ್ರಾಣಪಾಯವಾಗುತ್ತಿದ್ದು ಜನರು ಈ ಬಗ್ಗೆ ಪ್ರತಿಭಟನೆ, ಗಲಾಟೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಕಡೆಗಳಲ್ಲಿ ಈ ರೀತಿ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಈ) ಕರ್ತವ್ಯದಲ್ಲಿ ನಿರ್ಲಕ್ಷ್ಯವಹಿಸಿ ಅಪಾಯ ಉಂಟು ಮಾಡಿರುವ ಎಷ್ಟು ಜನ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ಮೇಲೆ ಸರ್ಕಾರ ಶಿಸ್ತಿನ ಕ್ರಮ ಕೈಗೊಳ್ಳಲಾಗಿದೆ ? (ವಿವರಿಸುವುದು)

## ಖಾಸಗಿ ಶಿಕ್ಷಣ ಸಂಸ್ಥೆಗಳು ಹೆಚ್ಚು ಶುಲ್ಕ ಪಡೆಯುತ್ತಿರುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೪ (೪೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಖಾಸಗಿ ಶಾಲೆಗಳು ನರ್ಸರಿ ಮತ್ತು ಪ್ರಾಥಮಿಕ ಶಾಲೆಗಳ ಪ್ರವೇಶಕ್ಕೆ ಪೋಷಕರಿಂದ ಲಕ್ಷಾಂತರ ರೂಪಾಯಿ ಶುಲ್ಕವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಡ ಮತ್ತು ಮಧ್ಯಮ ವರ್ಗದ ಪೋಷಕರಿಗೆ ಇದರಿಂದ ತೊಂದರೆಯಾಗುತ್ತಿದ್ದು ಏಕರೂಪದಲ್ಲಿ ಶಿಕ್ಷಣ ಶುಲ್ಕ ಪಡೆಯುವಂತೆ ನಿಯಮ ಜಾರಿಗೆ ತರಲು ಸರ್ಕಾರ ಕ್ರಮವಹಿಸುವುದೇ ;

(ಇ) ಶಿಕ್ಷಣ ಸಂಸ್ಥೆಗಳ ಖರ್ಚು ವೆಚ್ಚಗಳನ್ನು ಲೆಕ್ಕ ಹಾಕಿ ಪೋಷಕರಿಗೂ ಹೆಚ್ಚು ಹೊರೆಯಾಗದಂತೆ ವೈಜ್ಞಾನಿಕವಾಗಿ ಶಿಕ್ಷಣ ಶುಲ್ಕವನ್ನು ನಿಗದಿಪಡಿಸಿ ನಿಯಮಗಳನ್ನು ರಚಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಗ್ಯಾರಂಟಿಯಲ್ಲಿ ಘೋಷಿಸಿದಂತೆ ಎಲ್ಲರಿಗೂ ಉಚಿತ ವಿದ್ಯುತ್ ನೀಡದಿರುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೪೫ (೪೦೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಎಲ್ಲರಿಗೂ ೨೦೦ ಯೂನಿಟ್ ಉಚಿತ ವಿದ್ಯುತ್ ನೀಡುವುದಾಗಿ ಚುನಾವಣಾ ಪೂರ್ವದಲ್ಲಿ ಘೋಷಿಸಿದ್ದು ನಿಜವೇ ;

(ಆ) ೨೦೦ ಯುನಿಟ್‌ಗಿಂತ ಹೆಚ್ಚು ಬಳಕೆ ಮಾಡುವ ಗ್ರಾಹಕರಿಗೆ ೨೦೦ ಯುನಿಟ್ ಉಚಿತ ವಿದ್ಯುತ್ ನೀಡದೆ ಪೂರ್ತಿ ಹಣ ಪಡೆಯುತ್ತಿರುವುದು ನಿಜವೇ ;

(ಇ) ೨೦೦ ಯುನಿಟ್ ಗಿಂತ ಹೆಚ್ಚು ಬಳಕೆ ಮಾಡಿದರೆ ಈಗಾಗಲೇ ಘೋಷಿಸಿದ್ದಂತೆ ೨೦೦ ಯುನಿಟ್ ಉಚಿತ ವಿದ್ಯುತ್ ನೀಡಿ ಅದಕ್ಕಿಂತ ಹೆಚ್ಚು ಬಳಕೆ ಮಾಡಿದ ಯೂನಿಟ್‌ಗಳಿಗೆ ಮಾತ್ರ ಶುಲ್ಕ ವಸೂಲು ಮಾಡಬೇಕಾಗಿತ್ತಲ್ಲವೆ ;

(ಈ) ಆ ರೀತಿ ಮಾಡದೆ ಪೂರ್ತಿ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ದೋಷಪೂರಿತವಾದ ತೂಕ ಮಾಡುವ ಯಂತ್ರಗಳ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೪೬ (೪೧೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಂಗಡಿಗಳು ಮತ್ತು ರಸ್ತೆ ಬದಿ ವ್ಯಾಪಾರಿಗಳು ಉಪಯೋಗಿಸುವ ತೂಕ ಮಾಡುವ ಯಂತ್ರಗಳು ಅನೇಕ ಕಡೆಗಳಲ್ಲಿ ದೋಷಪೂರಿತವಾಗಿದ್ದು, ಇದರಿಂದ ಗ್ರಾಹಕರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವ್ಯಾಪಾರಿಗಳು ಉಪಯೋಗಿಸುವ ತೂಕದ ಯಂತ್ರಗಳನ್ನು ತನಿಖೆ ಮಾಡಿ ಕ್ರಮ ಕೈಗೊಳ್ಳಲು ಕಾನೂನು ಮಾಪನ ಶಾಸ್ತ್ರ ಇಲಾಖೆಯಲ್ಲಿ ಯಾವ ರೀತಿ ವ್ಯವಸ್ಥೆ ಇದೆ ;

(ಇ) ರಾಜ್ಯದಲ್ಲಿ ಇದುವರೆಗೆ ಎಷ್ಟು ಕಡೆಗಳಲ್ಲಿ ವ್ಯಾಪಾರಿಗಳ ತೂಕದ ಯಂತ್ರಗಳನ್ನು ತಪಾಸಣೆ ಮಾಡಲಾಗಿದೆ ಮತ್ತು ಎಷ್ಟು ವ್ಯಾಪಾರಸ್ಥರ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

## ಬಿ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೪೭ (೪೫೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು ;

(ಆ) ಹೊಸ ಕಾರ್ಡ್‌ಗಳಿಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇವುಗಳನ್ನು ಯಾವ ಕಾಲಮಿತಿಯಲ್ಲಿ ವಿತರಿಸಲಾಗುವುದು ;

(ಇ) ರಾಜ್ಯದಲ್ಲಿರುವ ಅನ್ನಭಾಗ್ಯ ಯೋಜನೆಯ, ಅಂತ್ಯೋದಯ, ಅನ್ನಯೋಜನೆಯ ಹಾಗೂ ಪಿ.ಹೆಚ್.ಹೆಚ್ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ನೀತಿ ಆಯೋಗದ ಪ್ರಕಾರ ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳ ಸಂಖ್ಯೆ ಎಷ್ಟು; ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಏನಾದರೂ ವ್ಯತ್ಯಾಸವಿದೆಯೇ; ಇದ್ದಲ್ಲಿ ಅನರ್ಹ ಬಿ.ಪಿ.ಎಲ್ ಕಾರ್ಡ್‌ಗಳನ್ನು ತೆಗೆದು ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ರಾಜ್ಯ ಸರ್ಕಾರದ ವತಿಯಿಂದ ಅನ್ನಭಾಗ್ಯ ಯೋಜನೆಗೆ ಎಷ್ಟು ಅನುದಾನವನ್ನು ಮೀಸಲಿಡಲಾಗಿತ್ತು ಮತ್ತು ಖರ್ಚು ಮಾಡಲಾದ ಒಟ್ಟು ವೆಚ್ಚವೆಷ್ಟು ;

(ಊ) ಬಿ.ಪಿ.ಎಲ್ ಕಾರ್ಡ್‌ಗಳನ್ನು ನಿಯಂತ್ರಿಸುವ ಕುರಿತು ಅಥವಾ ಅನರ್ಹ ಬಿ.ಪಿ.ಎಲ್ ಕಾರ್ಡ್‌ಗಳನ್ನು ತೆಗೆದುಹಾಕುವ ಬಗ್ಗೆ ಯಾವುದಾದರು ಕೇಂದ್ರ ಸರ್ಕಾರದ ಅಥವಾ ನ್ಯಾಯಾಲಯದ ಆದೇಶಗಳು ಇವೆಯೇ ?

## ಅರಣ್ಯ ಪ್ರದೇಶಗಳಲ್ಲಿ ವಾಸವಾಗಿರುವ ಜನರ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೪೮ (೪೬೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ಭೀಮಗಡ ಅಭಯಾರಣ್ಯದ ವ್ಯಾಪ್ತಿಯ ಗ್ರಾಮಗಳ ಜನರನ್ನು ಕಾಡಿನಿಂದ ನಗರಕ್ಕೆ ಸ್ಥಳಾಂತರಿಸಲು ಯಾವ ಯಾವ ಯೋಜನೆಯಡಿ ಕ್ರಮ ಕೈಗೊಳ್ಳಲಾಗಿದೆ ; ಮತ್ತು ಪುನರ್ವಸತಿ ಕಾರ್ಯಕ್ಕಾಗಿ ಸರ್ಕಾರದ ವತಿಯಿಂದ ಮೀಸಲಿಡಲಾದ ಅನುದಾನವೆಷ್ಟು ;

(ಆ) ಇಲ್ಲಿಯವರೆಗೆ ಸದರಿ ಅಭಯಾರಣ್ಯದಿಂದ ಸ್ಥಳಾಂತರಿಸಲಾದ ಗ್ರಾಮದ ನಿವಾಸಿಗಳ ಸಂಖ್ಯೆ ಎಷ್ಟು ಮತ್ತು ಇವರುಗಳಿಗೆ ಯಾವ ಯಾವ ಸೌಲಭ್ಯಗಳನ್ನು ನೀಡುವ ಕುರಿತು ಸರ್ಕಾರದ ವತಿಯಿಂದ ನೀತಿಯನ್ನು ರೂಪಿಸಲಾಗಿದೆಯೇ ;

(ಇ) ರಾಜ್ಯದ ಕಾಡಂಚಿನಲ್ಲಿ ವಾಸಿಸುತ್ತಿರುವ ನಿವಾಸಿಗಳ/ಗ್ರಾಮಗಳ ಸಂಖ್ಯೆ ಎಷ್ಟು ಮತ್ತು ಅವುಗಳು ಯಾವ ಯಾವ ಜಿಲ್ಲೆಗಳಲ್ಲಿವೆ ಮತ್ತು ಎಷ್ಟು ಜನರನ್ನು ಕಾಡಿನಿಂದ ನಗರಕ್ಕೆ ಸ್ಥಳಾಂತರಿಸಲಾಗಿದೆ ? (ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರಿಗೆ ಮತ್ತು ಹಿಂದುಳಿದ ವರ್ಗದವರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೯ (೪೬೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ ರಿಂದ ೨೦೨೩ ರವರೆಗೆ ಹಾಗೂ ೨೦೨೩ ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗದ ಮಹಿಳೆಯುರು, ಹೆಣ್ಣುಮಕ್ಕಳ ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕೌಶಲ್ಯಾಭಿವೃದ್ಧಿ ತರಬೇತಿ ಪಡೆದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಕೌಶಲ್ಯಾಭಿವೃದ್ಧಿ ಯೋಜನೆಯಡಿಯಲ್ಲಿ ತರಬೇತಿ ಪಡೆದ ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗ ಸಮುದಾಯದ ಮಹಿಳೆಯರು, ಹೆಣ್ಣುಮಕ್ಕಳು ಕಂಪನಿಗಳಲ್ಲಿ ನೇಮಕಗೊಂಡಿರುವ ಸಂಖ್ಯೆ ಎಷ್ಟು ;

(ಇ) ಇವರ ಉನ್ನತಿಗಾಗಿ ಸರ್ಕಾರದವತಿಯಿಂದ ಕೈಗೊಂಡಿರುವ ಇತರೆ ತರಬೇತಿ/ಕಾರ್ಯಕ್ರಮಗಳು ಯಾವುವು ;

(ಈ) ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ರಾಜ್ಯದಲ್ಲಿರುವ ಸರ್ಕಾರಿ ತರಬೇತಿ ಕೇಂದ್ರಗಳ ಸಂಖ್ಯೆ ಎಷ್ಟು ; ಸರ್ಕಾರಿ ಮತ್ತು ಖಾಸಗಿ ಸಹಭಾಗಿತ್ವದ ತರಬೇತಿ ಕೇಂದ್ರಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಉ) ಸದರಿ ತರಬೇತಿ ಕೇಂದ್ರಗಳಲ್ಲಿ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ (Machine Learning) ಯಂತಹ ವಿಷಯಗಳನ್ನು ಒಳಗೊಂಡಂತೆ ತರಬೇತಿ ನೀಡಲಾಗುತ್ತಿದೆಯೇ ; ಇದ್ದಲ್ಲಿ ಯಾವ ಯಾವ ವಿಷಯಗಳ ಕುರಿತು ತರಬೇತಿ ನೀಡಲಾಗುತ್ತಿದೆ ; ಇಲ್ಲವಾದಲ್ಲಿ ಇದಕ್ಕೆ ಕಾರಣಗಳೇನು ?

## Annual Status of Education Report ವರದಿಯ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೫೦ (೪೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) Annual Status of Education Report ವರದಿಯನ್ವಯ ರಾಜ್ಯದಲ್ಲಿ ಶೇ. ೩೨.೭ ರಷ್ಟು ಒಂದನೇ ತರಗತಿಯ ಮಕ್ಕಳು

ಅಕ್ಷರಗಳನ್ನು ಗುರುತಿಸಲು ಮತ್ತು ಶೇ. ೩೯.೮ ರಷ್ಟು ಮಕ್ಕಳು ಪದಗಳನ್ನು ಓದಲು ಸಾಧ್ಯವಾಗುತ್ತಿಲ್ಲ ಎಂದು ವರದಿ ಬಹಿರಂಗ ಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ವರದಿಯನುಸಾರ ರಾಜ್ಯದಲ್ಲಿ ಕನಿಷ್ಠ ೪೩,೦೦೦ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಒಂದನೇ ತರಗತಿಯಿಂದ ಮೂರನೇ ತರಗತಿಯುವರೆಗಿನ ವಿದ್ಯಾರ್ಥಿಗಳು ಒಂದೇ ಶಿಕ್ಷಕರ ಮೇಲ್ವಿಚಾರಣೆಯುಲ್ಲಿ ಒಟ್ಟಿಗೆ ಕಲಿಯುಬೇಕಾದ ಪರಿಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಿದ್ಯಾರ್ಥಿಗಳಲ್ಲಿ ಭಾವನಾತ್ಮಕ ಬೆಳವಣಿಗೆಗೆ ದೈಹಿಕ ಚಟುವಟಿಕೆ, ಹೊರಾಂಗಣ ಆಟ ಮತ್ತು ನೇರ ಮಾನವ ಸಂವಹನ ಅತ್ಯಗತ್ಯವಾಗಿರುವ ಈ ವಯಸ್ಸಿನಲ್ಲಿ ಸ್ಮಾರ್ಟ್ ಫೋನ್‌ಗಳ ಮೇಲಿನ ಅವಲಂಬನೆ ಹೆಚ್ಚಾಗುತ್ತಿದ್ದು ಮಕ್ಕಳು ತಮ್ಮ ಒಟ್ಟಾರೆ ಯೋಗಕ್ಷೇಮವನ್ನು ರೂಪಿಸುವ ಅನುಭವಗಳಿಂದ ದೂರ ಸರಿಯುತ್ತಿರುವುದು ನಿಜವೇ ;

(ಈ) ವಿದ್ಯಾರ್ಥಿಗಳು ಶಿಕ್ಷಣ ಮನರಂಜನೆ ಮತ್ತು ಸಂವಹನಕ್ಕಾಗಿ ಸ್ಮಾರ್ಟ್ ಫೋನ್‌ಗಳನ್ನು ಪೂರ್ವ ನಿಯೋಜಿತ ಪರಿಹಾರವಾಗಿ ಬಳಸುತ್ತಿದ್ದು, ಇದು ಚಿಕ್ಕ ವಯಸ್ಸಿನಲ್ಲಿಯೇ ಮಾನಸಿಕ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) Annual Status of Education Report ವರದಿಯ ಮತ್ತು ವಿದ್ಯಾರ್ಥಿಗಳ ಸಮಸ್ಯೆಗಳ ಕುರಿತು ಸರ್ಕಾರದ ವತಿಯಿಂದ ಕೈಗೊಂಡಿರುವ ಕ್ರಮಗಳಾವುವು ? (ವಿವರವಾದ ಮಾಹಿತಿ ನೀಡುವುದು)

## Chat Generative Pre-Trained Transformer ವರದಿಯ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೫೧ (೪೬೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ Chat Generative Pre-Trained Transformer (CatGPT) ನಿ; ತಂತ್ರಾಂಶದ ಬಳಕೆ ಕುರಿತು ರಾಜ್ಯ ಸರ್ಕಾರವು ನೀತಿಯನ್ನು ಜಾರಿಗೊಳಿಸಲಾಗಿದೆಯೇ ; ಇಲ್ಲವಾದಲ್ಲಿ ಈ ನೀತಿಯನ್ನು ಯಾವ ಕಾಲಮಿತಿಯಲ್ಲಿ ಜಾರಿಗೊಳಿಸಲಾಗುವುದು ; (ಮಾಹಿತಿ ನೀಡುವುದು)

(ಆ) ಸದರಿ ತಂತ್ರಾಂಶವನ್ನು Essay and Assignments ನಂತಹ ಕಾರ್ಯಕ್ರಮಗಳಿಗೆ ಸ್ವಯಂಚಾಲಿತವಾಗಿ ರಚಿಸಲು ದುರುಪಯೋಗ ಪಡಿಸಿಕೊಳ್ಳುತ್ತಿದ್ದು, ಈ ಕುರಿತು ಸರ್ಕಾರಕ್ಕೆ ಮಾಹಿತಿ ಇದೆಯೇ ; ಇದ್ದಲ್ಲಿ, ಇದರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿರುವ ಖಾಲಿ ಹುದ್ದೆಗಳನ್ನು ತುಂಬುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೩೫೨ (೩೩೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ, ಬೋಧಕೇತರ ಹುದ್ದೆಗಳೆಷ್ಟು ; (ವಿಷಯವಾರು, ವಿಭಾಗವಾರು ಮಾಹಿತಿ ನೀಡುವುದು)

(ಆ) ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಹಲವಾರು ವರ್ಷಗಳಿಂದ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡದಿರಲು ಕಾರಣಗಳೇನು ;

(ಇ) ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಖಾಯಂ ಬೋಧಕ/ ಬೋಧಕೇತರ ಹುದ್ದೆಗಳನ್ನು ತುಂಬದೆ ಇರುವುದರಿಂದ ಆಡಳಿತ ಮತ್ತು ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆ ಆಗುತ್ತಿದ್ದು ಇದುವರೆವಿಗೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡದಿರಲು ಕಾರಣವೇನು ;

(ಈ) ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ?

## ಅನುದಾನಿತ ಐ.ಟಿ.ಐ ಕಾಲೇಜುಗಳ ನೌಕರರುಗಳಿಗೆ ಶ್ರೀ ಥಾಮಸ್ ವರದಿಯಂತೆ ಸೇವಾ ನಿಯಮ ಜಾರಿಗೊಳಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೩೫೩ (೩೯೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅನುದಾನಿತ ಐ.ಟಿ.ಐ. ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯನ್ನು ಯಾವಾಗ ಜಾರಿಗೆ ತರಲಾಗಿದೆ ; (ವಿವರ ಮತ್ತು ಆದೇಶ ನೀಡುವುದು)

(ಆ) ಸದರಿಯವರಿಗೆ ಥಾಮಸ್ ನೇತೃತ್ವದ ವರದಿಯಂತೆ ಇದುವರೆವಿಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವ ಎಲ್ಲಾ ಸೌಲಭ್ಯಗಳನ್ನು ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಥಾಮಸ್ ವರದಿಯ ಶಿಫಾರಸ್ಸಿನಂತೆ ಸೇವಾ ನಿಯಮಗಳನ್ನು ರೂಪಿಸದೆ ಇರುವುದರಿಂದ ಸಾವಿರಾರು ನೌಕರರು ಯಾವುದೇ ಸೌಲಭ್ಯಗಳಿಲ್ಲದೆ ವಂಚಿತರಾಗಿರುವವರಿಗೆ ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರಚಿಸಿ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತದೆ ; (ವಿವರ ನೀಡುವುದು)

(ಈ) ೨೦೦೬ರ ನಂತರ ಅನುದಾನಕ್ಕೊಳಪಡಿಸಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವಂತೆ ನಿವೃತ್ತಿ ನಂತರ ರಜೆ ನಗದೀಕರಣವನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುವುದು ?

## ಅನ್ನಭಾಗ್ಯ ಯೋಜನೆಯಲ್ಲಿ ಆಹಾರ ಧಾನ್ಯಗಳ ಸರಬರಾಜು ವಾಹನಗಳಿಗೆ ಜಿ.ಪಿ.ಎಸ್. (GPS) ಅಳವಡಿಸುವ ಬಗ್ಗೆ

**ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೪ (೪೩೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಅರ್ಹ ಬಡ ಕುಟುಂಬಗಳಿಗೆ ಪೂರೈಸಲಾಗುವ ಆಹಾರ ಧಾನ್ಯಗಳನ್ನು ಅಕ್ರಮವಾಗಿ ಬೇರೆ

ರಾಜ್ಯಗಳಿಗೆ ಹಾಗೂ ಕಾಳಸಂತೆಗಳಲ್ಲಿ ಸರಬರಾಜಾಗುವ ದಿಶೆಯಲ್ಲಿ ಜಾಗೃತ ದಳಗಳು ಅಂತಹವರ ವಿರುದ್ಧ ಅನೇಕ ದೂರು ದಾಖಲು ಮಾಡುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಂತಹ ಅಕ್ರಮ ಸಾಗಾಣಿಕೆಯನ್ನು ತಡೆಗಟ್ಟಲು ಆಹಾರ ಧಾನ್ಯಗಳ ಸರಬರಾಜು ವಾಹನಗಳಿಗೆ ಜಿ.ಪಿ.ಎಸ್. (GPS) ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಸರ್ಕಾರವು ಇಂತಹ ಪ್ರಕರಣಗಳನ್ನು ತಡೆಗಟ್ಟಲು ಜಿ.ಪಿ.ಎಸ್. (GPS) ಅಳವಡಿಸುವುದಲ್ಲದೇ ಬೇರೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವ ಬಗ್ಗೆ

**ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೫ (೪೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳು ಸೇರಿದಂತೆ ರಾಜ್ಯದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಎಷ್ಟು ಶೌಚಾಲಯಗಳಿವೆ ; ಈ ಶೌಚಾಲಯಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ವಿದ್ಯಾರ್ಥಿಗಳು ಹಾಗೂ ಪೋಷಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಶಾಲೆಗಳಲ್ಲಿ ಶೌಚಾಲಯಗಳಲ್ಲಿ ಸ್ವಚ್ಛತೆ ಕಾಪಾಡಲು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಶಾಲೆಗಳಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ ; ನೇಮಕಾತಿ ಮಾಡಿಕೊಳ್ಳದೆ ಇದ್ದಲ್ಲಿ ಕಾರಣವೇನು ;

(ಇ) ರಾಜ್ಯದಲ್ಲಿರುವ ಎಷ್ಟು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು ಹಾಗೂ ಶೌಚಾಲಯ ಇರುವುದಿಲ್ಲ ಹಾಗೂ ಕುಡಿಯುವ ನೀರು, ಶೌಚಾಲಯಗಳ ಸೌಲಭ್ಯ ಒದಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## 'ಅನ್ನಭಾಗ್ಯ ಯೋಜನೆ'ಯ ಹೆಚ್ಚುವರಿ ಅಕ್ಕಿ ಬದಲು ನೀಡುತ್ತಿದ್ದ ಹಣ ಬಾಕಿ ಇರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು):–**

೩೫೬ (೩೫೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ಅನ್ನಭಾಗ್ಯ ಯೋಜನೆ'ಯ ಹೆಚ್ಚುವರಿ ಅಕ್ಕಿ ಬದಲು ನೀಡುತ್ತಿದ್ದ ಅದರ ಬಾಬ್ತಿನ ಹಣ ಕಳೆದ ಐದು ತಿಂಗಳಿನಿಂದ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿನ ಫಲಾನುಭವಿಗಳ ಖಾತೆಗೆ ಇನ್ನೂ ಜಮೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ತಿಂಗಳ ಹಣ ಫಲಾನುಭವಿಗಳ ಖಾತೆಗೆ ಜಮೆ ಮಾಡಲು ಇನ್ನೂ ಬಾಕಿ ಉಳಿದಿದೆ ; ಅದರ ಒಟ್ಟು ಮೊತ್ತವೆಷ್ಟು ;

(ಇ) ಫಲಾನುಭವಿಗಳ ಖಾತೆಗೆ ಹಣ ಜಮೆ ಮಾಡಲು ಈ ರೀತಿ ಪದೇ ಪದೇ ವಿಳಂಬವಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಸೂಕ್ತ ಕ್ರಮವಹಿಸದೇ ಇರಲು ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಬಾಕಿ ಇರುವ ಪೂರ್ಣ ಮೊತ್ತವನ್ನು ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುವುದು ?

## ಅರಣ್ಯ ಒತ್ತುವರಿ ಪ್ರಕರಣಗಳ ಸಕ್ರಮ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು):-**

೩೫೭ (೩೫೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯ ಒತ್ತುವರಿಯನ್ನು ಕೆಲವು ಷರತ್ತುಗಳನ್ನು ವಿಧಿಸಿ ಸಕ್ರಮಗೊಳಿಸಲು ೧೯೯೬ರಲ್ಲಿ ಕೇಂದ್ರ ಸರ್ಕಾರ ಅನುಮತಿ ನೀಡಿದ ನಂತರ, ಆ ಕುರಿತು ರಾಜ್ಯ ಸರ್ಕಾರ ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಅರ್ಹ ಒತ್ತುವರಿದಾರರ ಪ್ರಕರಣಗಳು ಕೈಬಿಟ್ಟು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಅರ್ಹ ಒತ್ತುವರಿದಾರರ ಎಷ್ಟು ಪ್ರಕರಣಗಳು ಕೈಬಿಟ್ಟುಹೋಗಿವೆ ಎಂದು ಆ ನಂತರದಲ್ಲಿ ಗುರುತಿಸಲಾಗಿತ್ತು ;

(ಇ) ಕೈಬಿಟ್ಟು ಹೋಗಿವೆ ಎಂದು ಗುರುತಿಸಲಾದ ಎಲ್ಲಾ ಅರ್ಹ ಒತ್ತುವರಿದಾರರ ಪ್ರಕರಣಗಳನ್ನು ಕೇಂದ್ರ ಸರ್ಕಾರ ಅನುಮತಿ ಕೋರಿ ನಂತರದಲ್ಲಿ ಪ್ರಸ್ತಾವನೆಗಳನ್ನು ಮತ್ತೆ ಸಲ್ಲಿಸಲಾಗಿದೆಯೇ ;

(ಈ) ಕೈಬಿಟ್ಟುಹೋಗಿದ್ದು, ನಂತರ ಸಲ್ಲಿಸಲಾದ ಈ ಎಲ್ಲಾ ಪ್ರಸ್ತಾವನೆಗಳಲ್ಲಿನ ಪ್ರಕರಣಗಳನ್ನು ಈಗಾಗಲೇ ಸಕ್ರಮಗೊಳಿಸಲಾಗಿದೆಯೇ ;

(ಉ) ಕೈಬಿಟ್ಟು ಹೋಗಿ ನಂತರ ಸಲ್ಲಿಸಲಾದ ಈ ಎಲ್ಲಾ ಪ್ರಸ್ತಾವನೆಗಳಲ್ಲಿನ ಪ್ರಕರಣಗಳನ್ನು ಈವರೆವಿಗೂ ಸಕ್ರಮಗೊಳಿಸದಿದ್ದಲ್ಲಿ ಅದಕ್ಕೆ ಕಾರಣಗಳೇನು ?

## ಹಾವು ಕಡಿತಕ್ಕೆ ಸಕಾಲಿಕ ಚಿಕಿತ್ಸೆ ಹಾಗೂ ಔಷಧಿ ಸಿಗದಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು):-**

೩೫೮ (೩೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾವು ಕಡಿತಕ್ಕೆ ಸಕಾಲಿಕ ಚಿಕಿತ್ಸೆ ಹಾಗೂ ಅಗತ್ಯವಿರುವ ಔಷಧಿ ಸಿಗದಿರುವುದರಿಂದ ಕಳೆದ ವರ್ಷ ಹಾವು ಕಡಿತದಿಂದ ಮೃತಪಟ್ಟವರ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕೆಲವರು ಸಕಾಲದಲ್ಲಿ ಚಿಕಿತ್ಸೆ ಸಿಗದ ಕಾರಣದಿಂದ ಮತ್ತು ಇನ್ನೂ ಕೆಲವರು ಅಗತ್ಯವಿರುವ ಔಷಧಿ ಸಿಗದೆ ಮೃತಪಟ್ಟಿರುವುದಾಗಿ ವರದಿಯಾಗಿದ್ದು ಇದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಯಾವ ಕಾಲಮಿತಿಯೊಳಗೆ, ರಾಜ್ಯದಾದ್ಯಂತ ಎಲ್ಲಾ ಮಟ್ಟದ ಆರೋಗ್ಯ ಕೇಂದ್ರಗಳಲ್ಲಿ ಹಾವು ಕಡಿತಕ್ಕೆ ಅಗತ್ಯವಿರುವ ಔಷಧಿ ಲಭ್ಯವಿರುವಂತೆ ಹಾಗೂ ಸಕಾಲದಲ್ಲಿ ಮತ್ತು ತ್ವರಿತವಾಗಿ ಅಗತ್ಯ ಚಿಕಿತ್ಸೆ ದೊರೆಯುವಂತೆ ಮಾಡಲು ಕ್ರಮ ವಹಿಸಲಾಗುವುದೇ ?

## ಉಜಿರೆ ಗ್ರಾಮದಲ್ಲಿ ೩೦ ಕೆ.ವಿ. ವಿದ್ಯುತ್ ಘಟಕ ಪ್ರಾರಂಭ ಮಾಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು):–**

೩೫೫ (೩೬೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದಲ್ಲಿ ೩೦ ಕೆ.ವಿ. ವಿದ್ಯುತ್ ಘಟಕ ಪ್ರಾರಂಭ ಮಾಡುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ನಿಗದಿ ಮಾಡಿ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆಯೇ ;

(ಇ) ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ಈಗಾಗಲೇ ನಿಗದಿ ಮಾಡಿ, ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಸಹ ಪೂರ್ಣಗೊಳಿಸಲಾಗಿದ್ದಲ್ಲಿ, ಇದುವರೆಗೂ ಕಾಮಗಾರಿ ಪ್ರಾರಂಭ ಮಾಡದೇ ಇರಲು ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ, ಸದರಿ ಕಾಮಗಾರಿಯನ್ನು ಪ್ರಾರಂಭಿಸಿ ಲೋಕಾರ್ಪಣೆಗೊಳಿಸಲಾಗುವುದು ?

# ಪಂಚಕರ್ಮ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ನಾತಕೋತ್ತರ ವೈದ್ಯರು ಹಾಗೂ ಶುಶ್ರೂಶಕರುಗಳನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು):-**

೩೬೦ (೩೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎನ್.ಎಚ್.ಎಮ್. ಆಯುಷ್ ವಿಭಾಗದಲ್ಲಿ ಖಾಯಂ ಹಾಗೂ ಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಅವರಿಗೆ ಪ್ರಸ್ತುತ ನೀಡುತ್ತಿರುವ ವೇತನ ಮತ್ತು ಭತ್ಯೆಗಳ ವಿವರಗಳೇನು ;

(ಆ) ಕಳೆದ ೦೩ ವರ್ಷಗಳಲ್ಲಿ ಎನ್.ಎಚ್.ಎಮ್. ಆಯುಷ್ ವಿಭಾಗಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ದೊರೆತಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಎನ್.ಎಚ್.ಎಮ್. ಆಯುಷ್ ವಿಭಾಗದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಯಕ್ರಮ ಅಧಿಕಾರಿಗಳ ನೇಮಕಾತಿ ಮಾನದಂಡಗಳು ಅವರು ನಿರ್ವಹಿಸುತ್ತಿರುವ ಕರ್ತವ್ಯಗಳು ಯಾವುವು ; ಅವರಿಗೆ ನೀಡುತ್ತಿರುವ ವೇತನ ಮತ್ತು ಭತ್ಯೆಗಳ ವಿವರಗಳನ್ನು ಒದಗಿಸುವುದು ;

(ಈ) ಆಯುಷ್ ಇಲಾಖೆಯಲ್ಲಿ ಖಾಯಂ ವೈದ್ಯರು ಹಾಗೂ ಶುಶ್ರೂಷಕರು ಇರುವಂತೆ ೧೩ ಪಂಚಕರ್ಮ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ನಾತಕೋತ್ತರ ವೈದ್ಯರು ಹಾಗೂ ಶುಶ್ರೂಷಕರನ್ನು ಖಾಯಂಗೊಳಿಸಲು ಸರ್ಕಾರ ಅಗತ್ಯ ಕ್ರಮ ವಹಿಸಿದೆಯೇ ;

(ಉ) ಪಂಚಕರ್ಮ ಘಟಕಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಸ್ನಾತಕೋತ್ತರ ವೈದ್ಯರು ಹಾಗೂ ಶುಶ್ರೂಷಕರುಗಳು ಸುಮಾರು ೧೦-೧೫ ವರ್ಷಗಳಿಂದ ಕಡಿಮೆ ವೇತನದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಮಾನವೀಯತೆ ಮತ್ತು ಸಾಮಾಜಿಕ ಭದ್ರತೆಯ ದೃಷ್ಟಿಯಿಂದ ಇವರುಗಳನ್ನು ಖಾಯಂಗೊಳಿಸಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ ?

## ರಾಜ್ಯದಲ್ಲಿ ಅರಣ್ಯ-ಗೋಮಾಳ ಜಾಗಗಳ ಜಂಟಿ ಸರ್ವೆಗೆ ಬಾಕಿ ಇರುವ ಪ್ರಕರಣಗಳು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೬೧ (೩೮೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅರಣ್ಯ ಹಾಗೂ ಗೋಮಾಳ ಜಾಗಗಳ ಜಂಟಿ ಸರ್ವೆ ಮಾಡಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಅರಣ್ಯ ಹಾಗೂ ಗೋಮಾಳ ಜಾಗಗಳ ಜಂಟಿ ಸರ್ವೆ ನಡೆಸಿ ಸರ್ವೆ ವರದಿಯನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಅರಣ್ಯ-ಗೋಮಾಳ ಜಾಗಗಳ ಜಂಟಿ ಸರ್ವೆ ಬಾಕಿ ಇರುವುದರಿಂದ ಬಹುತೇಕ ಜಿಲ್ಲೆಗಳಲ್ಲಿ ೫೦, ೫೩, ೫೭ ಮತ್ತು ೯೪ಸಿ ಅರ್ಜಿಗಳು ವಿಲೇವಾರಿಯಾಗದೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಯಾವ ಕಾಲಮಿತಿಯಲ್ಲಿ ಅರಣ್ಯ–ಗೋಮಾಳ ಜಾಗಗಳ ಜಂಟಿ ಸರ್ವೆ ಪೂರ್ಣಗೊಳಿಸಿ ಬಾಕಿ ಇರುವ ೫೦, ೫೩, ೫೭ ಹಾಗೂ ೯೪ಸಿ ಅರ್ಜಿಗಳನ್ನು ವಿಲೇವಾರಿ ಮಾಡಲಾಗುವುದು ?

## ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿಗೆ ಹೊಸ ಕಟ್ಟಡ ನಿರ್ಮಾಣದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೨ (೩೮೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ನಗರದಲ್ಲಿ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜ್ ಪ್ರಾರಂಭವಾಗಿದ್ದು ಯಾವಾಗ ;

(ಆ) ಸದರಿ ಕಾಲೇಜಿಗೆ ಸ್ವಂತ ಕಟ್ಟಡ ಇಲ್ಲದೆ ತಾತ್ಕಾಲಿಕ ಕಟ್ಟಡದಲ್ಲಿ ತರಗತಿಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಕಾಲೇಜಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಅನುದಾನ ಮಂಜೂರು ಮಾಡಲಾಗಿದೆಯೇ ; ಮಾಡಿದ್ದರೆ ಯಾವಾಗ ಹಾಗೂ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ;

(ಈ) ಕಟ್ಟಡ ನಿರ್ಮಾಣ ಕಾಮಗಾರಿ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯಲ್ಲಿ ಕಟ್ಟಡವನ್ನು ನಿರ್ಮಿಸಲಾಗುವುದು ?

## ರಾಜ್ಯದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೩ (೩೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾಗಿರುವ ಹಾಗೂ ; ಪ್ರಸ್ತುತ ಖಾಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ಶಿಕ್ಷಕರ ಕೊರತೆಯಿಂದ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಕುಸಿತಕ್ಕೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಶಿಕ್ಷಕರನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಈ) ಕಳೆದ ೨ ವರ್ಷದಿಂದ ಶಿಕ್ಷಕರ ಭರ್ತಿಗಾಗಿ ಎಷ್ಟು ಅಧಿಸೂಚನೆಗಳನ್ನು ಹೊರಡಿಸಲಾಗಿದೆ ; ಎಷ್ಟು ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಚಿಕ್ಕಮಗಳೂರು ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆ ಅನುಷ್ಠಾನದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೪ (೩೮೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆ ಅನುಷ್ಠಾನಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆ ಅನುಷ್ಠಾನಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಆ) ಯಾವ ಕಾಲಮಿತಿಯಲ್ಲಿ ಚಿಕ್ಕಮಗಳೂರು ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು ? (ವಿವರ ಒದಗಿಸುವುದು)

## ಸಂರಕ್ಷಿತ ಅರಣ್ಯ ಪ್ರದೇಶಕ್ಕೆ ಸೇರಿರುವ ಗ್ರಾಮಗಳ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೬೫ (೩೫೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕಿನ ಸಾತನೂರು ಹೋಬಳಿಯ ಕುರಿಮಂದೆ, ಸಂಭಾಪುರ, ಸೂಲಿಗೆರೆ ಗ್ರಾಮಗಳು ಸಂರಕ್ಷಿತ ಅರಣ್ಯ ಪ್ರದೇಶ/ಹುಲಿ ಸಂರಕ್ಷಿತ ಅರಣ್ಯ ವಲಯಕ್ಕೆ ಸೇರುತ್ತದೆಯೇ ;

(ಆ) ಸೇರಿದ್ದಲ್ಲಿ, ಈ ಗ್ರಾಮಗಳ ಜನರಿಗೆ ಪರ್ಯಾಯ ಗ್ರಾಮ/ವಾಸಸ್ಥಳ ಗುರುತಿಸಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಬಿಸಿಯೂಟ ಯೋಜನೆಯ ಮೊಟ್ಟೆ ದರಗಳನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಎಸ್. ರವಿ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೬೬ (೩೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರ ಜಾರಿಗೆ ತಂದಿರುವ ಬಿಸಿಯೂಟದ ಯೋಜನೆಯಡಿ ಪ್ರತಿ ಮೊಟ್ಟೆಗೆ ರೂ.೬/- ನಿಗಧಿಪಡಿಸಿದ್ದು, ಮಾರುಕಟ್ಟೆಯಲ್ಲಿ ಮೊಟ್ಟೆ ದರ ಹೆಚ್ಚಿರುವುದರಿಂದ ಪ್ರತಿ ಮೊಟ್ಟೆಗೆ ಹೆಚ್ಚುವರಿ ಹಣವನ್ನು ಶಿಕ್ಷಕರ ಭರಿಸಬೇಕಾದ ಪರಿಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಾರುಕಟ್ಟೆ ದರದಂತೆ ಮೊಟ್ಟೆಯ ದರವನ್ನು ಹೆಚ್ಚಳ ಮಾಡಿ ಬಿಸಿಯೂಟ ಯೋಜನೆಯಡಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಅಕ್ರಮ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕುರಿತು

**ಶ್ರೀ ರವಿಕುಮಾರ್ ಎನ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೩೬೭ (೩೪೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೫, ಜನವರಿ ೯ರ ಬಳಿಕ ಬೆಂಗಳೂರು ನಗರ ಜಿಲ್ಲೆಯ ನೀಲಸಂದ್ರ ಗ್ರಾಮದ ಸರ್ವೆ ನಂ-೭೯ರಲ್ಲಿ ೧೫ ಎಕರೆ ೧೨ ಗುಂಟೆ ಜಮೀನಿನಲ್ಲಿ ಅಕ್ರಮವಾಗಿ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿದ ಬೆಸ್ಕಾಂ ಅಧಿಕಾರಿಗಳನ್ನು ಅಮಾನತ್ತು ಮಾಡಿ ಇಲಾಖಾ ಕ್ರಮಕೈಗೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ;

(ಆ) ಸದರಿ ಸರ್ವೆ ನಂ.ನ ಭೂಮಿಯು ಮುಜರಾಯಿ ಇಲಾಖೆಯ ಜಾಗ ಎಂಬುದಾಗಿ ಇಲಾಖೆಯು ಗಮನಕ್ಕೆ ಯಾವಾಗ ಬಂದಿರುತ್ತದೆ ; (ವಿವರ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆಯ ನೀಲಸಂದ್ರ ಗ್ರಾಮದ ಸರ್ವೆ ನಂ.೭೯ರಲ್ಲಿನ ಎಷ್ಟು ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ; ಕಲ್ಪಿಸದಿದ್ದಲ್ಲಿ, ಯಾವ ಆಧಾರದಲ್ಲಿ ವಿದ್ಯುತ್ ಸಂಪರ್ಕ ನೀಡಲಾಗಿದೆ ;

(ಈ) ದೇವಸ್ಥಾನದ ಜಾಗದಲ್ಲಿ ಅಕ್ರಮವಾಗಿ ಒತ್ತುವರಿ ಮಾಡಿ ನಿರ್ಮಿಸಿದ ಅನಧಿಕೃತ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡಲು ಕಾರಣವೇನು ?

## ಖಾಸಗಿ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ರವಿಕುಮಾರ್ ಎನ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೩೬೮ (೩೪೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಖಾಸಗಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; (ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ಈ ವಿಶ್ವವಿದ್ಯಾಲಯಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಹೊರ ರಾಜ್ಯದ ಮತ್ತು ಹೊರ ದೇಶದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಇ) ಈ ವಿಶ್ವವಿದ್ಯಾಲಯಗಳಲ್ಲಿ ಯಾವ ಯಾವ ಕೋರ್ಸ್‌ಗಳನ್ನು ಬೋಧಿಸಲಾಗುತ್ತಿದೆ ; (ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಈ) ಈ ಖಾಸಗಿ ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗೆ ವಿಧಿಸುವ ಶುಲ್ಕವೆಷ್ಟು ; ಸರ್ಕಾರ ಗರಿಷ್ಠ ಶುಲ್ಕ ನಿಗಧಿಪಡಿಸಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ರವಿಕುಮಾರ್ ಎನ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೯ (೩೪೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; (ಖಾಸಗಿ ಹಾಗೂ ಸರ್ಕಾರದ ಅನುದಾನದಿಂದ ನಡೆಯುತ್ತಿರುವ ವಿಶ್ವವಿದ್ಯಾಲಯಗಳ ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯಗಳಿಗೆ ಮಂಜೂರಾದ, ಭರ್ತಿ ಮಾಡಲಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಖಾಸಗಿ ಹಾಗೂ ಸರ್ಕಾರದ ಅನುದಾನದಿಂದ ನಡೆಯುತ್ತಿರುವ ವಿಶ್ವವಿದ್ಯಾನಿಲಯಗಳ ಹೆಸರುಗಳೊಂದಿಗೆ ವಿವರ ನೀಡುವುದು)

(ಇ) ಈ ವಿಶ್ವವಿದ್ಯಾಲಯಗಳಿಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ದೊರೆಯುವ ಅನುದಾನವೆಷ್ಟು ? (ವಿವರ ನೀಡುವುದು)

## ಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ರವಿಕುಮಾರ್ ಎನ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೦ (೩೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆ, ಜಗಳೂರು ತಾಲ್ಲೂಕು, ಹುಚ್ಚಂಗಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಕಂಪ್ಯೂಟರ್ ಲ್ಯಾಬ್ ಸೌಲಭ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಆ) ಈ ಶಾಲೆಯಲ್ಲಿರುವ ೩೦೦ ಮಕ್ಕಳಲ್ಲಿ ೨೩೦ಕ್ಕೂ ಹೆಚ್ಚು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಕ್ಕಳು ವ್ಯಾಸಂಗ ಮಾಡುತ್ತಿದ್ದು ಎಸ್‌ಸಿ/ಎಸ್‌ಟಿ ಯೋಜನೆಯ ಅನ್ವಯ ಕಂಪ್ಯೂಟರ್ ಲ್ಯಾಬ್ ಸೌಲಭ್ಯ ಕಲ್ಪಿಸಲು ಕ್ರಮ ವಹಿಸಲಾಗುವುದೇ ;

(ಇ) ಸದರಿ ಶಾಲೆಯಲ್ಲಿ ಎಸ್‌ಸಿ/ಎಸ್‌ಟಿ ವರ್ಗದ ಮಕ್ಕಳು ಮಾತ್ರವೇ ಓದುತ್ತಿದ್ದು ಈ ಶಾಲೆಗೆ ವಿಶೇಷ ಯೋಜನೆಯ ಅನ್ವಯ ಸೈನ್ಸ್ ಲ್ಯಾಬ್ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಕೈಗೊಳ್ಳಲಾದ ಯೋಜನೆಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೩೭೧ (೩೭೭) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಕೈಗೊಳ್ಳಲಾದ ಯೋಜನೆಗಳು ಯಾವುವು ?

(ಆ) ಈ ಯೋಜನೆಗಳ ಲಾಭ ಪಡೆದುಕೊಂಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಇ) ನಿರುದ್ಯೋಗಿ ಯುವಕರಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಉದ್ಯೋಗಾವಕಾಶ ಒದಗಿಸಲಾಗಿದೆಯೇ ;

(ಈ) ನಿರುದ್ಯೋಗಿ ಯುವಕರಿಗೆ ಉದ್ಯೋಗವಕಾಶ ಒದಗಿಸಲು ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ಒದಗಿಸುವುದು)

(ಉ) ಇದುವರೆಗೂ ಬಿಡುಗಡೆಯಾದ ಅನುದಾನವೆಷ್ಟು ಮತ್ತು ಎಷ್ಟು ಯುವಕರಿಗೆ ಉದ್ಯೋಗ ಕಲ್ಪಿಸಲಾಗಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

## ಶಿಕ್ಷಣ ಇಲಾಖೆಯಲ್ಲಿ ಬೋಧಕ ವೃಂದದ ಹುದ್ದೆಗಳ ಅನುಪಾತದ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೩೭೨ (೩೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆಯಲ್ಲಿ ಬೋಧಕ ವೃಂದದ ಹುದ್ದೆಗಳ ಅನುಪಾತಕ್ಕೆ ತಕ್ಕಂತೆ ಬೋಧಕೇತರ ವೃಂದದ ಹುದ್ದೆಗಳು ಮಂಜೂರಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಮಂಜೂರಾಗಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದ ಹಾಗೂ ಹುದ್ದೆವಾರು ಮತ್ತು ಆಯುಕ್ತವಲಯವಾರು ಮಾಹಿತಿ ನೀಡುವುದು)

(ಆ) ಬೋಧಕ ಹುದ್ದೆಗಳನ್ನು ಮಂಜೂರು ಮಾಡಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ; ಮಾಹಿತಿ ನೀಡುವುದು ;

(ಇ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಬೋಧಕ ಹುದ್ದೆಗಳನ್ನು ಮಂಜೂರು ಮಾಡುವ ಮಾದರಿಯಲ್ಲಿಯೇ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಮತ್ತು ಬೋಧಕ ಹುದ್ದೆಗಳಿಗನುಗುಣವಾಗಿ ಬೋಧಕೇತರ ಹುದ್ದೆಗಳನ್ನು ಶಾಲೆಗಳಿಗೆ ಮತ್ತು ಕಛೇರಿಗಳಿಗೆ ಮಂಜೂರು ಮಾಡುವ ಕುರಿತು ಸರ್ಕಾರಕ್ಕಿರುವ ತೊಂದರೆಗಳೇನು ; ಬೋಧಕೇತರ ವೃಂದದ ಎಲ್ಲಾ ಹುದ್ದೆಗಳ ಮಂಜೂರಾತಿ ಆದೇಶದ ಪ್ರತಿಗಳನ್ನು ನೀಡುವುದು ;

(ಈ) ನೂತನವಾಗಿ ಪ್ರಾರಂಭಿಸಿದ ಕೆ.ಪಿ.ಎಸ್. ಶಾಲೆಗಳಿಗೆ ಬೋಧಕ ಹುದ್ದೆಗಳನ್ನು ಮಂಜೂರು ಮಾಡಿದಂತೆಯೇ ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ ; ಮಾಡದೇ ಇಲ್ಲದಿದ್ದಲ್ಲಿ ಕಾರಣಗಳೇನು; ಮಾಡಿದ್ದಲ್ಲಿ, ಆದೇಶದ ಪ್ರತಿಗಳನ್ನು ನೀಡುವುದು ;

(ಉ) ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಮತ್ತು ಬೋಧಕ ಹುದ್ದೆಗಳಿಗನುಗುಣವಾಗಿ ಶಾಲೆಗಳಿಗೆ ಮತ್ತು ವಿವಿಧ ಹಂತದ ಕಛೇರಿಗಳಿಗೆ ಹಾಗೂ ನೂತನವಾಗಿ ಪ್ರಾರಂಭಿಸಿರುವ ಕೆ.ಪಿ.ಎಸ್. ಶಾಲೆಗಳಿಗೆ ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡುವ ಕುರಿತು ಸರ್ಕಾರದ ನಿಲುವೇನು ? (ಮಾಹಿತಿ ನೀಡುವುದು)

## ಶಿಕ್ಷಣ ಇಲಾಖೆಯಲ್ಲಿ ಬೋಧಕೇತರ ವೃಂದಗಳಲ್ಲಿ ಮಂಜೂರಾದ ಹುದ್ದೆಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೩೭೩ (೩೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆಯಲ್ಲಿ ಬೋಧಕೇತರ ವೃಂದಗಳಲ್ಲಿ ಮಂಜೂರಾಗಿರುವ ಹುದ್ದೆಗಳಿಗೆ ಸಮರ್ಪಕವಾದ ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದೇ ಇರುವುದರಿಂದ ಅವರುಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಇಲಾಖೆಯಲ್ಲಿ ಮಂಜೂರಾಗಿರುವ ಒಟ್ಟು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ಆ ಎಲ್ಲಾ ಹುದ್ದೆಗಳ ಮಂಜೂರಾತಿ ಆದೇಶದ ಪ್ರತಿ ನೀಡುವುದು)

(ಆ) ದಿನಾಂಕ:೩೦/೦೬/೨೦೨೨ಕ್ಕಿದ್ದಂತೆ ಈ ಇಲಾಖೆಯಲ್ಲಿ ಮಂಜೂರಾಗಿರುವ ಎಲ್ಲಾ ವೃಂದದ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ಜಿಲ್ಲಾವಾರು, ವಿಭಾಗವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ದಿನಾಂಕ:೩೦/೦೬/೨೦೨೨ಕ್ಕಿದ್ದಂತೆ ನೇರ ನೇಮಕಾತಿಗೆ, ಬಡ್ತಿಗೆ ಕಾಯ್ದಿರಿಸಲಾಗಿರುವ ಎಲ್ಲಾ ವೃಂದದ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ಅವುಗಳ ಸಂಪೂರ್ಣ ಮಾಹಿತಿಯನ್ನು ವೃಂದವಾರು, ಜಿಲ್ಲಾವಾರು. ವಿಭಾಗವಾರು ನೀಡುವುದು)

(ಈ) ದಿನಾಂಕ:೩೦/೦೬/೨೦೨೨ಕ್ಕಿದ್ದಂತೆ ಎಲ್ಲಾ ವೃಂದದ ಬೋಧಕೇತರ ಹುದ್ದೆಗಳು ಅವಶ್ಯಕತೆ ಇದೆಯೇ ; ಹಾಗಿದ್ದಲ್ಲಿ, ಅವಶ್ಯವಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಅವುಗಳ ಸಂಪೂರ್ಣ ಮಾಹಿತಿಯನ್ನು ವೃಂದವಾರು, ಜಿಲ್ಲಾವಾರು, ವಿಭಾಗವಾರು ನೀಡುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ಬೋಧಕೇತರ ವೃಂದದ ಹುದ್ದೆಗಳಿಗೆ ಬಡ್ತಿ ನೀಡುವಾಗ ಅನುಸರಿಸುವ ಅನುಪಾತ ಪಾಲನೆ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳಿಗೆ ಬಡ್ತಿ ನೀಡಲಾಗಿದೆ ಹಾಗೂ ನೇರ ನೇಮಕಾತಿ ಮಾಡಲಾಗಿದೆಯೇ ? (ಹುದ್ದೆವಾರು ವಿವರಗಳನ್ನು ನೀಡುವುದು)

# ದಾಖಲಾತಿ ಕಡಿಮೆ ಇರುವ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ವಿಲೀನಗೊಳಿಸಿ ಮಾದರಿ ಶಾಲೆ ನಿರ್ಮಾಣ ಮಾಡುವ ಕಾರ್ಯ ಯೋಜನೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೩೭೪ (೪೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ಕುಂದು ಕೊರತೆ ಮತ್ತು ಇತರೆ ಯಾವ ವಿಷಯಗಳ ಕುರಿತು ಅಧ್ಯಯನ ಮಾಡಿ ವರದಿ ಸಲ್ಲಿಸಲು ಯಾವಾಗ ಶಾಲಾ ಸುಧಾರಣಾ ಆಯೋಗವನ್ನು ರಚಿಸಲಾಗಿತ್ತು ಮತ್ತು ಆ ಸಮಿತಿಯಲ್ಲಿದ್ದ ಸದಸ್ಯರು ಯಾರ್‍ಯಾರು ;

(ಆ) ಶಾಲಾ ಸುಧಾರಣಾ ಆಯೋಗ ಅಂತಿಮವಾಗಿ ಯಾವಾಗ ವರದಿ ಸಲ್ಲಿಸಿದೆ ಮತ್ತು ಸಮಿತಿಯ ಶಿಫಾರಸ್ಸುಗಳೇನು ; (ವಿವರ ನೀಡುವುದು)

(ಇ) ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ೧೦ಕ್ಕಿಂತ ಕಡಿಮೆ ದಾಖಲಾತಿ ಇರುವ ಶಾಲೆಗಳನ್ನು ವಿಲೀನ ಮಾಡುವ ಪ್ರಕ್ರಿಯೆ ಪ್ರಾರಂಭಿಸಿರುವುದು ನಿಜವೇ ; ಹಾಗಿದ್ದಲ್ಲಿ, ಒಟ್ಟು ಎಷ್ಟು ಶಾಲೆಗಳನ್ನು ವಿಲೀನಗೊಳಿಸಲು ನಿರ್ಧರಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಈ) ವಿಲೀನಗೊಳ್ಳಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳು ಯಾವ ಯಾವ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿವೆ ? (ಅವುಗಳ ಬಗ್ಗೆ ವಿವರವಾದ ಅಂಕಿ-ಸಂಖ್ಯೆ ನೀಡುವುದು)

## ಮಕ್ಕಳಿಗಾಗಿ ಖಾಸಗಿ ಸಂಸ್ಥೆಗಳು ನೀಡುವ ದೇಣಿಗೆಯನ್ನು ಸರಿಯಾಗಿ ಬಳಸದಿರುವ ಬಗ್ಗೆ

ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೩೭೫ (೩೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲೆಯ ಮಕ್ಕಳಿಗೆ ಗುಣಮಟ್ಟದ ಆಹಾರ ನೀಡುವ ಉದ್ದೇಶದಿಂದ ಅಜೀಂ ಪ್ರೇಮ್‌ಜೀ ಫೌಂಡೇಶನ್ ನವರು ದೇಣಿಗೆ ನೀಡಿರುವುದು ನಿಜವೇ ; ನೀಡಿದ್ದಲ್ಲಿ, ಯಾವಾಗಿನಿಂದ ಎಷ್ಟೆಷ್ಟು ದೇಣಿಗೆಯನ್ನು ನೀಡಿರುತ್ತಾರೆ ; (ಕಳೆದ ೩ ವರ್ಷಗಳ ಮಾಹಿತಿ ಒದಗಿಸುವುದು)

(ಆ) ಈ ಅಜೀಂ ಪ್ರೇಮ್‌ಜೀ ಫೌಂಡೇಶನ್‌ನವರು ನೀಡಿರುವ ದೇಣಿಗೆಯನ್ನು ಯಾವ ಯಾವ ಶಾಲೆಗಳಲ್ಲಿ ಯಾವ ಉದ್ದೇಶಕ್ಕೆ ಬಳಸಲಾಗುತ್ತಿದೆ, ಮಾಹಿತಿ ಒದಗಿಸುವುದು ; (ಯಾವ ಯಾವ ಜಿಲ್ಲೆಗಳಿಗೆ)

(ಇ) ಸದರಿ ಫೌಂಡೇಶನ್ ನವರು ಇಲಾಖೆಯ ಅನುಮತಿಯೊಂದಿಗೆ ರಾಜ್ಯದ ೩೬೭ ಶಾಲೆಗಳಿಗೆ ಭೇಟಿ ನೀಡಿ ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆಯೇ ; ಸಲ್ಲಿಸಿದ್ದಲ್ಲಿ, ಅದರ ವಿವರಗಳೇನು ;

(ಈ) ಇಂತಹ ಖಾಸಗಿಯವರು ದೇಣಿಗೆಯಾಗಿ ನೀಡಿರುವ ಹಣದಲ್ಲಿ ಸಹ ಸರ್ಕಾರ ಮಕ್ಕಳಿಗೆ ಸರಿಯಾದ ಆಹಾರ (ಮೊಟ್ಟೆ, ಬಾಳೆಹಣ್ಣು) ಒದಗಿಸದೇ ಲೋಪ ಎಸಗಿರುವುದಕ್ಕೆ ಸರ್ಕಾರದ ಕ್ರಮಗಳೇನು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಅಜೀಂ ಪ್ರೇಮ್‌ಜೀ ಫೌಂಡೇಶನ್ ನವರು ದೇಣಿಗೆ ನೀಡಿದ್ದರೂ ಸಹ ಪಿ.ಎಂ ಪೋಷಣ್ ಯೋಜನೆಯಲ್ಲಿ ಆಗಿರುವ ಲೋಪಗಳೇನು ? (ಮಾಹಿತಿಯನ್ನು ಒದಗಿಸುವುದು)

## ರಾಜ್ಯದ ಗ್ರಾಮೀಣಾ ಪ್ರದೇಶಗಳಲ್ಲಿ ನಕಲಿ ವೈದ್ಯರುಗಳನ್ನು ತಡೆಗಟ್ಟುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೬ (೩೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ನಕಲಿ ವೈದ್ಯರುಗಳ ಸಂಖ್ಯೆ ಹೆಚ್ಚುತ್ತಿದ್ದು ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಆ) ಬಳ್ಳಾರಿ ಜಿಲ್ಲೆಯಲ್ಲಿ ಈ ರೀತಿಯ ನಕಲಿ ವೈದ್ಯರುಗಳ ಪ್ರಕರಣ ಕಂಡು ಬಂದಿದೆಯೇ ; ಬಂದಿದ್ದಲ್ಲಿ, ಅವರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಇ) ಈ ಜಿಲ್ಲೆಯಲ್ಲಿ ಈ ನಕಲಿ ವೈದ್ಯರುಗಳ ಹಾವಳಿ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ನಕಲಿ ವೈದ್ಯರುಗಳ ವಿರುದ್ಧ ಕೈಗೊಳ್ಳುವ ಕಾನೂನು ಕ್ರಮಗಳೇನು ; ರಾಜ್ಯದಲ್ಲಿ ಇಲ್ಲಿಯವರೆಗೆ ಈ ವೈದ್ಯರುಗಳ ಮೇಲೆ ಕೈಗೊಂಡ ಪ್ರಕರಣಗಳೆಷ್ಟು ? (ಮಾಹಿತಿ ಒದಗಿಸುವುದು)

## ಆಯುಷ್ ಇಲಾಖೆಯಲ್ಲಿ ತಜ್ಞ ವೈದ್ಯರುಗಳ ನೇಮಕಾತಿ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೭ (೩೮೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ ಇಲಾಖೆಯಲ್ಲಿ ರಾಜ್ಯದ ವಿವಿಧ ತಾಲ್ಲೂಕು ಮಟ್ಟದ ಆಸ್ಪತ್ರೆಗಳನ್ನು ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ

ನಿರ್ಮಿಸಿದರೂ ಖಾಯಂ ತಜ್ಞ ವೈದ್ಯರುಗಳು ಇಲ್ಲದೇ ರೋಗಿಗಳಿಗೆ ಚಿಕಿತ್ಸೆ ಸಿಗದೇ ಒಳರೋಗಿಗಳ ವ್ಯವಸ್ಥೆಯೂ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಶಿಕ್ಷಕರಿಗೆ ಭೋದನಾ ಚಟುವಟಿಕೆ ಮತ್ತು ತರಬೇತಿ ಕಾರ್ಯಾಗಾರಗಳ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೮ (೩೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ವಿಜಯನಗರ ಜಿಲ್ಲೆಗಳಲ್ಲಿ ಶಿಕ್ಷಕರಿಗೆ ಕಳೆದ ೦೫ ವರ್ಷಗಳಿಂದ ವಿವಿಧ ಭೋಧನಾ ಚಟುವಟಿಕೆ ಅಥವಾ ತರಬೇತಿ ಕಾರ್ಯಗಾರಗಳನ್ನು ಹಮ್ಮಿಕೊಳ್ಳಲಾಗಿದೆಯೇ ; ಇದ್ದಲ್ಲಿ, ಅವುಗಳನ್ನು ಯಾವಾಗ ಎಲ್ಲಿ ಹಮ್ಮಿಕೊಂಡು ನಡೆಸಲಾಯಿತು ; (ಮಾಹಿತಿ ಒದಗಿಸುವುದು)

(ಆ) ಬೋಧನಾ ಚಟುವಟಿಕೆ ಅಥವಾ ತರಬೇತಿ ಕಾರ್ಯಗಾರಗಳಿಗೆ ಭಾಗವಹಿಸುವ ಶಿಕ್ಷಕರಿಗೆ ಸರ್ಕಾರ/ಇಲಾಖಾ ವತಿಯಿಂದ ಭತ್ಯೆಗಳನ್ನು ನೀಡಲಾಗುತ್ತಿದೆಯೇ ; ಇದ್ದಲ್ಲಿ, ಎಷ್ಟು ಶಿಕ್ಷಕರಿಗೆ ಯಾವ ಆಧಾರದ ಮೇಲೆ ನೀಡಲಾಗುತ್ತಿದೆ ? (ವಿವರಗಳನ್ನು ಒದಗಿಸುವುದು)

# ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಅನುದಾನಿತ ಕಾಲೇಜುಗಳಲ್ಲಿ ಬ್ಯಾಕ್‌ಲಾಗ್‌ಗೆ ಸಂಬಂಧಿಸಿದ ಹುದ್ದೆಗಳ ವಿವರ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :-**

೩೭೯ (೩೪೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯ ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಅನುದಾನಿತ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಕಾರಣಗಳಿಂದ ಖಾಲಿ ಆಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಪೈಕಿ ಬ್ಯಾಕ್‌ಲಾಗ್‌ಗೆ ಸಂಬಂಧಿಸಿದ ಎಷ್ಟು ಹುದ್ದೆಗಳು ಖಾಲಿ ಇವೆ ;

(ಆ) ಈ ಹುದ್ದೆಗಳ ಭರ್ತಿಗೆ ೨೦೦೨ ಹಾಗೂ ೨೦೧೨ರಲ್ಲಿ ಅನುಮತಿ ನೀಡಿ ನೇಮಕಾತಿ ಆದೇಶ ನೀಡಿದ ನಂತರ ಪ್ರಸ್ತುತ ೨೦೦೧ರ ನಿಯಮ ಒಂದರ ಕಾರಣ ನೀಡಿ ೨೦೧೯ ೨೦೨೦ರ ಸಾಲಿನ ನೇಮಕಾತಿ ಪ್ರಕ್ರಿಯೆ ತಡೆಹಿಡಿಯಲು ಕಾರಣವೇನು ;

(ಇ) ೦೫ ವರ್ಷಗಳಿಂದ ಸದರಿ ಖಾಲಿ ಹುದ್ದೆ ಭರ್ತಿ ಕಾರ್ಯ ನೆನೆಗುದಿಗೆ ಬಿದ್ದಿದ್ದು ೨೦೨೩ರಲ್ಲಿ ಪ್ರಸ್ತುತ ಸರ್ಕಾರ ಬಂದ ನಂತರ ಇದುವರೆಗೂ ಯಾವ ಯಾವ ಶಿಕ್ಷಣ ಸಂಸ್ಥೆಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; (ಇವುಗಳ ವಿವರ ಒದಗಿಸುವುದು)

(ಈ) ರಾಜ್ಯದ ಅನುದಾನಿತ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು

೨೦೧೯-೨೦೨೦ನೇ ಸಾಲಿನಲ್ಲಿ ನೀಡಿದ ಅನುಮತಿ ಆಧಾರದಲ್ಲಿ ಇದುವರೆಗೂ ನೇಮಕಾತಿ ಆದೇಶ ನೀಡದಿರಲು ಕಾರಣವೇನು ;

(ಉ) ಬ್ಯಾಕ್‌ಲಾಗ್ ಹುದ್ದೆ ಭರ್ತಿ ಕಾರ್ಯ ಕುರಿತಂತೆ ಹಣಕಾಸು ಇಲಾಖೆಯು ಅನುಮತಿ ಅಗತ್ಯವಿದ್ದುದಾಗಿ ಇಲಾಖೆಯು ಭಾವಿಸಿದ್ದಲ್ಲಿ, ಸದರಿ ಅಡಚಣೆ ನಿವಾರಣೆಗೆ ಸಚಿವ ಸಂಪುಟ ಉಪ ಸಮಿತಿಯು ಒದಗಿಸಿರುವ ಸೂಚನೆ ಹಾಗೂ ಶಿಫಾರಸ್ಸುಗಳ ಆಧಾರದಲ್ಲಿ ಹಣಕಾಸು ಇಲಾಖೆಯ ಮರು ಒಪ್ಪಿಗೆಗೆ ಕಾಯಿದೆ ನೇಮಕಾತಿ ಆದೇಶ ಒದಗಿಸಲು ಸರ್ಕಾರಕ್ಕೆ ಇರುವ ಅಡಚಣೆಗಳಾವುವು ; ಬ್ಯಾಕ್‌ಲಾಗ್ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

**ರಾಜ್ಯದಲ್ಲಿರುವ ವಿಶ್ವ ವಿದ್ಯಾಲಯಗಳ ಅನುದಾನದ ವಿಷಯ ಕುರಿತು**

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೦ (೪೧೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಒಟ್ಟು ವಿಶ್ವ ವಿದ್ಯಾಲಯಗಳ ಸಂಖ್ಯೆ ಎಷ್ಟು; (ವಿಶ್ವವಿದ್ಯಾಲಯದ ಹೆಸರು. ಜಿಲ್ಲೆಯ ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಯಾವ ಯಾವ ವಿಶ್ವ ವಿದ್ಯಾಲಯಕ್ಕೆ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ದಾಖಲೆಯೊಂದಿಗೆ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ೯ ವಿಶ್ವ ವಿದ್ಯಾಲಯವನ್ನು ಮುಚ್ಚುವ ಬಗ್ಗೆ ಸಂಪುಟ ಸಭೆಯಲ್ಲಿ ತೀರ್ಮಾನಿಸಿದೆಯೇ ; (ತೀರ್ಮಾನಿಸಿದ್ದಲ್ಲಿ ಸೂಕ್ತ ಕಾರಣ ನೀಡುವುದು)

(ಈ) ರಾಜ್ಯದಲ್ಲಿ ೯ ವಿವಿಗಳನ್ನು ಮುಚ್ಚುವುದಾದರೆ ಯಾವ ವಿವಿಗಳನ್ನು ಮುಚ್ಚಲಾಗುವುದು ; ಅದರಲ್ಲಿ ಬಡ ವಿದ್ಯಾರ್ಥಿಗಳು ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಸರ್ಕಾರ ಯಾವ ಯೋಜನೆ ಹಾಕಿಕೊಂಡಿದೆ ;

(ಉ) ರಾಜ್ಯದ ಉನ್ನತ ಶಿಕ್ಷಣ ಪರಿಷತ್ ಶಿಫಾರಸ್ಸು ಮಾಡಿರುವ ಹಣ ಎಷ್ಟು ; ಬಿಡುಗಡೆ ಮಾಡಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ; ಈ ವಿಶ್ವ ವಿದ್ಯಾಲಯಗಳನ್ನು ಮುಚ್ಚಲು ಯಾವ ಶಿಕ್ಷಣ ತಜ್ಞರ ಶಿಫಾರಸ್ಸಿನ ಮೇಲೆ ತೀರ್ಮಾನಿಸಲಾಗಿದೆ ?

## ವನ್ಯ ಜೀವಿಗಳಿಂದ ರೈತರ ಬೆಳೆ ಹಾನಿಯಾಗುತ್ತಿರುವ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೧ (೪೧೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವನ್ಯ ಜೀವಿಗಳು ನಗರ ಮತ್ತು ಗ್ರಾಮದೊಳಗೆ ಬರುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ರಾಜ್ಯದಲ್ಲಿ ವನ್ಯ ಜೀವಿಗಳಿಂದ ಹಾನಿಗೊಳಗಾಗಿರುವವರ ಸಂಖ್ಯೆ ಎಷ್ಟು ; ಜೀವ ಕಳೆದುಕೊಂಡವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ವನ್ಯ ಜೀವಿಯಿಂದ ಮೃತಪಟ್ಟವರಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಪರಿಹಾರ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ವನ್ಯ ಜೀವಿಗಳಿಂದ ಬೆಳೆ ಹಾನಿ ಮತ್ತು ಜಮೀನು ನಾಶಕ್ಕೆ ಸಂಬಂಧಿಸಿದಂತೆ ರಾಜ್ಯದಲ್ಲಿ ಒಂದು ಎಕರೆಗೆ ಬೆಳೆಗೆ ಅನುಸಾರವಾಗಿ ಎಷ್ಟು ಪರಿಹಾರ ನೀಡಲಾಗುವುದು ;

(ಉ) ಕಾಡಾನೆ ಕಾರ್ಯಚರಣೆ ಮತ್ತು ಹುಲಿ ಕಾರ್ಯಚರಣೆ ಇತ್ಯಾದಿ ಕಾರ್ಯಚರಣೆಗೆ ಒಟ್ಟು ತಗಲುತ್ತಿರುವ ವೆಚ್ಚ ಎಷ್ಟು ; ಅದರಲ್ಲಿ ಸಾಕಾನೆಯಾಗಲಿ ಅಥವಾ ಸಿಬ್ಬಂದಿಗಳಿಗಾಗಲಿ ಸುರಕ್ಷತೆ ಹಿತದೃಷ್ಟಿಯಿಂದ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತಿದೆ ;

(ಊ) ರಾಜ್ಯದಲ್ಲಿ ೨೦೨೧-೨೫ ರವರೆಗೆ ಎಷ್ಟು ಕಾಡಾನೆ ಸೆರೆಹಿಡಿಯಲಾಗಿದೆ ; ಎಷ್ಟು ಹುಲಿ ಸೆರೆ ಹಿಡಿದು ಸಂರಕ್ಷಿಸಲಾಗಿದೆ ; ಎಷ್ಟು ಆನೆಗಳು ಪಳಗಿಸಲಾಗಿದೆ ? (ಸಂಪೂರ್ಣ ಮಾಹಿತಿಯನ್ನು ನೀಡುವುದು)

## ರೈತರಿಗೆ ನಿಗಮಗಳಲ್ಲಿ ಉಚಿತ ವಿದ್ಯುತ್ ನೀಡುವುದರ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೨ (೪೧೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೦-೨೦೨೪ನೇ ಸಾಲಿನವರೆಗೆ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ ೫ ನಿಗಮಗಳಿಂದ ಪಡೆದ ಸಾಲ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಸಾಲಿನವರೆಗೆ ಸರ್ಕಾರಕ್ಕೆ ೫ ನಿಗಮಗಳಿಂದ ಬಂದಿರುವ ಲಾಭ ಎಷ್ಟು ; (ನಿಗಮವಾರು ಮಾಹಿತಿ ನೀಡುವುದು)

(ಇ) ಯಾವ ಯಾವ ನಿಗಮಗಳಲ್ಲಿ ರೈತರಿಗೆ ಎಷ್ಟು ಯೂನಿಟ್ ಉಚಿತ ವಿದ್ಯುತ್ ನೀಡಲಾಗುತ್ತಿದೆ ; (ಜಿಲ್ಲಾವಾರು/ನಿಗಮವಾರು ಮಾಹಿತಿ ನೀಡುವುದು)

(ಈ) ಯಾವ ಯಾವ ನಿಗಮದಲ್ಲಿ ರೈತರಿಗೆ ೩ ಫೇಸ್ ವಿದ್ಯುತ್‌ನ್ನು ಎಷ್ಟು ಸಮಯ ನೀಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಸರ್ಕಾರದ ಕಛೇರಿ ಮತ್ತು ಸರ್ಕಾರಕ್ಕೆ ಸಂಬಂಧಿಸಿದಂತೆ ಎಲ್ಲಾ ನಿಗಮಗಳಲ್ಲಿ ಬಳಕೆಯಾಗುತ್ತಿರುವ ವಿದ್ಯುತ್ ಎಷ್ಟು ? (ನಿಗಮವಾರು, ಜಿಲ್ಲಾವಾರು ಮಾಹಿತಿ ನೀಡುವುದು)

## ವಿದ್ಯುತ್ ವ್ಯತ್ಯಯದಿಂದ ರೈತರಿಗೆ ಆಗುವ ಸಮಸ್ಯೆಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೩ (೪೧೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆ, ಬೇಲೂರು ತಾಲ್ಲೂಕು ಅರೇಹಳ್ಳಿ ಹೋಬಳಿ ಮತ್ತು ಬಿಕ್ಕೋಡು ಹೋಬಳಿಯಲ್ಲಿ ರೈತರಿಗೆ ೩ ಫೇಸ್ ವಿದ್ಯುತ್ ನೀಡುತ್ತಿರುವ ಸಮಯ ಎಷ್ಟು ;

(ಆ) ಅರೇಹಳ್ಳಿ ಮತ್ತು ಬಿಕ್ಕೋಡು ಹೋಬಳಿಯಲ್ಲಿ ಕಳೆದ ೬ ತಿಂಗಳಲ್ಲಿ ಎಷ್ಟು ಟ್ರಾನ್ಸ್‌ಫಾರಂ ಅಳವಡಿಸಲಾಗಿದೆ ; (ಸಂಪೂರ್ಣ ಮಾಹಿತಿ ದಾಖಲೆ ಸಹಿತ ನೀಡುವುದು)

(ಇ) ಬಿಕ್ಕೋಡು ಹೋಬಳಿಯ ಮೊಗಸವಾರ ಮತ್ತು ಕುಶವಾರ ಗ್ರಾಮದಲ್ಲಿ ಒಂದು ಟ್ರಾನ್ಸ್‌ಫಾರಂ ಗೆ ಅಳವಡಿಸಿದ ಬೋರವೇಲ್ ಮೋಟರ್ ಸಂಖ್ಯೆ ಎಷ್ಟು ;

(ಈ) ಬಿಕ್ಕೋಡು ಹೋಬಳಿಯ ಮೊಗಸವಾರ ಗ್ರಾಮದಲ್ಲಿ ವಿದ್ಯುತ್ ವ್ಯತ್ಯಯವಾಗಿ ಕುಡಿಯುವ ನೀರಿಗೆ ಸಮಸ್ಯೆಯಾಗುತ್ತಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ಬಿಕ್ಕೋಡು ಹೋಬಳಿಯ ಮೊಗಸವಾರ ಗ್ರಾಮದಲ್ಲಿ ಬೇಡಿಕೆಗೆ ಅನುಸಾರ ಅರ್ಜಿ ಸಲ್ಲಿಸಿದ್ದರು, ಟ್ರಾನ್ಸ್‌ಫಾರಂ ಅಳವಡಿಸದಿರಲು ಕಾರಣವೇನು ; ಅಳವಡಿಸುವುದಾದರೆ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ; ಎಷ್ಟು ದಿನದ ಒಳಗೆ ಅಳವಡಿಸಲಾಗುತ್ತದೆ ; (ಸಂಪೂರ್ಣ ಮಾಹಿತಿ ದಾಖಲೆ ಸಮೇತ ನೀಡುವುದು)

(ಊ) ಬೇಲೂರು ವಿದ್ಯುತ್ ಸರಬರಾಜು ನಿಗಮದಲ್ಲಿ ಅಧಿಕಾರಿಗಳು ಸಾರ್ವಜನಿಕರ ಬಳಿ ಸರಿಯಾದ ರೀತಿಯಲ್ಲಿ ಸ್ಪಂದಿಸುತ್ತಿಲ್ಲದಿರುವುದರಿಂದ ಈ ಅಧಿಕಾರಿಗಳ/ಸಿಬ್ಬಂದಿಗಳ ಮೇಲೆ ಕೈಗೊಂಡ ಕ್ರಮಗಳೇನು ?

## R.T.P.S ನ ವಿದ್ಯುತ್ ಘಟಕಗಳ ಸ್ಥಿತಿಗತಿ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೪ (೪೭೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷ ಫೆಬ್ರವರಿಯಿಂದ ಮೇ ಮಾಹೆವರೆಗೆ ವಿದ್ಯುತ್ ಬೇಡಿಕೆ ಎಷ್ಟಿತ್ತು ಹಾಗೂ ಪ್ರಸ್ತುತ ವರ್ಷ ಈ ಬೇಡಿಕೆ ಎಷ್ಟಿರಬಹುದು ಎಂದು ಅಂದಾಜಿಸಲಾಗಿದೆಯೇ ; ಸಂಭಾವ್ಯ ವಿದ್ಯುತ್ ಬೇಡಿಕೆಯನ್ನು ಸರಿದೂಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) BTPS, YTPS & RTPS ನಲ್ಲಿ ಎಷ್ಟು ಘಟಕಗಳಿವೆ; ಅವುಗಳಲ್ಲಿ ಕಾರ್ಯನಿರ್ವಹಿಸುವ ಘಟಕಗಳೆಷ್ಟು ; ಅವುಗಳಿಂದ ಉತ್ಪಾದನೆಯಾಗುವ ವಿದ್ಯುತ್ ಪ್ರಮಾಣವೆಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) RTPS ನ ೧ನೇ ಮತ್ತು ೪ನೇ ಘಟಕಗಳು ಎಂದಿನಿಂದ ಮತ್ತು ಯಾವ ಕಾರಣಕ್ಕೆ ಉತ್ಪಾದನೆ ಕಾರ್ಯ ನಿಲ್ಲಿಸಿವೆ ; ಸದರಿ ಘಟಕಗಳು ಇಲ್ಲಿಯವರೆಗೆ ದುರಸ್ತಿ ಆಗದಿರಲು ಕಾರಣಗಳೇನು ಹಾಗೂ ಅವುಗಳನ್ನು ಯಾವ ಕಾಲಮಿತಿಯಲ್ಲಿ ದುರಸ್ತಿ ಮಾಡಲಾಗುವುದು ?

## ಸರ್ಕಾರದ ಆರೋಗ್ಯ ಯೋಜನೆಗಳು ಹಾಗೂ ಕಲಬುರಗಿ ಜಿಲ್ಲೆಯ ಆಸ್ಪತ್ರೆಗಳಿಗೆ ಬಿಡುಗಡೆಯಾಗಬೇಕಿರುವ ಬಾಕಿ ಮೊತ್ತಗಳ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೩೮೫ (೪೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಯೋಜನೆಗಳಾದ ವಾಜಪೇಯಿ ಆರೋಗ್ಯಶ್ರೀ, ರಾಷ್ಟ್ರೀಯ ಬಾಲಸ್ವಸ್ಥ ಕಾರ್ಯಕ್ರಮ, ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆ, ಅಪಘಾತ ಪರಿಹಾರ ಆರೈಕೆ, ಮುಖ್ಯಮಂತ್ರಿಗಳ ಸಾಂತ್ವನ ಯೋಜನೆ, ರಾಜೀವ್ ಆರೋಗ್ಯ ಭಾಗ್ಯ, ತಾಯಿ ಭಾಗ್ಯ ಯೋಜನೆ, ಬಾಲ ಸಂಜೀವಿನಿ ಯೋಜನೆಗಳು ಪ್ರಸ್ತುತ ಚಾಲ್ತಿಯಲ್ಲಿವೆಯೇ ;

(ಆ) ಈ ಎಲ್ಲಾ ಯೋಜನೆಗಳಿಂದ ಕಲಬುರಗಿ ಜಿಲ್ಲೆಯ ಆಸ್ಪತ್ರೆಗಳಿಗೆ ಸರ್ಕಾರದಿಂದ ಬಿಡುಗಡೆ ಆಗಬೇಕಿರುವ ಹಣ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಕಲಬುರಗಿ ಜಿಲ್ಲೆಯ ವಿವಿಧ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಿಗೆ ಈ ಂಯೋಜನೆಗಳಡಿ ಕಳೆದ ೦೨ ವರ್ಷಗಳಿಂದ ಬಿಡುಗಡೆಯಾಗಬೇಕಾದ ಬಾಕಿ ಮೊತ್ತ ಎಷ್ಟು ; ಸರ್ಕಾರದ ಇಲಾಖೆಗಳಿಂದ ABARK ಯೋಜನೆಯಡಿ ಖಾಸಗಿ ಆಸ್ಪತ್ರೆಗಳಿಗೆ ದಾಖಲಾದ ರೋಗಿಗಳ ಬಾಕಿ ಪಾವತಿಯನ್ನು ಎಷ್ಟು ದಿನಗಳಲ್ಲಿ ನೀಡಬೇಕೆಂಬ ನಿಯಮವಿದೆ ;

(ಈ) ಆರೋಗ್ಯ ಇಲಾಖೆಯಿಂದ ಅನಿವಾರ್ಯ ಕಾರಣದಿಂದ ಖಾಸಗಿ ಆಸ್ಪತ್ರೆಗಳಲ್ಲಿ ದಾಖಲಾಗದ ರೋಗಿಗಳಿಗಿರುವ ಯೋಜನೆಗಳು ಯಾವುವು ;

(ಉ) ವಿವಿಧ ಯೋಜನೆಗಳಡಿ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಇಲ್ಲದ ಸಂದರ್ಭದಲ್ಲಿ ಖಾಸಗಿ ಆಸ್ಪತ್ರೆಗೆ ದಾಖಲಾಗಲು ಇರುವ ನಿಯಮಗಳೇನು ? (ಸರ್ಕಾರಿ ಆಸ್ಪತ್ರೆಗಳಲ್ಲಿ ಒಪಿಡಿ ಹಾಗೂ ವಿವಿಧ ಚಿಕಿತ್ಸೆಗಳಿಗಿರುವ ದರಪಟ್ಟಿಯ ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದವರಿಗೆ ಮೀಸಲಿರಿಸಿರುವ ಹುದ್ದೆಗಳಿಗೆ ಬಡ್ತಿ ನೀಡದಿರುವ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೩೮೬ (೪೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ:೧೮.೦೨.೨೦೨೪ ಮತ್ತು ೧೦.೦೬.೨೦೨೪ ರಂದು ನಿಯಮ-೩೨ ರಡಿಯಲ್ಲಿ ಶಿಕ್ಷಣಾಧಿಕಾರಿಗಳು/ತತ್ಸಮಾನ ವೃಂದಕ್ಕೆ ಎಷ್ಟು ಅಧಿಕಾರಿಗಳಿಗೆ ಬಡ್ತಿ ನೀಡಲು ಪ್ರಸ್ತಾವನೆ ಸಲ್ಲಿಸಲಾಗಿದೆ ; (ಹೈ.ಕ ಉಳಿಕೆ ಮೂಲ ವೃಂದ) ದಿನಾಂಕ: ೩೧.೧೨.೨೦೨೪ ರವರೆಗೆ ಖಾಲಿ ಇದ್ದ ಶಿಕ್ಷಣಾಧಿಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು; (ಹೈ.ಕ ಮತ್ತು ಉಳಿಕೆ ಮೂಲ ವೃಂದದ ಸಂಪೂರ್ಣ ಮಾಹಿತಿ ನೀಡುವುದು)

(ಆ) ದಿನಾಂಕ:೦೫.೧೦.೨೦೨೪ ಮತ್ತು ೩೦.೧೦.೨೦೨೫ ರಂದು ನಡೆದ ಡಿ.ಸಿ.ಪಿ. ಸಭೆಗಳಲ್ಲಿ ನಿಯಮ-೩೨ರಡಿಯಲ್ಲಿ ಎಷ್ಟು ಅಧಿಕಾರಿಗಳಿಗೆ ಬಡ್ತಿ ನೀಡಲು ತೀರ್ಮಾನಿಸಲಾಗಿದೆ ; (ಹೈ.ಕ ಮತ್ತು ಉಳಿಕೆ ಮೂಲ ವೃಂದ) ; ಈ ದಿನಾಂಕಗಳಂದು ಕಲ್ಯಾಣ

ಕರ್ನಾಟಕ ಭಾಗದ ಅಧಿಕಾರಿಗಳಿಗೆ ಮೀಸಲಿರಿಸಿದ ಹುದ್ದೆಗಳು ಖಾಲಿ ಇದ್ದರೂ ಕೂಡ ಕೇವಲ ೦೨ ಅಧಿಕಾರಿಗಳಿಗೆ ಮಾತ್ರ ಬಡ್ತಿ ನೀಡಲು ಕಾರಣವೇನು ;

(ಇ) ಈಗಾಗಲೇ ಬಡ್ತಿಗಾಗಿ ಪ್ರಸ್ತಾವನೆ ಸಲ್ಲಿಸಿ ಸುಮಾರು ೦೮ ತಿಂಗಳಾದರೂ ಹಾಗೂ ಕಲ್ಯಾಣ ಕರ್ನಾಟಕ ಭಾಗದವರಿಗೆ ಮೀಸಲಿರಿಸಿರುವ ಹುದ್ದೆಗಳು ಖಾಲಿ ಇದ್ದರೂ ಕೂಡ ಇಲ್ಲಿಯವರೆಗೆ ಬಡ್ತಿ ನೀಡದೆ ಇರುವುದರಿಂದ ಅನ್ಯಾಯವಾಗಿದ್ದು, ಈ ಸಮಸ್ಯೆಯನ್ನು ಯಾವ ಕಾಲಮಿತಿಯಲ್ಲಿ ಬಗೆಹರಿಸಿ ಬಡ್ತಿಯನ್ನು ನೀಡಲಾಗುತ್ತದೆ ?

## ಶಾಲಾ ಶಿಕ್ಷಕರು ಹಾಗೂ ಇತರೆ ಸಿಬ್ಬಂದಿಗಳಿಗೆ ಆಗುತ್ತಿರುವ ವೇತನ ವಿಳಂಬದ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೩೮೭ (೪೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಸಿಬ್ಬಂದಿಗಳಿಗೆ ಸೂಕ್ತ ಸಮಯದಲ್ಲಿ ವೇತನ ಪಾವತಿಯಾಗಲಿ ಎಂದು K-೨ ಮಾದರಿಗೆ ಒಳಪಡಿಸಿದ್ದರೂ ಕೂಡ ಹಲವಾರು ವರ್ಷಗಳಿಂದ ಶಾಲಾ ಶಿಕ್ಷಕರುಗಳು ಹಾಗೂ ಇತರೆ ಸಿಬ್ಬಂದಿಗಳಿಗೆ ನೀಡಬೇಕಾದ ವೇತನ ಪಾವತಿಯು ૩-೪ ತಿಂಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರವು ೪ ತಿಂಗಳಿಗೊಮ್ಮೆ ಅನುದಾನ ಬಿಡುಗಡೆ ಮಾಡಿ ವೇತನ ಪಾವತಿ ಮಾಡುತ್ತಿರುವುದರಿಂದ ಶಿಕ್ಷಕರು ಹಾಗೂ ಸಿಬ್ಬಂದಿಗಳು ಮಾಸಿಕ ವಿಮಾ ಕಂತುಗಳ ಸಮಸ್ಯೆ, ಕೆ.ಜಿ.ಐ.ಡಿ.,

ಮೇಲೆ ವಿಧಿಸುವ ಬಡ್ಡಿ ಭರಿಸಲು ಹಾಗೂ ಕುಟುಂಬ ನಿರ್ವಹಣೆ ಸಮಸ್ಯೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರವು ೦೪ ತಿಂಗಳಿಗೊಮ್ಮೆ ಅನುದಾನ ಬಿಡುಗಡೆ ಮಾಡುವ ಬದಲು ವಾರ್ಷಿಕ ವೇತನ ಬಜೆಟ್ ಅನ್ನು ಬಿಡುಗಡೆ ಮಾಡದಿರಲು ಕಾರಣವೇನು ; ವಾರ್ಷಿಕ ವೇತನ ಬಜೆಟ್ ಬಿಡುಗಡೆ ಮಾಡುವ ಆಲೋಚನೆ ಸರ್ಕಾರಕ್ಕೆ ಇದೆಯೇ ?

## ಕಳೆದ ೩-೪ ವರ್ಷಗಳಲ್ಲಿ ಪ್ರಾರಂಭವಾಗಿರುವ ಹಾವೇರಿ, ಕೊಪ್ಪಳ, ಬಾಗಲಕೋಟೆ, ಹಾಸನ, ಕೊಡಗು ಮುಂತಾದ ೯ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಹೊರಟಿರುವ ವಿಷಯದ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೩೮೮ (೪೮೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಸರ್ಕಾರದಲ್ಲಿ ಪ್ರಾರಂಭವಾಗಿರುವ ಹೊಸ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಇತ್ತೀಚೆಗೆ ಪ್ರಾರಂಭವಾಗಿರುವ ವಿಶ್ವವಿದ್ಯಾಲಯಗಳ ಬಗ್ಗೆ ಅಧ್ಯಯನ ಮಾಡಲು ರಾಜ್ಯದ ಉಪ ಮುಖ್ಯಮಂತ್ರಿಗಳ ನೇತೃತ್ವದ ಸಂಪುಟ ಉಪ ಸಮಿತಿ ರಚನೆ ಮಾಡಿರುವುದು ನಿಜವೇ ; (ಸಮಿತಿ ಸದಸ್ಯರ ಮಾಹಿತಿ ನೀಡುವುದು)

(ಇ) ಸದರಿ ಸಂಪುಟ ಉಪ ಸಮಿತಿ ನಿರ್ಣಯ ಕೈಗೊಳ್ಳುವಾಗ ಶಿಕ್ಷಣ ತಜ್ಞರ ಅಭಿಪ್ರಾಯಗಳನ್ನು ಪಡೆಯಲಾಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಸಂಪುಟ ಉಪ ಸಮಿತಿ ವರದಿಯಲ್ಲಿ ಉಲ್ಲೇಖಿಸಲಾದ ಪ್ರಮುಖ ಅಂಶಗಳು ಯಾವುವು ; ಈ ಕುರಿತು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳಾವುವು ? (ವಿವರ ನೀಡುವುದು)

## ಆಯುಷ್ ಇಲಾಖೆಯ ಆಸ್ಪತ್ರೆಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸದೆ ಇರುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೩೮೯ (೪೧೧೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುಷ್ ಇಲಾಖೆಯಲ್ಲಿ ತಾಲ್ಲೂಕ್ ಆಯುಷ್ ಆಸ್ಪತ್ರೆಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಸಾರ್ವಜನಿಕರಿಂದ ದೂರುಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಆ) ತಾಲ್ಲೂಕಾ ಆಯುಷ್ ಆಸ್ಪತ್ರೆಗಳು ಸರಿಯಾಗಿ ಕಾರ್ಯನಿರ್ವಹಿಸುವಂತಾಗಲು ಹಾಗೂ ಒಳರೋಗಿಗಳ ಚಿಕಿತ್ಸೆಗಾಗಿ ಸೂಕ್ತ ವ್ಯವಸ್ಥೆ ಮಾಡಲು ಯಾವ ಕಾಲಮಿತಿಯೊಳಗೆ ಖಾಯಂ ತಜ್ಞ ವೈದ್ಯರುಗಳ ಹಾಗೂ ಇತರೆ ಸಿಬ್ಬಂದಿಗಳ ನೇಮಕ ಮಾಡಲಾಗುವುದು ?

## ಖಾಸಗಿ ಐಟಿಐ ಕಾಲೇಜು ಸಿಬ್ಬಂದಿಗಳ ಪಿಂಚಣಿ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೩೯೦ (೪೫೩೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಅನುದಾನಿತ ಖಾಸಗಿ ಐ.ಟಿ.ಐ ಕಾಲೇಜುಗಳ ಅಭಿವೃದ್ಧಿಗಾಗಿ ನೇಮಿಸಲಾದ ಶ್ರೀ ಪಿ.ಎಸ್.ಥಾಮಸ್ ಸಮಿತಿಯ ವರದಿಯನ್ನು ಸರ್ಕಾರಕ್ಕೆ ಯಾವಾಗ ಸಲ್ಲಿಸಲಾಯಿತು ;

(ಆ) ಹಳೆ ಪಿಂಚಣಿ ಯೋಜನೆ ಯಾವ ದಿನಾಂಕದ ಹಿಂದೆ ಕರ್ತವ್ಯಕ್ಕೆ ಹಾಜರಾದ ಸಿಬ್ಬಂದಿಗಳಿಗೆ ಅನ್ವಯವಾಗುತ್ತದೆ ; (ಸಂಪೂರ್ಣವಾಗಿ ವಿವರಿಸುವುದು)

(ಇ) ರಾಜ್ಯದಲ್ಲಿ ಅನುದಾನಿತ ಖಾಸಗಿ ಐ.ಟಿ.ಐ ಸಿಬ್ಬಂದಿಗಳ ಪೈಕಿ ೨೯/೧೨/೨೦೧೪ರ ಹಿಂದೆ ನಿವೃತ್ತಿ ಹೊಂದಿರುವ ಸಿಬ್ಬಂದಿಗಳೆಷ್ಟು ಮತ್ತು ಅವರುಗಳಿಗೆ ಯಾವ ಪಿಂಚಣಿ ನೀಡಲಾಗುತ್ತದೆ ? (ವಿವರ ನೀಡುವುದು)

## ರಾಜ್ಯದ ಅನುದಾನಿತ ಶಾಲೆಗಳ ಬಗ್ಗೆ ಮಾಹಿತಿ

**ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೩೯೧ (೪೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅನುದಾನಿತ ಶಾಲೆಗಳೆಷ್ಟು ; ಶೈಕ್ಷಣಿಕ ವರ್ಷದಲ್ಲಿ ಸಂಖ್ಯೆಯ ಕೊರತೆಯಿಂದ ಮುಚ್ಚಲು ಉದ್ದೇಶಿಸಿರುವ ಶಿಕ್ಷಣ ಸಂಸ್ಥೆಗಳೆಷ್ಟು ;

(ಆ) ಮುಚ್ಚಲು ನಿರ್ಧರಿಸಿದ್ದಲ್ಲಿ, ಆ ಸಂಸ್ಥೆಗಳ ಕಟ್ಟಡ ಮತ್ತು ಜಮೀನನ್ನು ಯಾವ ಉದ್ದೇಶಕ್ಕೆ ಬಳಸಲಾಗುತ್ತದೆ ;

(ಇ) ಮುಚ್ಚಿದ್ದಲ್ಲಿ, ಅಲ್ಲಿಯ ಶಿಕ್ಷಕರನ್ನು ಎಲ್ಲಿಗೆ ವರ್ಗಾವಣೆ ಮಾಡಲು ಉದ್ದೇಶಿಸಲಾಗಿದೆ ; ಅವರ ವೇತನ ಭತ್ಯೆ ಬಾಕಿಗಳನ್ನು ಹೇಗೆ ಪರಿಗಣಿಸಲಾಗುತ್ತದೆ ? ( ಮಾಹಿತಿ ನೀಡುವುದು)

## ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳ ಬಗ್ಗೆ ಮಾಹಿತಿ

**ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೩೯೨ (೪೭೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಐಟಿಐ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಡಿಸೆಂಬರ್ ೨೦೨೪ರವರೆಗೆ ಖಾಲಿ ಆಗಿರುವ ಅನುದಾನಿತ ಹುದ್ದೆಗಳು ಯಾವುದು ; (ಕಾಲೇಜುವಾರು ವಿಳಾಸ ಸಹಿತ ನೀಡುವುದು)

(ಆ) ಸದರಿ ಹುದ್ದೆಗಳನ್ನು ತುಂಬದೆ ಇರುವುದರಿಂದ ಈ ಕೇಂದ್ರಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೨೦೧೦ನೇ ಸಾಲಿನಿಂದ ೨೦೨೪ನೇ ಸಾಲಿನವರೆಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುವುದು ; (ವಿವರ ನೀಡುವುದು)

(ಈ) ಸದರಿ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಿ ಕಾರ್ಯಭಾರದ ಕೊರತೆಯಾದಾಗ ಅನುದಾನಿತ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸ್ಥಳನಿಯುಕ್ತಿ/ ನಿಯೋಜನೆಗೊಳಿಸಲಾಗುತ್ತಿದೆಯೇ ;

(ಉ) ಕಾರ್ಯಭಾರದ ಕೊರತೆಯಾಗಿರುವ ನೌಕರರಿಗೆ ವೇತನಕ್ಕೆ ತೊಂದರೆಯಾಗದಂತೆ ಇತರೆ ಅನುದಾನಿತ ಸಂಸ್ಥೆಗಳಿಗೆ ನಿಯೋಜನೆ ಮಾಡಿ ಕಾರ್ಯಭಾರವನ್ನು ಸರಿದೂಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಕರ್ನಾಟಕ ರಾಜ್ಯದಲ್ಲಿ **KPS** ಶಾಲೆಗಳನ್ನು ಪ್ರಾರಂಭಿಸಿರುವ ಬಗ್ಗೆ ಮಾಹಿತಿ

**ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೩೯೩ (೪೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ೨೦೨೫-೨೬ನೇ ಶೈಕ್ಷಣಿಕ ವರ್ಷದಲ್ಲಿ ೬೦೦ ಕೆ.ಪಿ.ಎಸ್., ಶಾಲೆಗಳನ್ನು ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಯಾವ ಯಾವ ಜಿಲ್ಲೆಗಳಿಗೆ ಎಷ್ಟು ಕೆ.ಪಿ.ಎಸ್. ಶಾಲೆಗಳನ್ನು ಮಂಜೂರು ಮಾಡಲಾಗಿದೆ ; ಹಾಗೂ ಪ್ರತ್ಯೇಕವಾಗಿ ಶಿಕ್ಷಕರನ್ನು ಹಾಗೂ ಇತರೆ ಸಿಬ್ಬಂದಿ ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಇ) ಶಾಲೆಗಳನ್ನು ಪ್ರಾರಂಭಿಸುವಂತಹ ಹಳೆಯ ಮತ್ತು ಹೊಸ ಕಟ್ಟಡಗಳು ಎಷ್ಟು ಹಾಗೂ ಎಷ್ಟು ಅನುದಾನವನ್ನು ನಿಗಧಿಪಡಿಸಲಾಗಿದೆ ? (ಮಾಹಿತಿ ನೀಡುವುದು)

## ರಾಜ್ಯದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸೀಟ್ ಬ್ಲಾಕಿಂಗ್ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೩೯೪ (೩೩೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ಪ್ರತಿಷ್ಠಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕೆ.ಇ.ಎ ಮುಖಾಂತರ ಪ್ರವೇಶ ಪ್ರಕ್ರಿಯೆ ಸಂದರ್ಭದಲ್ಲಿ ಸೀಟ್ ಬ್ಲಾಕಿಂಗ್ ದಂಧೆ ನಡೆಸುವ ವ್ಯವಸ್ಥಿತ ಜಾಲದ ಕುರಿತು ಇದುವರೆಗೆ ಕಠಿಣ ಕ್ರಮಗಳನ್ನು ಕೈಗೊಳ್ಳದಿರಲು ಕಾರಣಗಳೇನು ;

(ಆ) ಸೀಟ್ ಬ್ಲಾಕಿಂಗ್ ವ್ಯವಸ್ಥಿತವಾಗಿ ಹಲವಾರು ವರ್ಷಗಳಿಂದ ನಡೆಯುತ್ತಿದ್ದರೂ ತನಿಖೆಯ ಹೆಸರಿನಲ್ಲಿ ತಪ್ಪಿತಸ್ಥರನ್ನು ಸರ್ಕಾರ ರಕ್ಷಿಸುತ್ತಿದೆಯೇ ;

(ಇ) ಈ ದಂಧೆಯಲ್ಲಿ ತೊಡಗಿರುವ ಅಧಿಕಾರಿಗಳು/ರಾಜಕಾರಣಿಗಳು ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳು ಹಣ ಮಾಡುತ್ತಿರುವುದು, ಅರ್ಹತೆ ಹೊಂದಿದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿರುವುದನ್ನು ತಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಉನ್ನತ ಶಿಕ್ಷಣ ಇಲಾಖೆಯ/ಕೆ.ಇ.ಎ. ಅಧಿಕಾರಿಗಳು/ಖಾಸಗಿ ಶಿಕ್ಷಣ ಸಂಸ್ಥೆಗಳು ನೇರವಾಗಿ ಸೀಟ್ ಬ್ಲಾಕಿಂಗ್ ದಂಧೆಯಲ್ಲಿ ಭಾಗಿಯಾಗಿದ್ದಾರೆ ಎಂದು ಮಾಧ್ಯಮದಲ್ಲಿ ವರದಿಗಳು ಬರುತ್ತಿದ್ದು ಅಂತಹ ಅಧಿಕಾರಿಗಳ/ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳದಿರಲು ಕಾರಣವೇನು ?

## ಬಿ.ಎಸ್ಸಿ ನರ್ಸಿಂಗ್ ಕೋರ್ಸುಗಳ ಪ್ರವೇಶದಲ್ಲಿ 'ಸೀಟ್ ಬ್ಲಾಕಿಂಗ್' ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೩೯೫ (೩೩೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಡವರು/ಕೆಳಮಧ್ಯಮ ವರ್ಗದ ಕುಟುಂಬಗಳ ವಿದ್ಯಾರ್ಥಿಗಳೇ ಹೆಚ್ಚಾಗಿ ಓದುವ ಬಿ.ಎಸ್ಸಿ ನರ್ಸಿಂಗ್ ಪ್ರವೇಶದಲ್ಲಿ 'ಸೀಟ್ ಬ್ಲಾಕಿಂಗ್' ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೨೪-೨೫ ರಲ್ಲಿ ಹಂಚಿಕೆ ಮಾಡಿದ್ದ ಸೀಟುಗಳಲ್ಲಿ ಶೇ.೫೦ ರಷ್ಟು ಸೀಟುಗಳು ಖಾಲಿ ಉಳಿದಿದ್ದು ಅವುಗಳನ್ನು ಖಾಸಗಿ

ಕಾಲೇಜುಗಳ ಆಡಳಿತ ಮಂಡಳಿ ಅಡಿಯಲ್ಲಿ ಪ್ರವೇಶ ನೀಡಿದ್ದು, ಅರ್ಹ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡಿದಂತಲ್ಲವೆ ;

(ಇ) ಬಹುಬೇಡಿಕೆಯ ಬಿ.ಎಸ್ಸಿ ನರ್ಸಿಂಗ್ ಕೋರ್ಸುಗಳ ಸೀಟುಗಳು ಈ 'ಸೀಟ್ ಬ್ಲಾಕಿಂಗ್' ನಲ್ಲಿ ತೊಡಗಿರುವ ಅಧಿಕಾರಿಗಳು ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳ ಆಡಳಿತ ಮಂಡಳಿಯ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) 'ಸೀಟ್ ಬ್ಲಾಕಿಂಗ್' ಮುಖಾಂತರ ಖಾಸಗಿ ಸಂಸ್ಥೆಗಳು ಹೊರ ರಾಜ್ಯದ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುತ್ತಿದ್ದು ಕರ್ನಾಟಕದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದ್ದು, ಇದನ್ನು ತಡೆಗಟ್ಟಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ?

## ಸಾರ್ವಜನಿಕ ಆಸ್ಪತ್ರೆಗಳಲ್ಲಿ ಆಯುಷ್ ವೈದ್ಯರ ಹುದ್ದೆಗಳನ್ನು ಸೃಜಿಸಿ, ಆಯುಷ್ ಇಲಾಖೆಯನ್ನು ಆರೋಗ್ಯ ಇಲಾಖೆಯೊಂದಿಗೆ ವಿಲೀನಗೊಳಿಸುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೩೯೬ (೪೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುಷ್ ಇಲಾಖೆಯಲ್ಲಿ ಆಯುಷ್ ಮಹಾವಿದ್ಯಾಲಯಗಳ ಆಸ್ಪತ್ರೆಗಳನ್ನು ಹೊರತುಪಡಿಸಿ ಸಾರ್ವಜನಿಕರಿಗೆ ಒಳರೋಗಿಗಳ ವ್ಯವಸ್ಥೆ ಮತ್ತು ವಿಭಾಗಗಳ ತಜ್ಞ ವೈದ್ಯರುಗಳು ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆ ಮತ್ತು ವೈದ್ಯರ, ಖಾಲಿಯಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಆಯುಷ್ ಇಲಾಖೆಯಲ್ಲಿ ಪ್ರಸ್ತುತ ೧೮೮ ಕಾಲೇಜುಗಳಿದ್ದು, ಸುಮಾರು ೧೦ ಸಾವಿರ ವಿದ್ಯಾರ್ಥಿಗಳು ವೈದ್ಯರಾಗಿ ಹೊರ ಬರುತ್ತಿದ್ದು ಇವರುಗಳಿಗೆ ಅಲ್ಪ ಪ್ರಮಾಣದಲ್ಲಿ ಆದರೂ ಉದ್ಯೋಗಾವಕಾಶ ನೀಡಲು ಎಲ್ಲಾ ಪಿಹೆಚ್‌ಸಿ, ಸಿಹೆಚ್‌ಸಿ ಗಳಲ್ಲಿ ತಾಲ್ಲೂಕು ಜಿಲ್ಲಾ ಸಾರ್ವಜನಿಕ ಆಸ್ಪತ್ರೆಗಳಲ್ಲಿ ತಜ್ಞತೆ ಆಧಾರದ ಮೇಲೆ ಆಯುಷ್ ವೈದ್ಯರು, ತಜ್ಞರುಗಳ ಹುದ್ದೆಗಳನ್ನು ಸೃಜಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ;

(ಇ) ಅಲೋಪಥಿ ಪದ್ಧತಿಗೆ ಸಮಾನವಾಗಿ ಆಯುಷ್ ಇಲಾಖೆಯು ಯಾವ ಕಾಲಮಿತಿಯೊಳಗೆ ಆಯುಷ್ ತಜ್ಞ ವೈದ್ಯರುಗಳನ್ನು ಖಾಯಂ ಆಗಿ ಸೃಜಿಸಲಾಗುವುದು ಮತ್ತು ತಜ್ಞ ವೈದ್ಯರ ಸೇವೆಗಳನ್ನು ಯಾವಾಗ ಸಾರ್ವಜನಿಕರಿಗೆ ಪೂರ್ಣಪ್ರಮಾಣದಲ್ಲಿ ಒದಗಿಸಲಾಗುವುದು ; (ಮಾಹಿತಿ ನೀಡುವುದು)

(ಈ) ಇಲಾಖೆಯಲ್ಲಿ ಕೆಲವೊಂದು ಪ್ರೋಗ್ರಾಂಗಳ ಹೆಸರಿನಲ್ಲಿ ಅನುದಾನ ದೂರುಪಯೋಗವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲ್ಲದೆ ಇದ್ದಲ್ಲಿ ವಿದ್ಯಾರ್ಥಿ ಚೇತನ ಅಂತಹ ಕಾರ್ಯಕ್ರಮಗಳು ಪ್ರತಿಯೊಬ್ಬರಿಗೂ ತಲುಪುತ್ತಿದೆಯೇ ; (ವಿವರ ನೀಡುವುದು)

(ಉ) ಸಾರ್ವಜನಿಕರಿಗೆ ಅವರವರ ಆಯ್ಕೆ ಮೇಲೆ ಅಲೋಪತಿ ಆಯುಷ್ ವೈದ್ಯಕೀಯ ಸೇವೆಯನ್ನು ಒಂದೇ ಸೂರಿನಡಿಯಲ್ಲಿ ಪಡೆಯಲು ಅನುಕೂಲವಾಗುವಂತೆ ಮತ್ತು ಆಡಳಿತ ವೆಚ್ಚವನ್ನು ನಿಯಂತ್ರಿಸಲು ಈಗಿರುವ ಆಯುಷ್ ಇಲಾಖೆಯನ್ನು ಆರೋಗ್ಯ ಇಲಾಖೆಯಲ್ಲಿ ವಿಲೀನಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ ?

## ಅಸುರಕ್ಷಿತ ಹಾಗೂ ಗುಣಮಟ್ಟದ ಪರೀಕ್ಷೆಗಳಲ್ಲಿ ವಿಫಲವಾದ ಔಷಧಿಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭಾ ಕ್ಷೇತ್ರ) :-**

೩೯೭ (೩೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಸುರಕ್ಷಿತ ಹಾಗೂ ಗುಣಮಟ್ಟದ ಪರೀಕ್ಷೆಯಲ್ಲಿ ವಿಫಲವಾಗಿರುವ ಔಷಧಗಳನ್ನು ಗುರುತಿಸಲಾಗಿದೆಯೇ ;

(ಆ) ಗುರುತಿಸಿದ್ದಲ್ಲಿ ಅವುಗಳು ಯಾವುವು ;

(ಇ) ಈ ಔಷಧಗಳನ್ನು ನಿಷೇಧಿಸುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಆಹಾರಧಾನ್ಯ ಹಾಗೂ ಪಡಿತರ ಚೀಟಿ ವಿತರಣೆ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೩೯೮ (೪೦೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳನ್ನು ಪೂರೈಸದೆ ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡ್ ಪಡೆದ ಕುಟುಂಬಗಳ ಸಂಖ್ಯೆ ಎಷ್ಟು ; ಅನಧಿಕೃತ ಬಿ.ಪಿ.ಎಲ್ ಕಾರ್ಡ್ ರದ್ದುಗೊಳಿಸಲಾಗಿದೆಯೇ ;

(ಆ) ಸರ್ಕಾರಿ ನೌಕರರು ಅನಧಿಕೃತವಾಗಿ ಬಿ.ಪಿ.ಎಲ್ ಕಾರ್ಡ್ ಪಡೆದಿದ್ದಾರೆಯೇ ; ಅಂಥವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಅನಧಿಕೃತವಾಗಿ ಪಡಿತರ ಚೀಟಿ ಪಡೆದುಕೊಂಡವರು ಸ್ವಯಂ ಪ್ರೇರಿತರಾಗಿ ಕಾರ್ಡ್ ವಾಪಸ್ಸು ನೀಡಲು ಅವಕಾಶ ನೀಡಲಾಗಿದೆಯೇ ;

(ಈ) ಆಹಾರಧಾನ್ಯ ಹಾಗೂ ಪಡಿತರ ವಿತರಣಾ ವ್ಯವಸ್ಥೆಯ ಮೇಲೆ ನಿಗಾ ಇಡಲು ತಳಹಂತದಲ್ಲಿ ಯಾವ ರೀತಿ ವ್ಯವಸ್ಥೆ ಸೃಜಿಸಲಾಗಿದೆ ; ಇದರಲ್ಲಿ ಸಾರ್ವಜನಿಕರ ಪಾತ್ರವೇನು ;

(ಉ) ರೈತರಿಂದ ಬೆಂಬಲ ಬೆಲೆಯಡಿಯಲ್ಲಿ ಯಾವ ಯಾವ ಆಹಾರ ಧಾನ್ಯಗಳನ್ನು ಖರೀದಿಸಲಾಗುತ್ತಿದೆ ;

(ಊ) ಒಂದು ರಾಷ್ಟ್ರ ಒಂದು ಪಡಿತರ ಚೀಟಿಯಡಿಯಲ್ಲಿ ರಾಜ್ಯದಲ್ಲಿ ಬೇರೆ ರಾಜ್ಯದ ಎಷ್ಟು ಜನ ಆಹಾರಧಾನ್ಯ ಪಡೆಯುತ್ತಿದ್ದಾರೆ ;

(ಋ) ಆದೇ ರೀತಿ ಬೇರೆ ರಾಜ್ಯಗಳಲ್ಲಿ ಈ ಯೋಜನೆಯಡಿ ಪಡಿತರ ಪಡೆಯುತ್ತಿರುವ ಕನ್ನಡಿಗರ ಸಂಖ್ಯೆ ಎಷ್ಟು ? (ರಾಜ್ಯವಾರು ಮಾಹಿತಿ ನೀಡುವುದು)

## ವಿಶ್ವ ವಿದ್ಯಾನಿಲಯಗಳ ಸ್ಥಾಪನೆ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೩೯೯ (೪೦೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೮ ರಿಂದ ೨೦೨೩ನೇ ಸಾಲಿನವರೆಗೆ ಎಷ್ಟು ವಿಶ್ವ ವಿದ್ಯಾಲಯಗಳು ಸ್ಥಾಪಿತವಾಗಿವೆ ; ಸದರಿ ವಿಶ್ವವಿದ್ಯಾಲಯಗಳಿಗೆ ಅನುದಾನ ನೀಡಲಾಗುತ್ತಿದೆಯೇ ;

(ಆ) ಈ ಹಿಂದೆ ಇದ್ದ ವಿದ್ಯಾಲಯುಗಳನ್ನಲ್ಲದೇ ಹೊಸ ವಿಶ್ವ ವಿದ್ಯಾಲಯಗಳ ಸ್ಥಾಪನೆಯ ಅಗತ್ಯತೆ ಇದೆಯೇ ; ಇದ್ದಲ್ಲಿ, ಅಗತ್ಯತೆಗೆ ಕಾರಣಗಳೇನು ;

(ಇ) ಕಸ್ತೂರ್ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಅವುಗಳ ಅಭಿವೃದ್ಧಿಗೆ ಎಷ್ಟು ಅನುದಾನ ಒದಗಿಸಲಾಗುತ್ತಿದೆ ?

## ಶಿಕ್ಷಕರ ನೇಮಕಾತಿ ಮಾಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೦೦ (೪೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಶಿಕ್ಷಕರ ನೇಮಕಾತಿ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ವರ್ಷದಲ್ಲಿ ಎಷ್ಟು ಬಾರಿ ನಡೆಸಲಾಗುತ್ತದೆ ;

(ಇ) ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ, ಶಾಲೆಗಳಲ್ಲಿ ದೈಹಿಕ, ಸಾಂಸ್ಕೃತಿಕ ಶಿಕ್ಷಕರ ನೇಮಕಾತಿ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವಾಗ ಮಾಡಲಾಗುವುದು ?

## ಬಿಸಿಯೂಟ ಯೋಜನೆ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೦೧ (೪೦೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ೧ ರಿಂದ ೮ನೇ ತರಗತಿಯವರೆಗೆ ಓದುತ್ತಿರುವ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಚಿಕ್ಕಿ ಪದಾರ್ಥದಿಂದ ಮಕ್ಕಳ

ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲ್ಲಿಯವರೆಗೆ ಎಷ್ಟು ಮಕ್ಕಳಿಗೆ ಚಿಕ್ಕಿ ತಿನಿಸು ನೀಡಲಾಗಿದೆ ;

(ಆ) ಸರ್ಕಾರಿ ಶಾಲೆಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಬಿಸಿಯೂಟ ಕಾರ್ಯಕ್ರಮ ನೀಡಲಾಗುತ್ತಿದೆ ; ಇದರಲ್ಲಿ ಎಷ್ಟು ಸಂಖ್ಯೆ ಮಕ್ಕಳಿಗೆ ಮೊಟ್ಟೆ ನೀಡಲಾಗುತ್ತಿದೆ ;

(ಇ) ಬಾಳೆಹಣ್ಣು ಮತ್ತು ಮೊಟ್ಟೆ ಎರಡನ್ನೂ ಸೇವಿಸುವ ಮಕ್ಕಳ ಸಂಖ್ಯೆ ಎಷ್ಟು ?

## ಪ್ರೌಢಶಾಲೆ ಮತ್ತು ಪದವಿ ಪೂರ್ವಕಾಲೇಜುಗಳ ಬೋಧಕ ಮತ್ತು ಬೋಧಕೇತರರ ಬಾಕಿ ವೈದ್ಯಕೀಯ ಮರುಪಾವತಿ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೪೦೨ (೩೬೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ– ಬೋಧಕೇತರ ನೌಕರ ಮತ್ತು ಇವರ ಅವಲಂಬಿತರ ವೈದ್ಯಕೀಯ ವೆಚ್ಚ ಮರು ಪಾವತಿ ಮಾಡಲು ಸರ್ಕಾರ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಕಾರಣಗಳೇನು ;

(ಆ) ಈ ಬೋಧಕ/ಬೋಧಕೇತರ ನೌಕರರಿಗೆ ವೈದ್ಯಕೀಯ ವೆಚ್ಚವನ್ನು ಮರು ಪಾವತಿ ಮಾಡಲು ಎಷ್ಟು ಮಂದಿ ನೌಕರರಿಗೆ ಸರ್ಕಾರ ಇನ್ನು ಬಾಕಿ ಉಳಿಸಿಕೊಂಡಿದೆ ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರ ಈ ಪ್ರೌಢಶಾಲೆ ಮತ್ತು ಪದವಿ ಪೂರ್ವ ಬೋಧಕ-ಬೋಧಕೇತರ ನೌಕರರ ಬಾಕಿ ವೈದ್ಯಕೀಯ ಮರು ಪಾವತಿಯ ಹಣವನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುತ್ತಿದೆ ?

## ಬೀದರ್ ಜಿಲ್ಲೆಯ ಹೊಸ ಪಡಿತರ ಚೀಟಿ ಅರ್ಜಿ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೩ (೩೯೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ೨ ತಿಂಗಳುಗಳಿಂದ ಹೊಸದಾಗಿ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಅರ್ಜಿ ಸಲ್ಲಿಸಿದವರಲ್ಲಿ ಎಷ್ಟು ಜನರಿಗೆ ಹೊಸದಾಗಿ ಪಡಿತರ ಚೀಟಿ ವಿತರಿಸಲಾಗಿದೆ; ವಿತರಿಸಲಾದ ಪಡಿತರ ಚೀಟಿ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಹೊಸದಾಗಿ ಹೆಸರು ಸೇರ್ಪಡೆ ಮತ್ತು ತಿದ್ದುಪಡಿಗೆ ಎಷ್ಟು ಅರ್ಜಿ ಸಲ್ಲಿಕೆಯಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸಿಬ್ಬಂದಿ ಕೊರತೆಯಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೪ (೩೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಡಯಾಲಿಸಿಸ್ ಸೌಲಭ್ಯ ಹೊಂದಿರುವ ತಾಲ್ಲೂಕು ಆಸ್ಪತ್ರೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲಾ ವ್ಯಾಪ್ತಿಯ ಶಾಲಾ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೫ (೩೯೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಖಟಕಚಿಂಚೋಳಿ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕಂಬೈನ್ಡ್ ಕ್ಲಾಸ್ ಹಾಗೂ ಮೂಲಭೂತ ಸೌಕರ್ಯವಿಲ್ಲದೆ ವಿದ್ಯಾರ್ಥಿಗಳ ಶಿಕ್ಷಣ ಕಲಿಕೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ಒದಗಿಸುವುದು)

(ಇ) ಈ ಜಿಲ್ಲೆಯ ವ್ಯಾಪ್ತಿಯಲ್ಲಿ ಸರ್ಕಾರಿ ಶಾಲೆಗಳು ಶಿಥಿಲಾವಸ್ಥೆಯಲ್ಲಿದ್ದು ಶಿಥಿಲಾ ವಸ್ಥೆಯಲ್ಲಿರುವ ಕಟ್ಟಡ ನವೀಕರಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಸೇವೆಯನ್ನು ಖಾಯಂಗೊಳಿಸುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೬ (೩೯೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ಹೆಸ್ಕಾಂಗಳಲ್ಲಿ ಅರೆಕಾಲಿಕ ಸಿಬ್ಬಂದಿಗಳು ಶುಚಿಗಾರರಾಗಿ ಪ್ರಸ್ತುತ ಕೆಲಸ ನಿರ್ವಹಿಸುತ್ತಿರುವ ಸಂಖ್ಯೆ ೬೪೨ ಇದ್ದು, ಇದರಲ್ಲಿ ಖಾಯಂಗೊಳಿಸಲು ೫೦೪ ಮಂದಿ ಅರ್ಹರಿದ್ದು, ಈಗಾಗಲೇ ಇಲಾಖೆಯಲ್ಲಿ ೩೦೦ ಮೂಂಜೂರಾತಿ ಹುದ್ದೆಗಳು ಇರುವುದು ನಿಜವೇ ;

(ಆ) ಸದರಿಂಯುವರುಗಳ ದಿನಾಂಕ:೨೦.೧೨.೧೯೮೪ರಲ್ಲಿ ರೂ.೫೦/-ಗಳ ವೇತನದಲ್ಲಿ ನೇಮಿಸಿಕೊಂಡು ಪ್ರಸ್ತುತ ದುಡಿಯುತ್ತಾ ಬಂದಿದ್ದು ಈಗ ಇವರಿಗೆ ಮಾಸಿಕ ಕನಿಷ್ಠ ರೂ.೧೬.೩೭೦/-ಗಳನ್ನು ಪಡೆಯುತ್ತಿದ್ದು, ಸದರಿ ಸಿಬ್ಬಂದಿಗೆ ಯಾವುದೇ ವಿಮೆ ಸೌಲಭ್ಯ, ವ್ಯದ್ಯಕೀಯ ಸೌಲಭ್ಯ ಹಾಗೂ ವೇತನ ಪರಿಷ್ಕರಿಸದೆ ಮತ್ತು ಸೇವೆ ಖಾಯಂ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಖಾಯಂ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ಒದಗಿಸುವುದು)

(ಈ) ಇವರನ್ನು ಖಾಯಂ ಮಾಡಲು ಇಲಾಖೆಯ ಸಮಿತಿಯು ತೀರ್ಮಾನ ಕೈಗೊಂಡರೂ ಇನ್ನೂ ಖಾಯಂ ಮಾಡದೇ ಇರಲು ಕಾರಣವೇನು ; ಯಾವಾಗ ಸೇವೆ ಖಾಯಂ ಮಾಡಲಾಗುವುದು ? (ವಿವರ ಒದಗಿಸುವುದು)

## ಶಾಲಾ ಕೊಠಡಿ ಶಿಥಿಲಾವಸ್ಥೆಯಲ್ಲಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೭ (೩೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ, ಬಾಲ್ಕಿ ತಾಲ್ಲೂಕಿನ, ಹುಮನಾಬಾದ ಗ್ರಾಮದಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಕೊಠಡಿ ಪೂರ್ತಿ ಶಿಥಿಲಾಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಈ ಶಾಲೆಯ ಕೊಠಡಿ ದುರಸ್ತಿ ಮಾಡದೇ ಇರಲು ಕಾರಣವೇನು ;

(ಇ) ಈ ಶಾಲೆ ಕಟ್ಟಡ ನವೀಕರಣಕ್ಕೆ ತುರ್ತಾಗಿ ಸರ್ಕಾರ ಕ್ರಮ ಕೈಗೊಳ್ಳುವುದೇ ? (ಮಾಹಿತಿ ನೀಡುವುದು)

## ಬಾಣಂತಿಯರು ಚಿಕಿತ್ಸೆ ಫಲಿಸದೆ ಸಾವನ್ನಪ್ಪಿದರ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೪೦೮ (೪೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಳೆದ ಎರಡು ವರ್ಷಗಳಲ್ಲಿ ಚಿಕಿತ್ಸೆ ಫಲಿಸದೆ ಸಾವನ್ನಪ್ಪಿರುವ ಬಾಣಂತಿಯರ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಸದರಿಯವರ ಕುಟುಂಬ ವರ್ಗದವರಿಗೆ ಸರ್ಕಾರದ ವತಿಯಿಂದ ಸಹಾಯಧನವನ್ನು ನೀಡಲಾಗಿದೆಯೇ ? (ಮೊತ್ತದ ವಿವರ ಒದಗಿಸುವುದು)

## ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಭರ್ತಿ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :–**

೪೦೯ (೪೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಸದರಿ ಹುದ್ದೆಗಳ ಭರ್ತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಇಲ್ಲದಿದ್ದಲ್ಲಿ, ಕ್ರಮ ಕೈಗೊಳ್ಳಲಾಗುವುದು ಯಾವಾಗ ? (ವಿವರ ನೀಡುವುದು)

## ಖಾಲಿ ಇರುವ ಹುದ್ದೆಗಳ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೪೧೦ (೪೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ಪಡಿತರ ಚೀಟಿ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೪೧೧ (೪೪೫) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೨೩ರ ಸೆಪ್ಟೆಂಬರ್ ನಂತರ ಹೊಸ ಪಡಿತರ ಚೀಟಿ ಪಡೆಯಲು ಅರ್ಜಿ ಸಲ್ಲಿಸಿದವರಿಗೆ ಪಡಿತರ ಚೀಟಿ ನೀಡದಿರಲು ಕಾರಣವೇನು ; ಹೊಸ ಕಾರ್ಡ್ ವಿತರಣೆಗೆ ಸರಕಾರ ಕೈಗೊಂಡ ಕ್ರಮಗಳೇನು ;

(ಆ) ಹೊಸ ಪಡಿತರ ಕಾರ್ಡಿಗಾಗಿ ಜನರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ ಕಾರ್ಡ್ ವಿತರಣೆಗೆ ಅನುಮೋದನೆ ನೀಡದಿರಲು ಕಾರಣವೇನು ?

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಪಡಿತರ ಅಂಗಡಿಗಳ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೪೧೨ (೪೪೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಷ್ಟು ಪಡಿತರ ಅಂಗಡಿಗಳಿವೆ ;

(ಆ) ಈ ಭಾಗದಲ್ಲಿ ಪಡಿತರ ಅಂಗಡಿಗಳ ಹೆಚ್ಚಳಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಬೇಡಿಕೆ ಈಡೇರಿಸಲು ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O228/500 ಪ್ರತಿಗಳು/02-03-2025